ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450


Mallammanudi Regional News Paper | Editor: Ramesh Reddy | RNI NO:KARKAN/2011/48371


VOLUME - 13 ಸಂಪುಟ–13 | ISSUE - 71 ಸಂಚಿಕೆ– 71 | PAGE- 8 ಪುಟ–8 | ಬುಧುವಾರ 23.04.2025 | RS.2/- ಬೆಲೆ 2/–

# ಉಗ್ರರ ಗುಂಡಿನ ದಾಳಿಗೆ
## ರಾಜ್ಯದ ಇಬ್ಬರೂ ಸೇರಿ ೩೦ ಜನರ ಸಾವು

ಮಲ್ಲಮ್ಮನುಡಿವಾರ್ತೆ ಶ್ರೀನಗರ,ಏ.22: ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ಪ್ರವಾಸಿಗರನ್ನುಗುರಿಯಾಗಿರಿಸಿಕೊಂಡು ಭಯೋತ್ಪಾದಕರು ನಡೆಸಿದ ಗುಂಡಿನ ದಾಳಿಯಲ್ಲಿ ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಹಾಗೂ ಮಂಜುನಾಥ್ ರಾವ್ ಹಾಗೂ ಹಾವೇರಿ ಜಿಲ್ಲೆಯ ನಿವಾಸಿ ಭರತ್ ಭೂಷಣ್ ಸೇರಿದಂತೆ 30 ಜನರು ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.

ಉಗ್ರರ ಪೈಶಾಚಿಕ ಕೃತ್ಯಕ್ಕೆ 20ಕ್ಕೂ ಮಂದಿ ಗಾಯಗೊಂಡಿ–ದ್ದಾರೆ. ಇವರಲ್ಲಿ ಹಲವರ ಸ್ಥಿತಿ ಗಂಭೀರವಾಗಿದೆ. ಸಾವಿನ ಸಂಖ್ಯೆ ಇನ್ನಷ್ಟು ಏರಿಕೆಯಾಗುವ ಭೀತಿ ಎದುರಾಗಿದೆ.





ಮಹಿಳಾ ಪ್ರವಾಸಿಗರಿದ್ದರೂ ಅವರ ಮೇಲೆ ಯಾವುದೇ ದಾಳಿ ನಡೆಸಿಲ್ಲ. ಮಾತನಾಡಿಸುವ ನೆಪದಲ್ಲಿ ಬಂದು ಉಗ್ರರು ಏಕಾಏಕಿ ಗುಂಡಿನ ಸುರಿಮಳೆಗರೆದಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಮಧ್ಯಾಹ್ನದ ಸಮಯದಲ್ಲಿ ಪಹಲ್ಗಾಮ್‌ನ ಬೈಸರನ್ ಹುಲ್ಲುಗಾವಲು ಪ್ರದೇಶದಲ್ಲಿ ಕುದುರೆ ಮೇಲೆ ಕುಳಿತು ಪ್ರವಾಸಿಗರು ಸಮಯ ಕಳೆಯುತ್ತಿದ್ದ ವೇಳೆ ಸೇನಾ ಸಮವಸ್ತ್ರಧರಿಸಿ ಬಂದ ಭಯೋತ್ಪಾದಕರು, ಪ್ರವಾಸಿಗರನ್ನು ಮಾತನಾಡಿಸುವ ನೆಪದಲ್ಲಿ ಬಂದು ಗುಂಡು ಹಾರಿಸಿದ್ದಾರೆ. ಗುಂಡಿನ ದಾಳಿಗೆ ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ್ ರಾವ್ ಬಲಿಯಾಗಿದ್ದಾರೆ.

ಉಗ್ರರ ಭೀಕರ ದಾಳಿಯಿಂದಾಗಿ ಆತಂಕದವಾತಾವರಣನಿರ್ಮಾಣವಾಗಿದೆ. ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿರುವುದನ್ನು ಗಮನಿಸಿ

(2ನೇ ಪುಟ ನೋಡಿ)

# ಡಾ. ಚನ್ನಬಸವ ಪಟ್ಟದ್ದೇವರ ಆದರ್ಶ ನಮ್ಮೆಲ್ಲರಿಗೂ ಮಾದರಿ: ರಾಜ್ಯಪಾಲ ಥಾವರಚಂದ ಗೆಹ್ಲೋಟ್



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಏ.22: ಲಿಂಗೈಕ್ಯ ಡಾ. ಚನ್ನಬಸವ ಪಟ್ಟದ್ದೇವರ ಆದರ್ಶ ನಮ್ಮೆಲ್ಲರಿಗೂ ಮಾದರಿಯಾಗಿದೆ ಎಂದು ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅಭಿಪ್ರಾಯಪಟ್ಟರು.

ಪಟ್ಟಣದ ಚನ್ನಬಸವಾಶ್ರಮದಲ್ಲಿ ಲಿಂ.ಡಾ.ಚನ್ನಬಸವ ಪಟ್ಟದ್ದೇವರ 26ನೇ ಸ್ಮರಣೋತ್ಸವ ನಿಮಿತ್ಯ ನಡೆದ ವಚನ ಜಾತ್ರೆ 2025ರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಈ ಭಾಗದ ನಡೆದಾಡುವದೇವರೆಂದೇ ಖ್ಯಾತರಾದ ಲಿಂ. ಡಾ. ಚನ್ನಬಸವ ಪಟ್ಟದ್ದೇವರು, ಸಾಮಾಜಿಕ, ಶೈಕ್ಷಣಿಕ ರಂಗದಲ್ಲಿ ದೀನ, ದಲಿತರ ಉದ್ಧಾರಕ್ಕಾಗಿ ಹಲವಾರು ಕಾರ್ಯಗಳನ್ನು ಮಾಡಿ

(2ನೇ ಪುಟ ನೋಡಿ)

## ಪ್ರಶಸ್ತಿ ಪುರಸ್ಕಾರ

ಇದೇವೇಳೆ ಮೋಟಗಿ ಮಠ ಅಥಣಿಯ ಶ್ರೀ ಪ್ರಭು ಚನ್ನಬಸವ ಸ್ವಾಮಿಗಳಿಗೆ ಡಾ. ಚನ್ನಬಸವ ಪಟ್ಟದ್ದೇವರ ಸಾಹಿತ್ಯ ಪ್ರಶಸ್ತಿ, ಲೋಕೋಪಯೋಗಿ ಇಲಾಖೆ ಬೆಂಗಳೂರಿನ ಆಂತರಿಕ ಆರ್ಥಿಕ ಸಲಹೆಗಾರ ಸೋಮನಾಥ ಪಟ್ನೆಯವರಿಗೆ ಡಾ. ಚನ್ನಬಸವ

(2ನೇ ಪುಟ ನೋಡಿ)

# ಉಗ್ರರ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳುತ್ತೇವೆ:ಪ್ರಧಾನಿ ಮೋದಿ

ಮಲ್ಲಮ್ಮನುಡಿ ವಾರ್ತೆ ನವದೆಹಲಿ: ಏ.22:ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿನಡೆದಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ನಾಯಕರು ಖಂಡಿಸಿದ್ದಾರೆ.

ಈ ದಾಳಿ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಈ ಹೇಯಕೃತ್ಯದಹಿಂದಿರುವವರವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

"ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿನಡೆದಭಯೋತ್ಪಾದಕ ದಾಳಿಯನ್ನು ನಾನು ಬಲವಾಗಿ ಖಂಡಿಸುತ್ತೇನೆ.ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ



ಸೂಚಿಸುತ್ತೇನೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ. ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ನೆರವು ನೀಡಲಾಗುತ್ತಿದೆ. ಈ ಹೇಯ ಕೃತ್ಯದ ಹಿಂದಿರುವ ಉಗ್ರರನ್ನು ಸುಮ್ಮನೆ ಬಿಡಲ್ಲ. ಅವರ ದುಷ್ಟ ಅಜೆಂಡಾ ಎಂದಿಗೂ ಯಶಸ್ವಿಯಾಗುವುದಿಲ್ಲ ಎಂದಿದ್ದಾರೆ.

ಅಮಾಯಕ ನಾಗರಿಕರ ಮೇಲಿನ ದಾಳಿ ಹೇಡಿತನ ಮತ್ತು ಅತ್ಯಂತ ಖಂಡನೀಯವಾದದ್ದು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಟ್ವೀಟ್ ಮಾಡಿದ್ದಾರೆ.

ಭಯೋತ್ಪಾದನೆ ವಿರುದ್ಧ ಇಡೀ ದೇಶ ಒಗ್ಗಟ್ಟಾಗಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಪರಿಸ್ಥಿತಿ ಸಾಮಾನ್ಯವಾಗಿದೆ ಎಂದು ಪೊಳ್ಳು ಹೇಳಿಕೆ ನೀಡುವ ಬದಲು, ಸರ್ಕಾರ ವಿಷ್ಯದಲ್ಲಿ ಇಂತಹ ಅಮಾನುಷ ಘಟನೆಗಳು ಸಂಭವಿಸದಂತೆ ಮತ್ತು ಅಮಾಯಕ ಭಾರತೀಯರು ಈ ರೀತಿ ಪ್ರಾಣ ಕಳೆದುಕೊಳ್ಳದಂತೆ ದೃಢವಾದ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ವಿಪಕ್ಷ ನಾಯಕ ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ.

# ಉಗ್ರರ ದಾಳಿಗೆ ಕನ್ನಡಿಗ ಬಲಿ ಸಚಿವ ಪ್ರಿಯಾಂಕ್ ಖರ್ಗೆ ಶೋಕ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.22:ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇಂದು ಭಯೋತ್ಪಾದಕರ ದಾಳಿಯಲ್ಲಿ ಶಿವಮೊಗ್ಗ ಜಿಲ್ಲೆಯ ಮಂಜುನಾಥ್ ಎಂಬುವವರು ಮೃತಪಟ್ಟಿದ್ದು,ಹಲವು ಪ್ರವಾಸಿಗರು ಗಾಯಗೊಂಡಿರುವ ವಿಷಯ ತಿಳಿದು ಅತೀವ ದುಃಖವಾಯಿತು ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಶೋಕ ವ್ಯಕ್ತಪಡಿಸಿದ್ದಾರೆ.

ಕಾಶ್ಮೀರದಲ್ಲಿ ಸಿಲುಕಿರುವ ಕರ್ನಾಟಕದ ಪ್ರವಾಸಿಗರ ರಕ್ಷಣೆಗೆ ಈಗಾಗಲೇ ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದು, ಅವರಿಗೆ ನೆರವಾಗಲು ಅಧಿಕಾರಿಗಳ ತಂಡವನ್ನು ಸ್ಥಳಕ್ಕೆ ಕಳುಹಿಸುವ ವ್ಯವಸ್ಥೆ ಮಾಡಿದ್ದಾರೆ.ಮೃತರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬ ವರ್ಗದವರಿಗೆ ನೋವು ಭರಿಸುವ ಶಕ್ತಿ ಸಿಗಲಿ ಎಂದು ಆಶಿಸುತ್ತೇನೆ ಎಂದಿದ್ದಾರೆ.

# ನಾಗರಿಕ ಸೇವಾ ಪರೀಕ್ಷೆ ಫಲಿತಾಂಶ ಪ್ರಕಟ; ಶಕ್ತಿ ದುಬೆ ಪ್ರಥಮ




ಮಲ್ಲಮ್ಮನುಡಿವಾರ್ತೆನವದೆಹಲಿ:ಏ.22: 2024ನೇ ಸಾಲಿನ ನಾಗರಿಕ ಸೇವಾ ಪರೀಕ್ಷೆ ಫಲಿತಾಂಶವನ್ನು ಕೇಂದ್ರ ಲೋಕಸೇವಾಆಯೋಗಮಂಗಳವಾರ ಪ್ರಕಟಿಸಿದ್ದು, ಶಕ್ತಿ ದುಬೆ ಮೊದಲ ರ‍್ಯಾಂಕ್ ಪಡೆದಿದ್ದಾರೆ.ದುಬೆ ಅವರು ಅಲಹಾಬಾದ್ ವಿಶ್ವವಿದ್ಯಾನಿಲಯದಿಂದ ಬಯೋಕೆಮಿಸ್ಟ್ರಿಯಲ್ಲಿ ಪದವಿ ಪಡೆದಿದ್ದಾರೆ. ಅವರು ರಾಜ್ಯಶಾಸ್ತ್ರ ಮತ್ತು ಅಂತಾರಾಷ್ಟ್ರೀಯ ಸಂಬಂಧ ವಿಷಯವನ್ನು ಐಚ್ಛಿಕ

(2ನೇ ಪುಟ ನೋಡಿ)

# ಕಳ್ಳರ ಬಂಧನ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:ಏ.22: ತಾಲೂಕಿನ ಮನ್ನಾಖೇಳ್ಳಿ ಗ್ರಾಮದ ಮುಖಾಂತರ ಅತೀ ವೇಗವಾಗಿ ನಂಬರ್ ಪ್ಲೇಟ್ ಇಲ್ಲದೆ ದ್ವಿಚಕ್ರವಾಹನ ಅತೀವೇಗವಾಗಿ ಚಲಾಯಿಸಿಕೊಂಡು ಹೋಗುತ್ತಿರುವ ಕಳ್ಳರನ್ನು ಬಂಧಿಸುವಲ್ಲಿ ಮನ್ನಾಖೇಳಿ ಪಿಎಸ್ಐ ಮಹೇಂದ್ರಕುಮಾರ ಮತ್ತು ಸಿಬ್ಬಂದಿಗಳು ಯಶಸ್ವಿಯಾಗಿದ್ದಾರೆ.

ಬೆಳ್ಳಿ, ಬಂಗಾರದ, ವಿವಿಧ ಚೈನ್ ಗಳು ಒಟ್ಟು 1,80,000 ಸಾವಿರ ರೂಪಾಯಿ ಬೆಲೆ ಬಾಳುವ ವಸ್ತುಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಅರೋಪಿಗಳನ್ನು ವಶಕ್ಕೆ ತೆಗೆದುಕೊಂಡು ಮನ್ನಾಖೇಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

# ಕಾನೂನನ್ನು ಗೌರವಿಸಿ: ನ್ಯಾ, ಮಹಾಂತೇಶ ದರಗದ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಏ.22: ಸಮಾಜವನ್ನು ಪರಿವರ್ತನೆ ಮಾಡಲು ಯುವ ಜನತೆ ಮಹತ್ವಾಕಾಂಕ್ಷೆ, ಗುರಿ ಇಟ್ಟುಕೊಂಡು ಮುನ್ನಡೆಯಬೇಕು. ಜೀವನದ ಮಹತ್ತರ ಘಟ್ಟವನ್ನು ತಲುಪಲು ಮೊದಲು ನಕಾರಾತ್ಮಕ

(2ನೇ ಪುಟ ನೋಡಿ)

# ರಸ್ತೆಗಳ ತ್ವರಿತ ಅಭಿವೃದ್ಧಿಗೆ ಸಚಿವ ದರ್ಶನಾಪುರ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಏ:22: ಸಿಂದಗಿ–ಕೊಡಂಗಲ್ ರಾಷ್ಟ್ರೀಯ ಹೆದ್ದಾರಿಯಾಗಿ ಉನ್ನತೀಕರಣ,ಭೀಗುಡಿ–ವಿಭೂತಿಹಳ್ಳಿ ಬೈಪಾಸ್ ರಸ್ತೆ ನಿರ್ಮಾಣ ಸೇರಿದಂತೆ ಜಿಲ್ಲೆಯಿಂದ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಗಳಿಗೆ ಅಂಡರ್ ಪಾಸ್ ನಿರ್ಮಿಸುವ ಕುರಿತಂತೆ

(2ನೇ ಪುಟ ನೋಡಿ)

# ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿ ವಿಜೃಂಭಣೆಯಿಂದ ಆಚರಿಸೋಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ: ಏ.22:ಸಾಂಸ್ಕೃತಿಕನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಏ.30 ರಂದು ಜಿಲ್ಲೆಯಲ್ಲಿ ಅತ್ಯಂತ ವಿಜೃಂಭಣೆಯಿಂದ ಆಚರಿಸೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏ.30 ರಂದು ನಡೆಯುವ ಬಸವ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಏಪ್ರಿಲ್.30 ರಂದು ಬೆಳಿಗ್ಗೆ 8: 30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಬಸವೇಶ್ವರ ವೃತ್ತದಲ್ಲಿರುವ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮತ್ತು ಪೂಜೆ ಸಲ್ಲಿಸಲಾಗುವುದು.ನಂತರ ಮೆರವಣಿಗೆಗೆ ನಡೆಯಲಿದೆ ಮತ್ತು ಸಂಜೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಹಾಗೂ ಡಿಜೆ ಬಳಕೆಗೆ ಸಂಬಂಧಿಸಿದಂತೆ ಪೋಲಿಸ್ ಇಲಾಖೆಯಿಂದ ಅನುಮತಿ ಪಡೆಯಬೇಕು ಅಂದು ಎಲ್ಲಾ ಸರ್ಕಾರಿ ಮತ್ತು ಅರೆ ಸರ್ಕಾರಿ ಕಛೇರಿ, ಶಾಲಾ–ಕಾಲೇಜುಗಳಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಕಡ್ಡಾಯವಾಗಿ ಪೂಜೆ ಸಲ್ಲಿಸಬೇಕೆಂದರು. ಪೋಲಿಸ್ ಇಲಾಖೆ ವತಿಯಿಂದ ಬಂದೋಬಸ್ತ್ ನೀಡಲಾಗುವುದು ಎಂದು ತಿಳಿಸಿದರು.


ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರಾದ ಜೈರಾಜ್ ಖಂಡ್ರೆ ಅವರು ಮಾತನಾಡಿ, ನಾವು ಬಸವ ಜಯಂತಿಯನ್ನು ಏಪ್ರಿಲ್ 28,29 ಮತ್ತು 30 ರವರೆಗೆ ಆಚರಿಸಲು ನಿರ್ಧಾರ ಕೈಗೊಳ್ಳಲಾಗಿದೆ, ಏ.28 ರಂದು ಬೆಳಿಗ್ಗೆ ಗುಂಪಾದಿಂದ

(2ನೇ ಪುಟ ನೋಡಿ)

# 1 ಲಕ್ಷ ರೂ. ದಾಟಿದ ಚಿನ್ನದ ಬೆಲೆ: ಸಾರ್ವಕಾಲಿಕ ದಾಖಲೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.22:ಅಮೆರಿಕ–ಚೀನಾ ವ್ಯಾಪಾರ ಸಮರ ನಡೆಯುತ್ತಿರುವ ಹೊತ್ತಲ್ಲೇ 10 ಗ್ರಾಂ ಚಿನ್ನದ ಬೆಲೆ 1 ಲಕ್ಷ ರೂ. ದಾಟಿ ಸಾರ್ವಕಾಲಿಕ ದಾಖಲೆ ಬರೆದಿದೆ.

ಚಿನಿವಾರ ಪೇಟೆಯಲ್ಲಿ 10 ಗ್ರಾಂ ಚಿನ್ನದ ಬೆಲೆ 1 ಲಕ್ಷ ರೂ. ದಾಟಿದೆ. 24 ಕ್ಯಾರೆಟ್ ಚಿನ್ನದ ಬೆಲೆ ಮಂಗಳವಾರ 1 ಗ್ರಾಂಗೆ 10,135 ರೂ. ತಲುಪಿದ್ದು, 10 ಗ್ರಾಂಗೆ 1,01,135 ರೂ.ಗೆ ಏರಿಕೆ–ಯಾಗಿದೆ. ಇದೇ ಮೊದಲ ಬಾರಿಗೆ ಭಾರತದಲ್ಲಿ ಚಿನ್ನದ ಬೆಲೆ 1 ಲಕ್ಷ



ರೂ. ದಾಟಿದೆ. 22 ಕ್ಯಾರೆಟ್ ಚಿನ್ನದ ಬೆಲೆ 1 ಗ್ರಾಂಗೆ 9,290 ರೂ.ಗೆ ಏರಿಕೆಯಾಗಿದ್ದು, 10 ಗ್ರಾಂ ಚಿನ್ನದ ಬೆಲೆ 92,900 ರೂ. ತಲುಪಿದೆ.

ಇತರೆ ದೇಶಗಳ ಮೇಲೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಸುಂಕ ವಿಧಿಸಿದ್ದೇ ಚಿನ್ನದ ಬೆಲೆ ದಾಖಲೆಯ ಏರಿಕೆಗೆ ಕಾರಣ ಎನ್ನಲಾಗಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಬೆಲೆ ಏರಿಕೆ ಕಂಡಿದೆ. ಹೀಗಾಗಿ, ಸುರಕ್ಷಿತ ಹೂಡಿಕೆಗಾಗಿ ಹೂಡಿಕೆದಾರರು ಚಿನ್ನದತ್ತ ಆಕರ್ಷಿತರಾಗಿದ್ದಾರೆ.

ಅಕ್ಷಯ ತೃತೀಯಕ್ಕೆ ಕೆಲವೇ ದಿನಗಳು ಬಾಕಿ ಇರುವ ಹೊತ್ತಲ್ಲೇ ಚಿನ್ನದ ಬೆಲೆ ಒಂದು ಲಕ್ಷ ದಾಟಿರುವುದು ಆಭರಣ ಪ್ರಿಯರಿಗೆ ನಿರಾಸೆ ಮೂಡಿಸಿದೆ.

## ಒಂದನೇ ಪುಟದಿಂದ

## ರಾಜ್ಯಪಾಲ ಥಾವರಚಂದ ಗೆಹ್ಲೋಟ್

ಜನಮಾನಸದಲ್ಲಿ ಉಳಿದಿದ್ದಾರೆ. ಅವರ ತತ್ವಾದರ್ಶಗಳು ನಮ್ಮೆಲ್ಲರಿಗೂ ಮಾದರಿಯಾಗಿವೆ ಎಂದು ಹೇಳಿದರು.

ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ದಿವ್ಯ ಸನ್ನಿಧಾನ ವಹಿಸಿ ಮಾತನಾಡಿದರು. ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ನೇತೃತ್ವವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಅಥಣಿಯ ಪ್ರಭು ಚನ್ನಬಸವ ಸ್ವಾಮಿಗಳು, ಲೋಕ ಸಭಾ ಸದಸ್ಯ ಸಾಗರ ಈಶ್ವರಖಂಡ್ರೆ, ಮಾಜಿ ಸಚಿವ ರಾಜಶೇಖರ ಪಾಟಿಲ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ನಾರಂಜಾ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಡಿ.ಕೆ.ಸಿದ್ರಾಮ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಎಸ್.ಪಿ. ಪ್ರದೀಪ ಗುಂಟಿ, ಡಿವಾಯ್‌ಎಸ್‌ಪಿ ಶಿವಾನಂದ ಪವಾಡಶೆಟ್ಟಿ, ಭಾರತೀಯ ಬಸವ ಬಳಗದ ಶಕುಂತಲಾ ಬೆಲ್ದಾಳೆ ಉಪಸ್ಥಿತರಿದ್ದರು.

ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಸ್ವಾಗತಿಸಿದರು. ಆಕಾಶವಾಣಿ ಕಲಾವಿದ ನವಲಿಂಗ ಪಾಟೀಲ ನಿರೂಪಿಸಿದರು. ಡಾ. ಅಮೀತ ಅಷ್ಟೂರೆ ವಂದಿಸಿದರು.

ಪ್ರಶಸ್ತಿ ಪುರಸ್ಕಾರ

ಪಟ್ಟದ್ದೇವರ ಸಮಾಜ ಸೇವಾ ಪ್ರಶಸ್ತಿ, ಮೈಸೂರು ವಿ.ವಿ.ಯ ಕುಲಪತಿ ಡಾ. ಶರಣಪ್ಪ ಹಲಸೆಯವರಿಗೆ ಡಾ. ಚನ್ನಬಸವ ಪಟ್ಟದ್ದೇವರ ಶೈಕ್ಷಣಿಕ ಸೇವಾ ಪ್ರಶಸ್ತಿ, ಧಾರವಾಡದ ಹಿಂದೂಸ್ತಾನಿ ಗಾಯಕ ಡಾ. ಮೃತ್ಯುಂಜಯ ಶಟ್ಟರ ರವರಿಗೆ ಸಿದ್ದರಾಮ ಜಂಬಲದಿನ್ನಿ ವಚನ ಸಂಗೀತ ಪ್ರಶಸ್ತಿ, ಪ್ರಕಾಶ ಬಸವರಾಜ ಮುಗಳಿಯವರಿಗೆ ಡಾ.ಜೆ.ಹೆಚ್.ಖಂಡೇರಾವ ಚಿತ್ರಕಲಾ ಪ್ರಶಸ್ತಿ, ಜತ್ತಿ ಫೌಂಡೇಶನ್ ಸಂಸ್ಥಾಪಕ ಧ್ರುವ ಜತ್ತಿಯವರಿಗೆ ಡಾ. ಚನ್ನಬಸವ ಪಟ್ಟದ್ದೇವರ ಯುವ ಪ್ರಶಸ್ತಿ, ಸೋಲಾಪುರದ ಮಲ್ಲಿಕಾರ್ಜುನ ಮೂಲಗೆಯವರಿಗೆ ಬಸವತತ್ವ ಪ್ರಸಾರ ಸೇವಾ ಪ್ರಶಸ್ತಿ, ತಾಳಿಕೋಟೆಯ ಚಂದ್ರಗೌಡ ಕುಲಕರ್ಣಿಯವರಿಗೆ ಡಾ. ಚನ್ನಬಸವ ಪಟ್ಟದ್ದೇವರ ಮಕ್ಕಳ ಸಾಹಿತ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ವಿಜೃಂಭಣೆಯಿಂದ ಆಚರಿಸೋಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಪಾಪನಾಶದವರೆಗೆ ಬೈಕ್ ರ್‍ಯಾಲಿ ನಡೆಯಲಿದೆ ಹಾಗೂ ಸಂಜೆ 6 ಗಂಟೆಗೆ ಬಸವ ಜಯಂತಿ ಉತ್ಸವ ಉದ್ಘಾಟನಾ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಚಾಲನೆ ನೀಡಲಿದ್ದಾರೆ. ಏ.29ಕ್ಕೆ ರಂಗಮಂದಿರದಲ್ಲಿ ವಚನ ಸಂಗೀತ ಕಾರ್ಯಕ್ರಮ, ಬಸವಾದಿ ಶರಣರ ವೇಷಭೂಷಣ ಮತ್ತು ನಾಟಕ ಕಾರ್ಯಕ್ರಮಗಳು ನಡೆಯಲಿವೆ ಮತ್ತು ಏ.30 ರಂದು ಸಂಜೆ 6 ಗಂಟೆಗೆ ಬಸವೇಶ್ವರ ವೃತ್ತದಲ್ಲಿ ಜಿಲ್ಲಾಧಿಕಾರಿಗಳು ವಚನ ಬೋಧಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಬೇಕು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ ಮಾತನಾಡಿ, ಬೀದರ ಜಿಲ್ಲೆಗೆ ಬಾಗಲಕೋಟೆ ಜಿಲ್ಲೆಯಿಂದ ಅನುಭವ ಮಂಟಪ ಬಸವಾದಿ ಶರಣರ ವೈಭವ ಕಾರ್ಯಕ್ರಮದ ರಥಯಾತ್ರೆ ಇದೇ ಏ. 23 ರಂದು ಜಿಲ್ಲೆಗೆ ಬರಲಿದ್ದು, ಏ.24ಕ್ಕೆ ಬೆಳಿಗ್ಗೆ 9:30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಥಯಾತ್ರೆಗೆ ಪೂಜೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಡಾ. ಗಿರೀಶ ಬದೋಲೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರಿ, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಮುಖಂಡರಾದ ಶಿವಶರಣಪ್ಪ ವಾಲಿ, ವೈಜಿನಾಥ ಕಂಠಾಣೆ, ಬಾಬು ವಾಲಿ, ಬಸವರಾಜ ಉಳ್ಳ, ರಾಜೇಂದ್ರ ಗಂದಗೆ, ಸುರೇಶ್ ಸ್ವಾಮಿ, ಸಂಜು ಕುಮಾರ್ ಪಾಟೀಲ್, ವಿಜಯಕುಮಾರ ಪಾಟೀಲ, ಸೋಮಶೇಖರ ಅಮಲಾಪೂರೆ, ಮಾರುತಿ ಬೌದ್ಧೆ, ವಿಜಯಕುಮಾರ ಸೊನಾರೆ ಸೇರಿದಂತೆ ಸಮಾಜದ ವಿವಿಧ ಮುಖಂಡರು ಉಪಸ್ಥಿತರಿದ್ದರು.

## ರಾಜ್ಯದ ಇಬ್ಬರೂ ಸೇರಿ ೩೦ ಜನರ ಸಾವು

ಉಗ್ರರು ಈ ದಾಳಿ ನಡೆಸಿದ್ದಾರೆ ಎಂದು ಹೇಳಲಾಗಿದೆ.

ಸುದ್ದಿ ತಿಳಿಯುತ್ತಿದ್ದಂತೆ ಭದ್ರತಾ ಪಡೆಗಳು ಮತ್ತು ಪೊಲೀಸರು ಇಡೀ ಪ್ರದೇಶವನ್ನು ಸುತ್ತುವರಿದರು. ತಮ್ಮರನ್ನು ಕಳೆದುಕೊಂಡು ಕುಟುಂಸ್ಥರವ ಆಕ್ರಂದನ ಮುಗಿಲುಮುಟ್ಟಿದೆ.

ಮಾತಾನಡಿಸುವ ನೆಪದಲ್ಲಿ ಬಂದು ಉಗ್ರರು ಮನಬಂದಂತೆ ಗುಂಡು ಹಾರಿಸಿ ರಕ್ತದೋಕುಳಿಯನ್ನೇ ಹರಿಸಿದ್ದಾರೆ. ದಾಳಿಯ ಹಿಂದೆ ಯಾವ ಉಗ್ರಗಾಮಿ ಸಂಘಟನೆಯ ಕೈವಾಡವಿದೆ ಎಂಬ ಬಗ್ಗೆಯೂ ತಕ್ಷಣಕ್ಕೆ ಮಾಹಿತಿ ಲಭ್ಯವಾಗಿಲ್ಲ. ಭಯೋತ್ಪಾದಕರ ಬಂಧನಕ್ಕೆ ಭದ್ರತಾಪಡೆಗಳು ಶೋಧ ಕಾರ್ಯಚುರುಕುಗೊಳಿಸಿವೆ.

ಗುಂಡಿನ ಸುರಿಮಳೆಯಾಗುತ್ತಿದ್ದ ಭಯಭೀತರಾದ ಜನ ದಿಕ್ಕಾಪಾಲಾಗಿ ಓಡಿದ್ದಾರೆ.ಆದರೆ ಸುರಕ್ಷಿತ ಸ್ಥಳಕ್ಕೆ ತೆರಳಲು ಸಾಧ್ಯವಾಗಿಲ್ಲ ಎಂದು ಪ್ರತ್ಯಕ್ಷ ದರ್ಶಿಗಳು ತಿಳಿಸಿದ್ದಾರೆ.

ಉಗ್ರರನ್ನು ಸುಮ್ಮನೆ ಬಿಡಲ್ಲ:ಶಾ

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯಿಂದ ತೀವ್ರ ದುಃಖವಾಗಿದೆ. ನನ್ನ ಆಲೋಚನೆಗಳು ಮೃತರ ಕುಟುಂಬ ಸದಸ್ಯರೊಂದಿಗಿವೆ. ಭೀಕರ ಭಯೋತ್ಪಾದಕ ಕೃತ್ಯದಲ್ಲಿ ಭಾಗಿಯಾಗಿರುವವರನ್ನು ಬಿಡುವುದಿಲ್ಲ" ಎಂದು ಕಠಿಣ ಸಂದೇಶ ರವಾನಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಮಾಹತಿ ನೀಡಿರುವ ಅವರು, ಭದ್ರತಾ ವ್ಯವಸ್ಥೆಗಳ ಪರಿಶೀಲನೆಗೆ ಕೂಡಲೇ ಅವರು ಶ್ರೀನಗರಕ್ಕೆ ತೆರಳುವುದಾಗಿ ತಿಳಿಸಿದರು.

ರಾಜನಾಥ್ ಖಂಡನೆರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರತಿಕ್ರಿಯೆ ನೀಡಿ ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಸುದ್ದಿಯಿಂದ ದುಃಖವಾಗಿದೆ. ಅಮಾಯಕರ ಮೇಲಿನ ಈ ಭೀಕರ ದಾಳಿ ಹೇಡಿತನದ್ದು ಮತ್ತು ಅತ್ಯಂತ ಖಂಡನೀಯ. ನನ್ನ ಆಲೋಚನೆಗಳು ಮತ್ತು ಪ್ರಾರ್ಥನೆಗಳು ಅಮಾಯಕರ ಮತ್ತು ಅವರ ಕುಟುಂಬಗಳೊಂದಿಗಿವೆ" ಎಂದು ತಿಳಿಸಿದ್ದಾರೆ.

## ಫಲಿತಾಂಶ ಪ್ರಕಟ; ಶಕ್ತಿ ದುಬೆ ಪ್ರಥಮ

ವಿಷಯವನ್ನಾಗಿ ತೆಗೆದುಕೊಂಡು ಪರೀಕ್ಷೆಗೆ ಅರ್ಹರಾಗಿದ್ದರು ಎಂದು ಆಯೋಗದ ಹೇಳಿಕೆ ತಿಳಿಸಿದೆ.

ಬರೋಡಾದ ಎಂಎಸ್ ವಿಶ್ವವಿದ್ಯಾನಿಲಯದಿಂದ ಬಿ.ಕಾಂ ಪದವಿ ಪಡೆದಿರುವ ಹರ್ಷಿತಾ ಗೋಯಲ್ ಕೂಡಾ ರಾಜಕೀಯ ವಿಜ್ಞಾನ ಮತ್ತು ಅಂತಾರಾಷ್ಟ್ರೀಯ ಸಂಬಂಧಗಳನ್ನು ಐಚ್ಛಿಕ ವಿಷಯವಾಗಿ ತೆಗೆದುಕೊಂಡು, 2ನೇ ರ್‍ಯಾಂಕ್ ಪಡೆದುಕೊಂಡಿದ್ದಾರೆ.

ವೆಲ್ಲೂರಿನ ವಿಐಟಿಯಲ್ಲಿ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್‌ನಲ್ಲಿ ಬ್ಯಾಚುಲರ್ ಆಫ್ ಟೆಕ್ನಾಲಜಿ (ಬಿಟೆಕ್) ಹೊಂದಿರುವ ಡೋಂಗ್ರೆ ಅರ್ಚಿತ್ ಪರಾಗ್, ತತ್ವಶಾಸ್ತ್ರವನ್ನು ಐಚ್ಛಿಕ ವಿಷಯವಾಗಿ ತೆಗೆದುಕೊಂಡು ಮೂರನೇ ಸ್ಥಾನದಲ್ಲಿದ್ದಾರೆ.

ಭಾರತೀಯ ಆಡಳಿತ ಸೇವೆ (ಐಎಎಸ್),ಭಾರತೀಯ ಪೊಲೀಸ್ ಸೇವೆ (ಐಪಿಎಸ್) ಭಾರತೀಯ ವಿದೇಶಾಂಗ ಸೇವೆ (ಐಎಫ್ ಎಸ್)ಮತ್ತಿತರ ಹುದ್ದೆಗಳಿಗೆ ಆಯ್ಕೆ ಮಾಡಲು ಯುಪಿಎಸ್‌ಸಿ ಪ್ರಿಲಿಮರಿ, ಮುಖ್ಯ ಮತ್ತು ಸಂದರ್ಶನ ಮೂರು ಹಂತದಲ್ಲಿ ಪರೀಕ್ಷೆ ನಡೆಸುತ್ತದೆ. ಕಳೆದ ವರ್ಷ ಜೂನ್ 16 ರಂದು ಪ್ರಿಲಿಮರಿ ಪರೀಕ್ಷೆ ನಡೆಸಲಾಯಿತು. ಈ ಪರೀಕ್ಷೆಗೆ ಒಟ್ಟು 9,92,599 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಈ ಪೈಕಿ 5,83,213 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಸೆಪ್ಟೆಂಬರ್ 2024 ರಲ್ಲಿ ನಡೆದ ಮುಖ್ಯ ಪರೀಕ್ಷೆಗೆ ಹಾಜರಾಗಲು ಒಟ್ಟು 14,627 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದರು.

ಈ ಪೈಕಿ 2,845 ಅಭ್ಯರ್ಥಿಗಳು ವ್ಯಕ್ತಿತ್ವ ಪರೀಕ್ಷೆ ಅಥವಾ ಸಂದರ್ಶನಕ್ಕೆ ಆಯ್ಕೆಯಾಗಿದ್ದರು. ಇವರಲ್ಲಿ 1,009 ಅಭ್ಯರ್ಥಿಗಳನ್ನು (725 ಪುರುಷರು ಮತ್ತು 284 ಮಹಿಳೆಯರು) ವಿವಿಧ ಸೇವೆಗಳಿಗೆ ನೇಮಕ ಮಾಡಲು ಆಯೋಗ ಶಿಫಾರಸು ಮಾಡಿದೆ. ಅಂತಿಮವಾಗಿ ಅರ್ಹತೆ ಪಡೆದ ಅಭ್ಯರ್ಥಿಗಳಲ್ಲಿ, ಅಗ್ರ ಸ್ಥಾನ ಪಡೆದ ಐವರಲ್ಲಿ ಮೂವರು ಮಹಿಳೆಯರು ಮತ್ತು ಇಬ್ಬರು ಪುರುಷರು ಇದ್ದಾರೆ.

## ನ್ಯಾ, ಮಹಾಂತೇಶ ದರಗದ

ಭಾವನೆಯನ್ನು ತೊಲಗಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರ ಕೊಪ್ಪಳ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾದಿಕಾರ, ಜಿಲ್ಲಾ ವಿಕಲಚೇತನ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಶಿವಪ್ರೀಯಾ ಕಾನೂನು ವಿದ್ಯಾಲಯದಲ್ಲಿ ನಡೆದ ಕಾನೂನು ನೆರವು ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ದೇಶದ ಸಂವಿಧಾನ ಪ್ರಜೆಗಳಿಗೆ ನೀಡಿರುವ ಮೂಲಭೂತ ಹಕ್ಕುಗಳ ಬಗ್ಗೆ ಪ್ರತಿಯೊಬ್ಬನಿಗೂ ಅರಿವಿರಬೇಕು. ಹುಟ್ಟಿನಿಂದ ತೊಡಗಿ ವ್ಯಕ್ತಿಯ ಅಂತ್ಯದ ನಂತರವೂ ಹಿಂಬಾಲಿಸುವುದು ಕಾನೂನು. ಕಾನೂನು ಬಾಹಿರ, ಸಂವಿಧಾನ ಬಾಹಿರ ಕೆಲಸ ಮಾಡಬಾರದು. ಸಾಮಾಜಿಕ ನ್ಯಾಯ, ಆರ್ಥಿಕ ಮತ್ತು ರಾಜಕೀಯ ನ್ಯಾಯ ನೀಡುವುದು ಸರಕಾರದ ಆದ್ಯ ಕರ್ತವ್ಯ. ಮೂಲಭೂತ ಹಕ್ಕುಗಳ ಉಲ್ಲಂಘನೆ ಆದಾಗ ಕಾನೂನಿನ ಮೊರೆ ಹೋಗಬೇಕು. ಸಂವಿಧಾನದ ಹೇಳಿರುವ ನಿಯಮಗಳ ಪಾಲನೆ ಹಾಗೂ ಕಾನೂನಿನ ಅರಿವಿದ್ದುಕೊಂಡು ಆಡಳಿತಾತ್ಮಕ ಹುದ್ದೆಗಳನ್ನು ಅಲಂಕರಿಸಿದಾಗ ಮಾತ್ರ ದೇಶದ ಆಡಳಿತ ಯಂತ್ರ ಸುಧಾರಿಸಲು ಸಾಧ್ಯ. ರಾಮರಾಜ್ಯದ ಕಲ್ಪನೆ ಮಾಡಿದರೆ ಸಾಲದು, ಅದನ್ನು ಸಾಕಾರಗೊಳಿಸಬೇಕಾದರೆ ಯುವಜನತೆ ಕಾನೂನು ಅಧ್ಯಯನ ಮಾಡಿಕೊಂಡು ಆಡಳಿತಾತ್ಮಕ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುವಂತಾಗಬೇಕು. ಉನ್ನತ ಆಡಳಿತ ಹುದ್ದೆಗಳಲ್ಲಿ ಕರ್ತವ್ಯ ಮಾಡುವುದರ ಮೂಲಕವಾಗಿ ಸದೃಢ ದೇಶ ಕಟ್ಟುವ ಮನಸ್ಸು ವಿದ್ಯಾರ್ಥಿಗಳಲ್ಲಿ ಇರಬೇಕಾಗಿದೆ. ಇದಕ್ಕಾಗಿ ಕನಸು ಕಾಣಬೇಕು. ಎತ್ತರಕ್ಕೆ ಬೆಳೆಯುವ ತುಡಿತ ಹುಟ್ಟಿಕೊಳ್ಳಬೇಕು. ಕನಸು ನನಸು ಮಾಡಿಕೊಳ್ಳುವಲ್ಲಿ ಪೂರಕವಾಗಿ ಸ್ಪಂದಿಸುವ ವಿಷಯಗಳೆಲ್ಲವನ್ನೂ ಅರಿಯುವ ಪ್ರಯತ್ನ ಮಾಡಬೇಕು ಎಂದರು.

ಜಿಲಾಂಗವೀಕಲ ಕಲ್ಯಾಣ ಅಧಿಕಾರಿ ವೆಂಕಟೇಶ ದೇಶಪಾಂಡೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಶಶೀಧರ ಸಕ್ರಿ ಉಪನ್ಯಾಸ ನೀಡಿದರು.ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ರಾಘವೇಂದ್ರ ಘಟನಘಂಟಿ, ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ,ನರೇಂದ್ರಹಾಗೂಉಪನ್ಯಾಸಕರಾದ ರಜೀಯಾಬೇಗಂ,ಸೋಮಶೇಖರ್ ಸೇರಿದಂತೆ ಕಾನೂನು ವಿದ್ಯಾರ್ಥಿಗಳು ಹಾಜರಿದ್ದರು.

## ಸಚಿವ ದರ್ಶನಾಪುರ ಸೂಚನೆ

ಸಂಬಂಧಿಸಿದ ಹಿರಿಯ ಅಧಿಕಾರಿಗಳೊಂದಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಇಂದು ಚರ್ಚೆ ನಡೆಸಿದರು.

ಜಿಲ್ಲಾಡಳಿತ ಭವನದಲ್ಲಿನ ಜಿಲ್ಲಾ ಉಸ್ತುವಾರಿ ಸಚಿವರ ಕಾರ್ಯಾಲಯದಲ್ಲಿಂದು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿ,ಸಿಂದಗಿ-ಕೊಡಂಗಲ್ ರಾಷ್ಟ್ರೀಯ ಹೆದ್ದಾರಿಯಾಗಿ ಉನ್ನತೀಕರಣದ ಬಗ್ಗೆ ಪರಿಶೀಲಿಸಿ ಸಮಗ್ರ ವರದಿ ಸಲ್ಲಿಸಬೇಕು.ಅದರಂತೆ 367 ಕೋ.ರೂ ವೆಚ್ಚದ ಭೀಗುಡಿ-ವಿಭೂತಿಹಳ್ಳಿ, 17 ಕಿ.ಮೀ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕ್ರಮಗಳನ್ನು ಚುರುಕುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಹತ್ತಿಗುಡೂರ್ ಕ್ರಾಸ್ ರಿಂದ ತಿಂಥಣಿ ರಸ್ತೆ ಅಗಲೀಕರಣ ಹಾಗೂ ಜಿಲ್ಲೆಯಿಂದ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಗಳಿಗೆ ಅಂಡರ್ ಪಾಸ್ ಮಾಡುವ ಬಗ್ಗೆ ಕೇಂದ್ರ ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸುವಂತೆ ರಾಯಚೂರು ಸಂಸದ ಶ್ರೀ ಜಿ.ಕುಮಾರನಾಯಕ ಅವರಿಗೆ ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ರಾಯಚೂರು ಸಂಸದ ಶ್ರೀ ಜಿ.ಕುಮಾರನಾಯಕ ಅವರು, ರಾಷ್ಟ್ರೀಯ ಹೆದ್ದಾರಿಯಡಿ 5 ರಿಂದ 7 ಅಂಡರ್ ಪಾಸ್ ನಿರ್ಮಿಸುವ ಬಗ್ಗೆ ಬೇಡಿಕೆ ಇದ್ದು ಜಿಲ್ಲಾಧಿಕಾರಿಗಳು ಗಮನಕ್ಕೆ ತಂದಿದ್ದಾರೆ. ಕಳೆದ ಮೂರು ವರ್ಷಗಳಿಂದ ಅನೇಕ ಅಪಘಾತಗಳಿಗೆ ಕಾರಣವಾಗುತ್ತಿರುವ ಹತ್ತಿಗುಡೂರ್-ತಿಂಥಣಿ ಬ್ರೀಡ್ಜ ರಸ್ತೆ ರಾಷ್ಟ್ರೀಯ ಹೆದ್ದಾರಿಯಾಗಿ ಉನ್ನತೀಕರಣದ ಬಗ್ಗೆ ಕೇಂದ್ರ ಸರ್ಕಾರದ ಹಾಗೂ ಕೇಂದ್ರ ಹೆದ್ದಾರಿ ಸಚಿವರ ಗಮನಕ್ಕೆ ತರಲಾಗುವುದು.

ಸಿಂದಗಿ-ಕೊಡಂಗಲ್ ರಸ್ತೆ ನೆನೆಗುದಿಗೆ ಬಿದ್ದಿದೆ.ಟೆಂಡರ್ ಕರೆಯುವ ಪ್ರಕ್ರಿಯೆ ಬಾಕಿಯಿದೆ.ಕ್ರಿಯಾಯೋಜನೆ ಸಿದ್ಧಪಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದು,ಇದೇ ವರ್ಷ ಅನುದಾನ ಒದಗಿಸಲು ಪ್ರಯತ್ನಿಸಲಾಗುವುದು. ಭೀಗುಡಿ ಬೈಪಾಸ್ ರಸ್ತೆ ಕುರಿತು ತ್ವರಿತ ಕ್ರಮಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜಿಲ್ಲೆಯಲ್ಲಿನ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅವಶ್ಯಕ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ.ನಿರಂತರ ನಿಗಾ ಇಡಲಾಗಿದೆ. ಜಲಜೀವನ್ ಮಿಷನ್ ಯೋಜನೆಯಡಿ ಕಾಮಗಾರಿ ಪ್ರಗತಿಯಲ್ಲಿದೆ.ಪ್ರತ್ಯೇಕವಾಗಿ ಈ ಕುರಿತು ಪರಿಶೀಲಿಸುವುದಾಗಿ ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ , ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಮಿಲಿಂದ್ ಕುಮಾರ್, ಸೇರಿದಂತೆ ರಾಜ್ಯ, ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಹಲ್ಗಾಮ್ ದಾಳಿ ಭಯೋತ್ಪಾದನೆ ಮರುಸ್ಥಾಪಿಸುವ ಯತ್ನ: ಬೊಮ್ಮಾಯಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.22: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿಅಮಾಯಕರ ಮೇಲೆ ದಾಳಿ ಮಾಡಿರುವುದು ಇದೊಂದು ಹೇಯ ಕೃತ್ಯ ಮತ್ತು ಇದು ಭಯೋತ್ಪಾದನೆ ಮರುಸ್ಥಾಪಿಸುವ ಪ್ರಯತ್ನ. ಇದನ್ನು ಪ್ರತಿಯೊಬ್ಬ ನಾಗರಿಕರು ಖಂಡಿಸುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಕಿಡಿಕಾರಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಧರ್ಮದ ಹೆಸರು ಕೇಳಿ ಗುಂಡು ಹಾರಿಸಿರುವುದು ಭಾರತದ ವಿರೋಧಿ ಶಕ್ತಿಗಳ ಕೈವಾಡ ಇರುವುದು ಬಹಳ ಸ್ಪಷ್ಟ. ಇದನ್ನು ಕೂಡಲೇ ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಮಟ್ಟ ಹಾಕಬೇಕು. ಜಮ್ಮು ಕಾಶ್ಮೀರ ಕಣಿವೆಯಲ್ಲಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆ ತರಲು ರಾಜ್ಯ ಸರ್ಕಾರ ಎಲ್ಲ ವ್ಯವಸ್ಥೆಯನ್ನು ಮಾಡಬೇಕು. ಘಟನೆಯಲ್ಲಿ ಮೃತರಾದವರ ಕುಟುಂಬಸ್ಥರಿಗೆ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿ ಭಗವಂತ ಕೊಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

## ಅಲೆಮಾರಿ ಸಮುದಾಯದವರನ್ನು ಮುಖ್ಯ ವಾಹಿನಿಗೆ ತರಬೇಕಿದೆ :ಪಲ್ಲವಿ ಜಿ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.22ರಾಜ್ಯದಲ್ಲಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಹಾಗೂ ಅರೇ ಅಲೆಮಾರಿ ಜನಸಮುದಾಯ ಶಿಕ್ಷಣದಿಂದ ವಂಚಿತವಾಗಿ ಸಮಾಜದಿಂದ ವಿಮುಖವಾಗಿದ್ದು, ಇವರನ್ನು ಮುಖ್ಯವಾಹಿನಿಗೆ ತರಬೇಕಿದೆ ಎಂದು ಕರ್ನಾಟಕ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಹೇಳಿದರು.

ಬುಧವಾರ ಇಲ್ಲಿನ ಡಿ.ಸಿ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ನಾಗರಿಕ ಸಮಾಜದಿಂದ ದೂರ ಇರುವ ಅಲೆಮಾರಿ ಸಮುದಾಯಕೆ ಬದುಕು ಕಟ್ಟಿಕೊಳ್ಳಲು ಅನೇಕ ಕಾರ್ಯಕ್ರಮರೂಪಿಸಿದ್ದು,ಅಧಿಕಾರಿ ವರ್ಗ ಈ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತರಬೇಕಿದೆ ಎಂದರು.

ಕಳೆದ ಎರಡು ದಿನದಿಂದ ಜಿಲ್ಲೆಯ ವಿವಿಧ ತಾಲೂಕಿನಲ್ಲಿ ಪರಿಶಷ್ಟಜಾತಿ-ಪರಿಶಿಷ್ಟಪಂಗಡದ ಅಲೆಮಾರಿ ಜನ ವಾಸವಿರುವ ಸ್ಥಳಕ್ಕೆ ಭೇಟಿ ನೀಡಿ ಅವರ ಸಮಸ್ಯೆ ಖುದ್ದಾಗಿ ಆಲಿಸಿದ್ದು, ಅಧಾರ್,ವೋಟರ್ ಐ.ಡಿ.,ಜಾತಿ ಪ್ರಮಾಣ ಪತ್ರ ಇಲ್ಲದಿರುವುದಕ್ಕೆ ಅನೇಕ ಸೌಲಭ್ಯದಿಂದ ಈ ಸಮುದಾಯ ವಂಚಿತವಾಗಿದೆ. ಹೀಗಾಗಿ ಮೊದಲು ಇವರನ್ನು ಶಿಕ್ಷಿತರನ್ನಾಗಿಸಿ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ತಾವು ನಿಗಮದ ಅಧ್ಯಕ್ಷೆಯಾದ ನಂತರ ಇದುವರೆಗೆ 25 ಜಿಲ್ಲೆಯಲ್ಲಿ ಪ್ರವಾಸ ಮಾಡಿ ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಪ್ರಮಾಣಿಕ ಪ್ರಯತ್ನ ಮಾಡಿರುವೆ ಎಂದ ಅವರು, ನಿಗಮದಿಂದ ಕಳೆದ 3 ವರ್ಷದಲ್ಲಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡ ವಿವಿಧ ಯೋಜನೆಗಳ ಕುರಿತು ಇಂದಿಲ್ಲ ದೀರ್ಘವಾಗಿ ಚರ್ಚಿಸಲಾಗಿದೆ. ಸೂರಿಲ್ಲದವರಿಗೆ ಸೂರು ಕಲ್ಪಿಸಲು ನಿಗಮದಿಂದ 2 ಲಕ್ಷ ರೂ. ನೀಡಲಾಗುತ್ತಿದ್ದು, ಮನೆಗಳಿಗೆ ಕೂಡಲೆ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಕಮಲಾಪುರ ತಾಲೂಕಿನ ಸರ್ವೆ ನಂ-49ರಲ್ಲಿ 2 ಎಕರೆ ಸರ್ಕಾರಿ ಜಮೀನು ಲಭ್ಯ ಇರುವುದರಿಂದ ಅಲೆಮಾರಿ ಸಮುದಾಯಕ್ಕೆ ನಿವೇಶನ ನೀಡಲು ಕೂಡಲೆ ಡಿ.ಸಿ. ಅವರಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸಹಾಯಕ ಆಯುಕ್ತರಿಗೆ ನಿರ್ದೇಶಿಸಲಾಗಿದೆ ಎಂದರು.

ಮಾಂಗ್ ಗಾರುಡಿ, ಬುಡ್ಗ ಜಂಗಮ, ಪಾದ್ರಿ, ಮೇದಾರ ಸೇರಿದಂತೆ ಅನೇಕ ಅಲೆಮಾರಿ ಸಮುದಾಯದ ಮಹಿಳೆಯರನ್ನು ಭೇಟಿಯಾಗಿದ್ದಾಗ ತಮಗೂ ಕೆಲಸ ಕೊಡಿ, ನಾವು ಇತರರಂತೆ ಉದ್ಯೋಗ ಮಾಡಿ ಸ್ವಾಭಿಮಾನದಿಂದ ಬದುಕುತ್ತೇವೆ ಎನ್ನುತ್ತಿದ್ದು, ಇಂತಹವರಿಗೆ ಕೌಶಲ್ಯ ತರಬೇತಿ ನೀಡುವ ಕೆಲಸ ಜಿಲ್ಲೆಯಲ್ಲಿ ಆಗಬೇಕಿದೆ. ಇನ್ನು ನಿಗಮದಿಂದ ಪ್ರೇರಣಾ ಯೋಜನೆಯಡಿ 10 ಜನ ಸದಸ್ಯರಿರುವ ಅಲೆಮಾರಿ ಮಹಿಳಾ ಸ್ವ-ಸಹಾಯ ಗುಂಪಿಗೆ 2.50 ಲಕ್ಷ ರೂ. ಮ ಸಾಲ ನೀಡಲಾಗುತ್ತಿದ್ದು, ಅಲೆಮಾರಿ ಸಮುದಾಯದ ಮಹಿಳೆಯರು ಇದರ ಪ್ರಯೋಜನ ಪಡೆದು ಸ್ವಾವಲಂಬಿಯಾಗಿ ಬದುಕಬೇಕು ಎಂದು ಕರೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಆಪ್ತ ಕಾರ್ಯದರ್ಶಿ ಬಿ.ಎಸ್. ಆನಂದಕುಮಾರ, ಹೆಚ್ಚುವರಿ ಎಸ್.ಪಿ.ಮಹೇಶಮೇಘಣ್ಣನವರ್, ಸೇಡಂ ಉಪ ವಿಭಾಗದ ಸಹಾಯಕ ಆಯುಕ್ತ ಪ್ರಭುರೆಡ್ಡಿ, ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಭಕ್ಷ ಇದ್ದರು.

## ಆರನೇ ತರಗತಿ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೀದರ:ಏ.22:2025-26ನೇ ಸಾಲಿಗೆ ಜಿಲ್ಲೆಯಲ್ಲಿನ ಪ್ರತಿಷ್ಠಿತ ಶಾಲೆಯ (ಕನ್ನಡ ಮಾಧ್ಯಮ) ವಸತಿ ಶಾಲೆಯಲ್ಲಿ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://swdservices.karnataka.gov.in/EducationPrestigious/authentication/login?redirectUrl=%2Fprofile ಮೂಲಕ ಆನ್‌ಲೈನ್ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಅರ್ಹತೆಗಳು: ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 2.50 ಲಕ್ಷಗಳೊಳಗಿರಬೇಕು. ಬಡತನ ರೇಖೆ-ಗಿಂತ ಕೆಳಗಿನ ಮಟ್ಟದ ಹಾಗೂ ಈ ಯೋಜನೆಯ ಸೌಲಭ್ಯವನ್ನು ಪಡೆಯಲು ವಿಫಲರಾಗಿರುವ ಅತಿ ಹಿಂದುಳಿದ ವರ್ಗದವರಿಗೆ ಈ ಸೌಲಭ್ಯವನ್ನು ನೀಡಲು ಉದ್ದೇಶಿಸಲಾಗಿರುತ್ತದೆ. ಪೌರ ಕಾರ್ಮಿಕರ ಮಕ್ಕಳು. ಸಫಾಯಿ ಕರ್ಮಚಾರಿಗಳ ಮಕ್ಕಳು. ಸ್ಮಶಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಮಕ್ಕಳು. ದೇವದಾಸಿ ರವರ ಮಕ್ಕಳು, ಅಂಗವಿಕಲತೆಯನ್ನು ಹೊಂದಿರುವವರು. ಕೋವೀಡ್ ಮುಂತಾದ ಪ್ರಕೃತಿ ವಿಕೋಪದಿಂದ ತಂದೆ ತಾಯಿಯನ್ನು ಕಳೆದುಕೊಂಡ ಮಕ್ಕಳು. ಏಕ ಪೋಷಕ ಮಕ್ಕಳು. ಯೋಜನಾ ನಿರಾಶ್ರಿತರ ಮಕ್ಕಳು. ಕೊಳಗೇರಿಗಳಲ್ಲಿ ವಾಸಿಸುತ್ತಿರುವವರ ಮಕ್ಕಳು. ಸಾಲ ಬಾಧೆಯಿಂದ ಆತ್ಮಹತ್ಯೆಗೆ ಗುರಿಯಾದವರ ಮಕ್ಕಳು. ದೌರ್ಜನ್ಯದಲ್ಲಿ ನೊಂದವರ ಮಕ್ಕಳು. ಮಾಜಿ ಸೈನಿಕರ ಮಕ್ಕಳು. ಕೃಷಿ ಕಾರ್ಮಿಕರ ಮಕ್ಕಳು. ಜೀತ ವಿಮುಕ್ತ ಮಕ್ಕಳು.

ಪ್ರಮುಖವಾಗಿ ಈ ಮೇಲಿನ ಹಿಂದುಳಿದ ವರ್ಗದವರಿಗೆ ಹಾಗೂ 5ನೇ ತರಗತಿಯಲ್ಲಿ ತೇರ್ಗಡೆಯಾಗಿ ಶೇಕಡಾ 60% ಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರಮುಖ್ಯತೆ ನೀಡಲಾಗುವುದು.

## ಸೇಡಂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಪ್ರವೇಶಾತಿ ಪ್ರಾರಂಭ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಏ. 22: ತಾಲೂಕಿನ ಹೃದಯಬಾಗದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025-26 ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಬಿಎ, ಬಿ.ಎಸ್ಸಿ, ಬಿ.ಸಿ.ಎ, ಬಿ.ಕಾಂ ಮತ್ತು ಬಿ.ಎಫ್.ಎಸ್.ಐ ಪದವಿ ತರಗತಿಗಳಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು.

ನಮ್ಮ ಕಾಲೇಜು ನ್ಯಾಕ್‌ನಿಂದ 'ಬಿ+'ಮರುಮಾನ್ಯತೆ ಪಡೆದಿದ್ದು. ನುರಿತ ಬೋಧಕರನ್ನು ಮತ್ತು ಸುಸಜ್ಜಿತವಾದ ತರಗತಿ ಕೊಠಡಿಗಳು, ವಿಜ್ಞಾನ ಪ್ರಯೋಗಾಲಯ, ಉತ್ತಮ ಗ್ರಂಥಾಲಯ ಒಳಗೊಂಡಿದೆ. ಪಠ್ಯದ ಜೊತೆಗೆ ಪಠ್ಯತರ ಚಟುವಟಿಕೆಗಳಾದ ಕ್ರೀಡೆ, ಸಾಂಸ್ಕೃತಿಕ, ಎನ್.ಎಸ್.ಎಸ್, ರೋವರ್ಸ್, ರೇಂಜರ್ಸ್, ಯುವ ರೆಡ್ ಕ್ರಾಸ್, ಮತ್ತು ಮುಂತಾದ ಘಟಕಗಳು ವಿದ್ಯಾರ್ಥಿಗಳ ಸರ್ವಾಂಗಿಣ ಅಭಿವೃದ್ಧಿಗೆ ಕಾರ್ಯನಿರತವಾಗಿವೆ. ವಿಶೇಷವಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿವಿಧ ಶಿಷ್ಯವೇತನ ಮುಂತಾದ ಸೌಲಭ್ಯಗಳಿವೆ. ಈ ಭಾಗದ ಪಿಯುಸಿ ಪಾಸಾದ ವಿದ್ಯಾರ್ಥಿಗಳು ಪದವಿಯ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆದುಕೊಂಡು ಕಾಲೇಜಿನ ಶೈಕ್ಷಣಿಕ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲರಾದ ಡಾ, ಪಂಡಿತ ಬಿ. ಕೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಪರ್ಕಿಸಿ: 9900856359, 9901096870

## ಮಸ್ಕತ್‌ನಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ನೆರವು: ಹೊರಟ್ಟಿ ಭರವಸೆ



ಮಲ್ಲಮ್ಮ ನುಡಿ ವಾರ್ತೆ

ಓಮಾನ್:ಏ.22:ಓಮಾನ್ ದೇಶದಲ್ಲಿನ ಕನ್ನಡಿಗರೆಲ್ಲರೂ ಸೇರಿ ರಾಜಧಾನಿ ಮಸ್ಕತ್‌ನಲ್ಲಿ ಕನ್ನಡ ಭವನ ನಿರ್ಮಾಣ ಮಾಡಿಕೊಳ್ಳುವುದಾದರೆ, ಅದಕ್ಕೆ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವು ಕೊಡಿಸುವುದಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.

ಗಡಿನಾಡ ಸಾಂಸ್ಕೃತಿಕ ಅಕಾಡೆಮಿ ಕಾಸರಗೋಡು ಹಾಗೂ ಒಮಾನ್ ಕನ್ನಡ ಪರ ಸಂಘಟನೆಗಳ ಘಟಕಗಳು ಮಸ್ಕತ್ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಮಸ್ಕತ್‌ನಲ್ಲಿ ಏರ್ಪಡಿಸಿದ್ದ ಮಸ್ಕತ್ ಗಡಿನಾಡ ಉತ್ಸವ ಉದ್ಘಾಟಿಸಿ ಮಾತನಾಡಿದರು.

ಮಸ್ಕತ್ ನಿವೇಶನ ಲಭ್ಯವಾದರೆ ಅನುದಾನ ಪಡೆಯಲು ಸುಲುಭವಾಗುತ್ತದೆ. ಈ ಬಗ್ಗೆ ತಾವೇ ಖುದ್ದಾಗಿ ಮುಖ್ಯಮಂತ್ರಿಗಳ ಜೊತೆಗೆ ಮಾತನಾಡಿ ನೆರವು ಕೊಡಿಸಲಾಗುವುದು ಎಂದು ಹೇಳಿದರು. ಮರಳುಗಾಡಿನ ಈ ಓಮಾನ್ ದೇಶದಲ್ಲಿ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿರುವ ಕನ್ನಡಿಗರ ನಾಡು ನುಡಿ ಮೇಲಿನ ಅಭಿಮಾನ, ಪ್ರೀತಿಗೆ ನಿಜಕ್ಕೂ ಹೃದಯ ತುಂಬಿ ಬಂದಿದೆ ಎಂದರು.

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಮಾತನಾಡಿ, ಕನ್ನಡ ಮಕ್ಕಳಿಗೆ ಇಲ್ಲಿ ಕನ್ನಡ ಭಾಷೆಯನ್ನು ಉಚಿತವಾಗಿ ಪಾಠಮಾಡುತ್ತಿರುವ ಮಹಿಳಾ ಶಿಕ್ಷಕರನ್ನು ಗಡಿ ಪ್ರಾಧಿಕಾರದಿಂದ ಗುರುತಿಸಿ, ಸೂಕ್ತ ಗೌರವ ನೀಡುವುದಾಗಿ ತಿಳಿಸಿದರು. ಉಚಿತವಾಗಿ ಪಠ್ಯ ಪುಸ್ತಕ ಒದಗಿಸಲಾಗುವುದು ಎಂದರು.ಕರ್ನಾಟಕ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ದೂರದ ದೇಶದಲ್ಲಿ ಕನ್ನಡ ಭಾಷೆಯನ್ನು ಉಳಿಸುವುದಷ್ಟೆ ಅಲ್ಲದೆ, ಕನ್ನಡ ಸಂಸ್ಕೃತಿಯನ್ನು ಬೆಳೆಸಲು ರಾಯಬಾರಿಗಳಂತೆ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಇಂಡಿಯಾ ಅಂಬಾಸಿಡರ್ ಜಿ.ವಿ.ಶ್ರೀನಿವಾಸ, ಓಮಾನ್ ವಿದೇಶಿ ವ್ಯವಹಾರಗಳ ಸಚಿವಾಲಯ ಅಧ್ಯಕ್ಷ ಖಾಲಿದ್ ಸಯ್ಯದ್ ಮೊಹಮ್ಮದ್, ಮಂಜೇಶ್ವರ ಶಾಸಕ ಎ.ಕೆ.ಎಂ. ಆಶ್ರ್, ನಾಡೋಜ ಡಾ.ಮನು ಬಳಿಗಾರ್, ಗಡಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಕಾಶ್ ಮತ್ತಿಹಳ್ಳಿ, ಸದಸ್ಯರಾದ ಎ.ಆರ್.ಸುಬ್ಬಯ್ಯಕಟ್ಟೆ, ಶಿವರೆಡ್ಡಿ, ಡಾ.ಸಂಜೀವ್ ಕುಮಾರ್ ಅತಿವಾಳೆ, ಕನ್ನಡ ಸಂಘದ ಶಿವಾನಂದ ಕೋಟ್ಯಾನ್, ಆಶ್ರಾ ಮಂತುರ್, ಅಬೂಬಕ್ಕರ್ ರಾಯಲ್ ಬೋಳಾರ್, ಹ್ಯಾರಿಸ್ ಬೀರನ್, ಅಬ್ದುಲ್ ಲತ್ ಣ ಟಿ ಜ ಜ ಜಿ ಟಿ ಜ ಜ ಉಪ್ಪಳ, ಅಮರೇಶ ಗಿರಡ್ಡಿ, ಮಲ್ಲಿಕಾರ್ಜುನ್ ಸಂಗೆಟ್ಟಿ ಭಾಗವಹಿಸಿದ್ದರು.

ಮಸ್ಕತ್‌ನಲ್ಲಿ ಕನ್ನಡ ಕಲಿಸುವ ಮಹಿಳಾ ಶಿಕ್ಷಕಿಯರನ್ನು ಸನ್ಮಾನ ಮಾಡಲಾಯಿತು. ತೀರ್ಥ ಕಟೀಲ್ ಮತ್ತು ತಂಡ ಹಾಗೂ ರೇಷ್ಮಾ ಹಿತೇಶ್ ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ನಡೆಯಿತು. ಹಲವು ಪ್ರಕಾರದ ಕನ್ನಡ ಜಾನಪದ ನೃತ್ಯ, ವಚನ, ನೃತ್ಯ, ಆಟಿಕಳೆಂಜ ನೃತ್ಯ, ವೀರಗಾಸೆ, ಭರತ ನಾಟ್ಯವನ್ನು ಸ್ವತಃ ಮಸ್ಕತ್ ಕನ್ನಡಿಗರೇ ಪ್ರದರ್ಶಿಸಿ ಗಮನ ಸೆಳೆದರು. ಇದೇ ಸಂದರ್ಭದಲ್ಲಿ ಕವಿಗೋಷ್ಠಿಯೂ ನಡೆಯಿತು.

## ವೈಭವದಿಂದ ಜರುಗಿದ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡ ಪಲ್ಲಕ್ಕಿ ಉತ್ಸವ

# ಹುಡಗಿ ನೂತನ ಶ್ರೀಗಳ ಗುರು ಪಟ್ಟಾಧಿಕಾರ ಇಂದು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಹುಡುಗಿ ಗ್ರಾಮದ ಕಟ್ಟಿಮನಿ ಹಿರೇಮಠ ಸಂಸ್ಥಾನದಲ್ಲಿ ಏಪ್ರಿಲ್ 22 ರಿಂದ ಮೇ 4ರ ವರೆಗೆ ಶ್ರೀ ದಿಗಂಬರ ಕರಿಬಸವೇಶ್ವರಜಾತ್ರಾಮಹೋತ್ಸವ ಹಾಗೂ ಮಠದ ಪೀಠಾಧಿಪತಿ ಶ್ರೀ ವಿರೊಪಾಕ್ಷ ಶಿವಾಚಾರ್ಯ ಅಮೃತ ಮಹೋತ್ಸವ ಹಾಗೂ ನೂತನಶ್ರೀಗಳಗುರುಪಟ್ಟಾಧಿಕಾರ ಮಹೋತ್ಸವ ನಡೆಯಲಿದೆ. ಬಾಳೆಹೊನ್ನೂರು ರಂಭಾಪುರಿ ಪೀಠದ ಜಗದ್ಗುರು ಶ್ರೀ ಡಾ. ವೀರ ಸೋಮೇಶ್ವರ ರಾಜ ದೇಶಕೇಂದ್ರ ಶಿವಾಚಾರ್ಯರ ಹಾಗೂ ಕೇದಾರ ಪೀಠದ ಜಗದ್ಗುರುಶ್ರೀಭೀಮಾಶಂಕರಲಿಂಗ ಶಿವಾಚಾರ್ಯರ ಅಡ್ಡ ಪಲ್ಲಕ್ಕಿ ಮಹೋತ್ಸವಹಾಗೂ ವಿರೋಪಕ್ಷ ಶಿವಾಚಾರ್ಯರ ಅಮೃತ ಮಹೋತ್ಸವ ಏಪ್ರಿಲ್ 22ರಂದು ಸಾಯಂಕಾಲವೈಭವದಿಂದಜರುಗಿ-ತ್ತು. ಮಠದ ಪೀಠಾಧಿಪತಿಗಳಾದ ವಿರೋಪಕ್ಷ ಶಿವಾಚಾರ್ಯರು ಜಗದ್ಗುರುಗಳಿಗೆ ವೈಭವದಿಂದ ಸ್ವಾಗತಿಸಿಕೊಂಡರು, ಶಾಸಕ ಡಾ. ಸಿದ್ದು ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಜರುಗಿತ್ತು. ಏಪ್ರಿಲ್ 23ರಂದು ಬೆಳಿಗ್ಗೆ ನೂತನ ಶ್ರೀಗಳ ಗುರು ಪಟ್ಟಾಧಿಕಾರ ಮಹೋತ್ಸವ ಜರಗಲಿದೆ. 23ರಂದು ಬೆಳಿಗ್ಗೆ 9:30ಕ್ಕೆ ನೂತನ ಶ್ರೀಗಳ ಗುರು ಪಟ್ಟಾಧಿಕಾರ ಮಹೋತ್ಸವ ಜಗದ್ಗುರುಗಳು ಸಾನಿಧ್ಯ ಶ್ರೀ ವಿರೂಪಾಕ್ಷ ಶಿವಾಚಾರ್ಯರು, ಹಾರಕೂಡದ ಶ್ರೀ ಚನ್ನವೀರ ಶಿವಾಚಾರ್ಯರನೇತೃತ್ವ,ತಡೋಳಾದ ಶ್ರೀ ರಾಜೇಶ್ವರ ಶಿವಾಚಾರ್ಯರು ಸಮ್ಮುಖದಲ್ಲಿ ನಡೆಯಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸುವರು. ಮಾಜಿ ಸಚಿವ ರಾಜಶೇಖರ್ ಪಾಟೀಲ್ ಅಧ್ಯಕ್ಷತೆ ವಹಿಸುವರು. ಇದಕ್ಕೂಮುನ್ನ ಬ್ರಾಹ್ಮಿ ಮುಹೂರ್ತದಲ್ಲಿ ಜಗದ್ಗುರುಗಳ ಸಾನಿಧ್ಯದಲ್ಲಿ ನೂತನ ಶ್ರೀಗಳ ಗುರು ಪಟ್ಟಾಧಿಕಾರ ಮಹೋತ್ಸವವನ್ನು ಶ್ರೀ ವಿರೂಪಾಕ್ಷ ಶಿವಾಚಾರ್ಯರು ಶ್ರೀ ರಾಜೇಶ್ವರ ಶಿವಾಚಾರ್ಯರು



### ನೂತನ ಶ್ರೀಗಳ ಪರಿಚಯ



ಹುಮನಾಬಾದ (ಗ್ರಾ). ಭಾಲ್ಕಿ ತಾಲೂಕಿನ ಖಟಕ್ ಚಿಂಚೋಳಿಯ ಕೋರಿಕಾಂತಿ ಮಠದ ಚಿನ್ನಮ್ಮ ಶಿವಕುಮಾರ್ ದಂಪತಿಗಳ ದ್ವಿತೀಯ ಸುಪುತ್ರ ಶ್ರೀ ನಾಗಯ್ಯ ದೇವರು 2005ರಂದು ಜನಿಸಿ, ತಮ್ಮ ಪ್ರಾಥಮಿಕ ಶಿಕ್ಷಣ ಹುಟ್ಟೂರಿನ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಂತರದ ಶಿಕ್ಷಣ ಮತ್ತು ಧಾರ್ಮಿಕ ಸಂಸ್ಕಾರ ಪಡೆದುಕೊಳ್ಳಲು ಹುಡುಗಿ ಹಿರೇಮಠದ ಸಂಸ್ಥಾನಕ್ಕೆ ಬಂದರು. ಶ್ರೀ ಕರಿಬಸವೇಶ್ವರ ಪ್ರೌಢಶಾಲೆಯಲ್ಲಿ ಪಡೆದ ನಂತರ ಶ್ರೀ ವೀರೂಪಾಕ್ಷ ಶಿವಾಚಾರ್ಯರ ಬಳಿ ಧಾರ್ಮಿಕ ಸಂಸ್ಕಾರ ತ್ರಿಕಾಲ ಪೂಜೆ ರುದ್ರಾಭಿಷೇಕ ಮಂತ್ರಗಳ ಪಠಣ ಧಾರ್ಮಿಕ ಆಚರಣೆಯ ಸಭೆ ಸಮಾರಂಭಗಳಲ್ಲಿ ಭಾಗವಹಿಸಿ ಅನುಭವ ಪಡೆದುಕೊಂಡರು. ಹುಮನಾಬಾದ ಸರ್ಕಾರಿ ಕಾಲೇಜಿನಲ್ಲಿ ಪದವಿ ಪೂರ್ಣಗೊಳಿಸಿದ್ದಾರೆ.

# ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದದಲ್ಲಿ 23ರಂದು ನಡೆಯುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ತಾಲೂಕ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಸಾಮಾಜಿಕ ನ್ಯಾಯದಪ್ರತಿಪಾದಕ, ಸುಧಾರಣೆಗೆ ಒತ್ತು ನೀಡಿದ್ದ ಜಾನ್ ಪೋಪ್ ನಿಧನ ಹೊಂದಿರುವ ಪ್ರಯುಕ್ತ ಅವರನ್ನು ಗೌರವಾರ್ಥವಾಗಿ ದೇಶದಾದ್ಯಂತ ಶೋಕಾಚರಣೆ ಮಾಡಲು ಭಾರತ ಸರ್ಕಾರ ನಿರ್ಧರಿಸಿರುವ ಪ್ರಯುಕ್ತ ರಾಜ್ಯಾದ್ಯಂತ ಏಪ್ರಿಲ್ 22 ಮತ್ತು 23 ಎರಡು ದಿನ ಶೋಕಾಚಾರಣೆಯ ನಿಮಿತ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಮುಂದೂಡಲಾಗಿದೆ ಎಂದು ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ತಿಳಿಸಿದ್ದಾರೆ.






ಬಸವಕಲ್ಯಾಣ :- ನಗರದ ಅಕ್ಕ ಮಹಾದೇವಿ ಕಾಲೇಜಿನ ಆವರಣದಲ್ಲಿ ನಡೆದ ಶ್ರೀ ಬಸವೇಶ್ವರ ದೇವಸ್ಥಾನದ 75 ನೇ ಜಾತ್ರಾ ಅಮೃತ ಮಹೋತ್ಸವ ಅಂಗವಾಗಿ ಆಯೋಜಿಸಿದ್ದ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಗೈದ ವರಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಈ ಸಂದರ್ಭದಲ್ಲಿ ಬಸವೇಶ್ವರ ದೇವಸ್ಥಾನದ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೊರಕೆ. ರವಿ ಕೊಳಕೂರ. ಶಿವರಾಜ ಬಾಲಕಿಲೆ. ಶರಣು ದುರ್ಗೆ. ಸಂಜು ಮಟ್ಟಿಗೆ. ಶಿವಕುಮಾರ ಬಿರಾದಾರ. ಪ್ರಶಾಂತ ಕನಶೆಟ್ಟಿ. ಪ್ರಭು ಕಾಡದಿ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಪಿ.ಯು.ಸಿ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 22- 2025ರ ಏಪ್ರಿಲ್ 24 ರಿಂದ ಮೇ 8ರ ವರೆಗೆ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪರೀಕ್ಷೆ-2 ನಡೆಸಲಾಗುತ್ತಿದ್ದು, ಈ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಆದೇಶವನ್ನು ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ. ದಂಡ ಪ್ರಕ್ರಿಯೆ ಸಂಹಿತೆ ಬಿ.ಎನ್. ಎಸ್.ಎಸ್ 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2025ರ ಏಪ್ರಿಲ್ 24 ರಿಂದ ಮೇ 8ರ ವರೆಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ದ್ವಿತೀಯ ಪಿ.ಯು.ಸಿ ಪರೀಕ್ಷೆ-1ನ್ನು ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ 3 ಪರೀಕ್ಷಾ ಕೇಂದ್ರಗಳು, ಶಹಾಪೂರ ತಾಲ್ಲೂಕಿನ 2 ಪರೀಕ್ಷಾ ಕೇಂದ್ರಗಳು, ಸುರಪುರ ತಾಲ್ಲೂಕಿನ 2 ಕೇಂದ್ರಗಳು, ಗುರುಮಠಕಲ್ ತಾಲ್ಲೂಕಿನ 1 ಕೇಂದ್ರಗಳು ಮತ್ತು ಹುಣಸಗಿ ತಾಲ್ಲೂಕಿನ 1 ಪರೀಕ್ಷಾ (ಯಾದಗಿರಿ ಜಿಲ್ಲೆಯಾದ್ಯಂತ ಒಟ್ಟು 9 ಪರೀಕ್ಷಾ) ಕೇಂದ್ರಗಳಲ್ಲಿ ನಡೆಸಲಾಗುತ್ತಿದ್ದು, ಈ ಪರೀಕ್ಷೆಗಳು ಸೂಸುತ್ರವಾಗಿ ನಡೆಸುವ ಹಿತದೃಷ್ಟಿಯಿಂದ, ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಹಾಗೂ ಪುಸ್ತಕ ಮಳಿಗೆಗಳನ್ನು ಮುಚ್ಚಲು ಕೆಳಕಾಣಿಸಿದ ಷರತ್ತಿಗೊಳಪಟ್ಟು ಆದೇಶಿಸಿದೆ.

**ಷರತ್ತುಗಳು**: ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ, ಮೊಬೈಲ್, ಪೇಜರ್, ಜೆರಾಕ್ಸ್, ಟೈಪಿಂಗ್, ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವದನ್ನು ನಿಷೇಧಿಸಲಾಗಿದೆ. 200 ಮೀಟರ್ ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ. ಜವಾಹರ ಪದವಿ ಪೂರ್ವ ಕಾಲೇಜು ಯಾದಗಿರಿ ಪರೀಕ್ಷಾ ಕೇಂದ್ರವು ಬಾಲಾಜಿ ಕಲ್ಯಾಣ ಮಂಟಪಕ್ಕೆ ಹೊಂದಿಕೊಂಡಿದ್ದು, 2025ರ ಏಪ್ರಿಲ್ 24 ರಿಂದ ಮೇ 8ರ ವರೆಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ಯಾವುದೇ ತರಹದ ಸಭೆ ಸಮಾರಂಭಗಳನ್ನು ಮತ್ತು ಧ್ವನಿವರ್ಧಕಗಳನ್ನು ನಿಷೇಧಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಮೂನೆ-6 ಸಲ್ಲಿಸಿ ಕೂಲಿ ಕೆಲಸ ಖಾತ್ರಿ ಪಡಿಸಿಕೊಳ್ಳಿ ನಿರ್ದೇಶಕ : ಶರಣಪ್ಪ ಕೆಳಗಿನಮನಿ



ಕೊಪ್ಪಳ : ಕುಕನೂರ ತಾಲೂಕ, ಶಿರೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಅರಕೇರಿ ಗ್ರಾಮದ ಮಹಾತ್ಮಗಾಂಧಿ ನರೇಗಾ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನ ಆಯೋಜನೆ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಮಾನ್ಯ ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ತಾಲೂಕ ಪಂಚಾಯತ ಕುಕನೂರ ಶರಣಪ್ಪ ಕೆಳಗಿನಮನಿ ಮಾತನಾಡಿ ಗ್ರಾಮೀಣ ಪ್ರದೇಶದ ಕೂಲಿಕಾರರು ಕೂಲಿ ಕೆಲಸಕ್ಕಾಗಿ ವಲಸೆ ಹೋಗಬಾರದು ಅವರ ಸ್ವಂತ ಗ್ರಾಮದಲ್ಲಿಯೇ ಇದ್ದು ತಮ್ಮ ಜೀವನ ನಿರ್ವಹಣೆ ಮಾಡಬೇಕು, ವಲಸೆಯಿಂದ ಕೂಲಿಕಾರರ ಮಕ್ಕಳ ವಿದ್ಯಾಬ್ಯಾಸ ಹಾಳಾಗುತ್ತದೆ. ಅಲ್ಲದೆ ಸಾಮಾಜಿಕ ಸ್ಥಿತಿಗಳು ಬದಲಾವಣೆ ಯಾಗುತ್ತವೆ ಅದಕ್ಕಾಗಿ ನರೇಗಾ ಯೋಜನೆಯಡಿ ನಮೂನೆ-6 ಸಲ್ಲಿಸಿ ಕೆಲಸ ಖಾತ್ರಿ ಪಡಿಸಿಕೊಳ್ಳಲು ಕೂಲಿಕಾರರಿಗೆ ಕರೆ ನೀಡಿದರು. ಕೂಲಿಯ ಜೊತೆಗೆ ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು, ನೀರು ಗಿಡ ಮರ ಪರಿಸರ ಅಭಿವೃದ್ಧಿ ಪಡಿಸಲು ನರೇಗಾ ಕೆಲಸದಿಂದ ಸಾಧ್ಯ ಕನಿಷ್ಠ ಕೆಲಸ ಗರಿಷ್ಟ ಕೂಲಿ ನರೇಗಾ ದಲ್ಲಿ ಇದೆ ದಿನಕ್ಕೆ ರೂ. 370 ಇದ್ದು ಕನಿಷ್ಠ ಅಳತೆ ಕೆಲಸ ಮಾಡಿ. ನಿಗದಿತ ಕೂಲಿ ಪಡೆದುಕೊಳ್ಳಿ ಹಾಗೂ ನರೇಗಾ ಯೋಜನೆಯಡಿ ನೊಂದಣಿಯಾದ ಕೂಲಿಕಾರರು PMSBY, PMJJBY, APY, PMSYMDY ಅಂತಹ ಯೋಜನೆಗಳನ್ನು ನೊಂದಣಿ ಮಾಡಿಕೊಳ್ಳಬೇಕು ಎಂದರು.

ಸ್ಥಳದಲ್ಲಿ ತಾಲೂಕ ತಾಂತ್ರಿಕ ಸಂಯೋಜಕ ಸುರೇಶ್, ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ, ಕಾಯಕ ಬಂಧುಗಳು ಕೂಲಿಕಾರರು ಹಾಜರಿದ್ದರು.


# ಹದಗೆಟ್ಟ ರಸ್ತೆ ರಿಪೇರಿಗೆ ಒತ್ತಾಯ

(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ನಗರದ ವಿವಿಧೆಡೆ ರಸ್ತೆ ಹದಗೆಟ್ಟು ಹೋಗಿವೆ ಇಲ್ಲಿನ ಗುರುಭವನದ ಎದುರುಗಡೆ ಇರುವ ಮುಖ್ಯ ರಸ್ತೆಯಲ್ಲಿ ಬಹಳಷ್ಟು ತಗು ಗುಂಡಿಗಳು ಬಿದ್ದಿರುವುದರಿಂದ ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ಬಹುಜನ ಸಮಾಜ ಪಕ್ಷದ ತಾಲ್ಲೂಕು ಅಧ್ಯಕ್ಷರಾದ ಶಂಕರ್ ಪುಲೆ ಒತ್ತಾಯಿಸಿದ್ದಾರೆ. ಕೋಟೆಯಿಂದ ತ್ರಿಪುರಾಂತಿನವರೆ ಹೋಗುವ ಮುಖ್ಯ ರಸ್ತೆಯಲ್ಲಿ ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಇವುಗಳ ರಿಪೇರಿ ಮಾಡುವುದು ಬಹಳ ಅವಶ್ಯಕತೆ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ನಗರದಲ್ಲಿ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಬಸು. ಲಾರಿ ಸೇರಿದಂತೆ ಅನೇಕ ವಾಹನಗಳು ಇಲ್ಲಿಂದಲೆ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.





ಕಮಲನಗರ: ಪಟ್ಟಣದ ಸೋನಾಳ ರಸ್ತೆಯಲ್ಲಿ ಇರುವ ಹಿರೇಮಠ ಸಂಸ್ಥಾನದ ಶಾಖಾ ಮಠ ಕಮಲನಗರನಲ್ಲಿ ಶತಾಯುಸಿಗಳು,ಕನ್ನಡದ ಜಂಗಮರು ಆದ ಪರಮ ಪೂಜ್ಯ ಮ. ಘ. ಚ ಡಾ.ಚನ್ನಬಸವ ಪಟ್ಟದೇವರ 26ನೇ ಸ್ಮರಣೋತ್ಸವವನ್ನು ಆಚರಿಸಲಾಯಿತು. (ಮಲ್ಲಮ್ಮ ನುಡಿ ಚಿತ್ರ)



ಚಿಟಗುಪ್ಪ:- ಪತ್ರಕರ್ತ ರಾಜಕುಮಾರ ಆರ್. ಹಡಪದ ಅವರ ಸೊಹೋದರ ಸುಪುತ್ರಿ ಕು. ಶ್ವೇತಾ ಎ. ಹಡಪದ ಇವರ 14ನೇ ವರ್ಷದ ಜನ್ಮ ದಿನಾಚರಣೆ ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಲಾಯಿತ್ತು. ಈ ಸಂದರ್ಭದಲ್ಲಿ ನಾಗಮ್ಮ ಹಡಪದ, ಆದಿತ್ಯ ಎ. ಹಡಪದ, ಆಯುಷ್ ಎ. ಹಡಪದ, ಅಮೀತ ಹಡಪದ, ಅಭಿಷೇಕ ಹಡಪದ, ನವೀನ್ ಹಡಪದ ಸೇರಿದಂತೆ ಇತರರು ಶುಭ ಕೋರಿದರು. ಈ ಸಂದರ್ಭದಲ್ಲಿ ಹಡಪದ ಪರಿವಾರದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಐದು ವರ್ಷದೊಳಗಿನ ಲಸಿಕೆ ವಂಚಿತ ಮಕ್ಕಳಿಗೆ 12 ಮಾರಕ ರೋಗಗಳ ತಡೆಗೆ ತಪ್ಪದೇ ಲಸಿಕೆ ಹಾಕಿಸಲು ತಿಳಿಸಿ: ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮ್ಮೈರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಹೆರಿಗೆ ನಂತರದಲ್ಲಿ ನವಜಾತ ಶಿಶುವಿಗೆ 12 ಮಾರಕ ರೋಗಗಳ ವಿರುದ್ಧ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯಕವಾಗುವ ಲಸಿಕೆಗಳನ್ನು ತಪ್ಪದೇ ಪೋಷಕರು ಹಾಕಿಸಲು ತಿಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮ್ಮೈರ್ ಅವರು ಹೇಳಿದರು.

ಸೋಮವಾರ, ಜಿಪಂ ನ ವಿಡಿಯೋ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಸಿಕೆಗಳ ಕುರಿತು ತಪ್ಪು ನಂಬಿಕೆ ಹೊಂದಿದ ಪಾಲಕರಿಗೆ ಸರಿಯಾದ ಮಾಹಿತಿ ನೀಡಿ ಲಸಿಕೆ ಹಾಕಿಸುವಂತೆ ಲಸಿಕೆಗಳ ಕುರಿತು ಮಾಹಿತಿ ನೀಡಬೇಕು. ಜಾಗತಿಕ ಲಸಿಕಾ ಸಪ್ತಾಹದ ಅಂಗವಾಗಿ ಏಪ್ರಿಲ್, ಮೇ, ಜೂನ್ ತಿಂಗಳಲ್ಲಿ ಆಯೋಜಿಸುವ ಅಭಿಯಾನವನ್ನು ಗಂಭೀರವಾಗಿ ಪರಿಗಣಿಸಿ ಎಲ್ಲಾ ಲಸಿಕೆ ಹಾಕಿಸಲು ಅರಿವು ಮೂಡಿಸುವುದರ ಮೂಲಕ ಜಿಲ್ಲೆಯಾದ್ಯಂತ ಲಸಿಕಾ ಅಭಿಯಾನ ಯಶಸ್ವಿಗೊಳಿಸಲು ಅಧಿಕಾರಿಗಳು ಶ್ರಮಿಸಬೇಕು ಎಂದರು.

ಬಾಲ್ಯ ಚೈತನ್ಯ ಮಕ್ಕಳ ಆರೈಕೆ: ಬೇಸಿಗೆಯಲ್ಲಿ ಲಭ್ಯವಾಗುವ ಸರಕಾರಿ ಹಾಸ್ಟೆಲ್‌ಗಳಲ್ಲಿ ಈ ಹಿಂದಿನಂತೆ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ ವೈದ್ಯರಿಂದ ಚಿಕಿತ್ಸೆ ಹಾಗೂ ಐಸಿಡಿಎಸ್‌ನಿಂದ ಊಟ ವಸತಿಯೊಂದಿಗೆ 14 ದಿನಗಳ ಕಾಲ ತಾಯಿಯೊಂದಿಗೆ ಮಗುವನ್ನು ಆರೈಕೆಗೆ ಸಿದ್ದತೆ ಮಾಡಲು ಸೂಚಿಸಿದರು. ಸೀಳು ತುಟಿ, ತಿರುಚಿದ ಪಾದಗಳ ಶಸ್ತ್ರಚಿಕಿತ್ಸೆಯನ್ನು ಬಿಎಮ್‌ಸಿಆರ್‌ಸಿ ಯಲ್ಲಿ ಸಹ ಮಾಡಿಸುವಂತೆ ಸೂಚಿಸಿದರು.

ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನ: ಹೆರಿಗೆ ನಂತರದಲ್ಲಿ ಜನನದ ಮಧ್ಯ ಅಂತರಕ್ಕಾಗಿ ಪಿಪಿಐಯುಸಿಡಿ ತಕ್ಷಣವೇ ಅಳವಡಿಕೆಗೆ ಒತ್ತು ನೀಡಲು ತಿಳಿಸಿದರು. ಅಲ್ಲದೆ ಪುರುಷರಿಗೆ ಎನ್‌ಎಸ್‌ವಿ ಶಸ್ತ್ರಚಿಕಿತ್ಸೆ ಬಗ್ಗೆ ಹೆಚ್ಚಿನ ಜಾಗೃತಿ ನೀಡಿ ಶಸ್ತ್ರಚಿಕಿತ್ಸೆ ಮಾಡಿಸಲು ತಿಳಿಸಿದರು.

ಅಗ್ನಿ ಸುರಕ್ಷತೆ ಸಪ್ತಾಹ ಎಲ್ಲ ಆಸ್ಪತ್ರೆಗಳಲ್ಲಿ ಆಚರಣೆಗೆ ಸೂಚನೆ: ಆಸ್ಪತ್ರೆಗಳಲ್ಲಿ ನವಜಾತ ಶಿಶುಗಳು, ಬಾಣಂತಿಯರು ಸೇರಿದಂತೆ ರೋಗಿಗಳ ಸುರಕ್ಷತೆ ಎಲ್ಲ ಅಗ್ನಿ ಸುರಕ್ಷಾ ಪರಿಕರಗಳನ್ನು ಪರಿಶೀಲಿಸಲು ಸೂಚಿಸಿದರು. ಪ್ರತಿ ಮಂಗಳವಾರ ಆಯುಷ್ಮಾನ ಆರೋಗ್ಯ ಶಿಬಿರಗಳನ್ನು ತಪ್ಪದೆ ಹಮ್ಮಿಕೊಂಡು ರಕ್ತದೊತ್ತಡ, ಸಕ್ಕರೆ ಕಾಯಿಲೆ ಸೇರಿದಂತೆ ಇತರೆ ಪರೀಕ್ಷೆ ಹಾಗೂ ಅಗತ್ಯ ಚಿಕಿತ್ಸೆ ನೀಡಲು ಸೂಚಿಸಿದರು.

ಕ್ಷಯರೋಗ: ಕ್ಷಯರೋಗಪತ್ತೆಗೆ ಇರುವ 23 ಟ್ರುನಾಟ್ ಹಾಗೂ 5 ಸಿಬಿನಾಟ್ ಕೇಂದ್ರಗಳಲ್ಲಿ ಹೆಚ್ಚಿನ ಪರೀಕ್ಷೆ ಕೈಗೊಳ್ಳಲು ತಿಳಿಸಿದರು. ಅಸಾಂಕ್ರಾಮಿಕ ರೋಗ ತಡೆ: ಹಾವು ಕಡಿತ, ನಾಯಿ ಕಡಿತ ಲಸಿಕೆಯನ್ನು ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ದಾಸ್ತಾನು ಇಡಲು ಸೂಚನೆ ನೀಡಿದರು.

ಡೆಂಗ್ಯು ರೋಗ ನಿಯಂತ್ರಣ: ಡೆಂಗ್ಯು ರೋಗ ನಿಯಂತ್ರಣ-ಕ್ಕಾಗಿ ಇನ್ನೂ ಹೆಚ್ಚಿನ ಜಾಗೃತಿ ನೀಡಲು ಹಾಗೂ ಮಲೇರಿಯಾ, ಜೆಇ ಪ್ರಕರಣಗಳ ನಿಯಂತ್ರಣಕ್ಕೆ ಸೂಚಿಸಿದರು. ರಕ್ತದಾನ: ಪ್ರಸ್ತುತ ವರ್ಷ ದಾಖಲೆ ಪ್ರಮಾಣದಲ್ಲಿ 20278 ಯುನಿಟ್ ರಕ್ತಸಂಗ್ರಹಿಸಿದ್ದು, ಜಿಲ್ಲೆಯಲ್ಲಿ ಯಾವುದೇ ಕಾರಣ-ಕ್ಕೂ ರಕ್ತ ಕೊರತೆಯಾಗದಂತೆ ತಿಳಿಸಿದರು.

ಕುಷ್ಠರೋಗ: ನರ ಮತ್ತು ಚರ್ಮದ ಖಾಯಿಲೆಯಾಗಿರುವ ಕುಷ್ಠರೋಗವನ್ನು ಹೆಚ್ಚು ಜಾಗೃತಿ ನೀಡಿ ಆರಂಭದಲ್ಲಿಯೇ ಪತ್ತೆಹಚ್ಚಿ ಚಿಕಿತ್ಸೆ ನೀಡಲು ಸೂಚಿಸಿದರು.

ಅಂಗಾಂಗ ದಾನ ನೋಂದಣಿ: 8379 ಜನರ ನೋಂದಣಿಯೊಂದಿಗೆ ಬಳ್ಳಾರಿ ಜಿಲ್ಲೆ ರಾಷ್ಟ ಮಟ್ಟದಲ್ಲಿ ಎರಡನೆ ಜಿಲ್ಲೆಯ ಸ್ಥಾನದಿಂದ ಮೊದಲ ಸ್ಥಾನ ಪಡೆಯಲು ಪ್ರಯತ್ನಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸಾರೆಡ್ಡಿ, ಬಿಮ್ಸ್ ವೈದ್ಯಕೀಯ ಅಧೀಕ್ಷಕರಾದ ಡಾ.ಇಂದುಮತಿ, ಎಸ್‌ಎಮ್‌ಓ ಡಾ.ಆರ್.ಎಸ್ ಶ್ರೀಧರ್, ಆರ್‌ಸಿಹೆಚ್‌ಓ ಡಾ.ಹನುಮಂತಪ್ಪ, ಡಿಎಮ್‌ಓ ಡಾ.ಆರ್ ಅಬ್ದುಲ್ಲಾ, ಡಿಎಸ್‌ಓ ಡಾ.ಮರಿಯಂಬಿ ವಿ.ಕೆ., ಡಿಎಫ್‌ಡಬ್ಲ್ಯುಓ ಡಾ.ಪೂರ್ಣಿಮಾ ಕಟ್ಟಿಮನಿ, ಡಿಟಿಓ ಡಾ.ಇಂದ್ರಾಣಿ.ವಿ., ಡಿಎಲ್‌ಓ ಡಾ.ವಿರೇಂದ್ರಕುಮಾರ್, ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ.ಅರುಣ್‌ಕುಮಾರ್, ಡಾ.ಭರತ್‌ಕುಮಾರ್, ಡಾ.ಸುನೀಲ್, ಡಾ.ಮಂಜುನಾಥ ಜವಳಿ, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಾ.ಸುರೇಶ ಕುಮಾರ್, ಡಾ.ಜಬೀನ್ ತಾಜ್, ಡಿಎನ್‌ಓ ಗಿರೀಶ್, ಡಿಪಿಎಮ್ ವೆಂಕೋಬ್ ನಾಯ್ಕ್, ಡಿಎಓ ಬಸವರಾಜ್, ಫಾರ್ಮಸಿ ಅಧಿಕಾರಿ ತಮನ್ನಾ, ಆರ್‌ಕೆಎಸ್‌ಕೆ ಸಲಹೆಗಾರ ಮನೋಹರ್ ಉಪಸ್ಥಿತರಿದ್ದರು.



# ವಕೀಲ ಸದಾಶಿವರೆಡ್ಡಿ ಮೇಲೆ ಹಲ್ಲೆ :

## ನಗರದಲ್ಲಿ ಮಾನವ ಸರಪಳಿ ನಿರ್ಮಿಸಿ ವಕೀಲರ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ ಏ. 22: ಭಾರತೀಯ ವಕೀಲರ ಪರಿಷತ್ ಸಹ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಮಾಜಿ ಅಧ್ಯಕ್ಷ ಸದಾಶಿವರೆಡ್ಡಿ ಅವರ ಬೆಂಗಳೂರಿನ ಕಚೇರಿಗೆ ನುಗ್ಗಿ ಮನಸೋ ಇಚ್ಛೆ ಹಲ್ಲೆ ನಡೆಸಿರುವ ಘಟನೆ ಖಂಡಿಸಿ ನಗರದಲ್ಲಿ ಜಿಲ್ಲಾ ವಕೀಲರ ಸಂಘದಿಂದ ಸೋಮವಾರ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ನಗರದ ನ್ಯಾಯಾಲಯದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಮಾರೋಪಗೊಂಡಿತು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಶಿವಶರಣಪ್ಪಾ ಪಾಟೀಲ್ (ಪುಟ್ಟು) ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ತಮ್ಮ ತೋಳಿಗೆ ಕೆಂಪು ಪಟ್ಟಿ ಧರಿಸಿ ಕೆಲ ಕಾಲ ಮಾನವ ಸರಪಳಿ ನಿರ್ಮಿಸಿ ದುಷ್ಕರ್ಮಿಗಳನ್ನು ಕೂಡಲೇ ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದ್ದು, ವಕೀಲ ಸದಾಶಿವರೆಡ್ಡಿ ತಮ್ಮ ಸಹದ್ಯೋಗಿ ಜೊತೆಗೆ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಇಬ್ಬರು ಅಪರಿಚಿತ ದುಷ್ಕರ್ಮಿಗಳು ಒಳನುಗ್ಗಿ



ಪೈಪ್‌ನಿಂದ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಇದು ತೀವ್ರ ಖಂಡನೀಯವಾಗಿದ್ದು, ಕೂಡಲೇ ಹಿರಿಯ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

> ತಗ್ಗಿದ ಪೊಲೀಸ್ ಭಯ ಜಿಲ್ಲೆಯಲ್ಲೂ ದುಷ್ಕರ್ಮಿಗಳಿಗೆ ಪೊಲೀಸ್‌ರಿಗೆ ಭಯ ಇಲ್ಲದಂತಾಗಿದೆ. ಇತ್ತೀಚೆಗೆ ನಗರದ ನ್ಯಾಯಾಲಯ ಪಕ್ಕದ ಬ್ಯಾಂಕ್ ಎಟಿಎಂ ಬಳಿ ದರೋಡೆ–ಕೋರರು ಗುಂಡು ಹಾರಿಸಿ ಹಣ ದೋಚಿಕೊಂಡು ಹೋಗಿದ್ದಾರೆ. ಈವರೆಗೂ ಆರೋಪಿಗಳು ಪತ್ತೆಯಾಗಿಲ್ಲ. ಈ ಘಟನೆ ನೆನಪು ಮಾಸುವ ಮುನ್ನವೇ ನಗರದಲ್ಲಿ ನ್ಯಾಯಾಧೀಶರ ಮನೆಗೂ ಕನ್ನ ಹಾಕಲಾಗಿದೆ. ಕೂಡಲೇ ಜಿಲ್ಲಾ ಪೊಲೀಸ್‌ರು ಇನ್ನು ಹೆಚ್ಚಿನ ಬಿಗಿ ಬಂದೋಬಸ್ತ್ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.
>
> **– ಶಿವಶರಣಪ್ಪಾ ಪಾಟೀಲ್ (ಪುಟ್ಟು)**
>
> **ಅಧ್ಯಕ್ಷ, ಜಿಲ್ಲಾ ವಕೀಲರ ಸಂಘ, ಬೀದರ್.**

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ನಾಗೇಂದ್ರ ಎಸ್ ಬಿರಾದಾರ್, ಉಪಾಧ್ಯಕ್ಷ ಗುಂಡರೆಡ್ಡಿ ಗುಡಾಡಿ, ಜಂಟಿ ಕಾರ್ಯದರ್ಶಿ ಶಿಲ್ಪಾ ಪಾಟೀಲ್, ಖಜಾಂಚಿ ಪ್ಯಾರುಸಾಬ್ ಎಂ ಶೇಕ್, ಹಿರಿಯ ವಕೀಲರಾದ ಬಾಬುರಾವ್ ಹೊನ್ನಾ, ಬಿ.ಕೃಷ್ಣಪ್ಪಾ, ನಾರಾಯಣ ಗಣೇಶ್, ರತ್ನಾ ಅಗ್ರೆ ಮೊದಲಾದವರು ಭಾಗವಹಿಸಿದರು.

# ಆರೋಗ್ಯದ ಕಡೆ ಗಮನ ಕೊಡಿ : ಡಾ. ಸಂದೀಪ್ ಗಾಯಕವಾಡ್





ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.22: ಆರೋಗ್ಯದ ಕಡೆ ಹೆಚ್ಚು ಗಮನ ಕೊಡಿ, ಆರೋಗ್ಯವೇ ನಮ್ಮ ಸಂಪತ್ತು ಎಂದು ನಿವೃತ್ತ ಲೆಫ್ಟಿನೆಂಟ್ ಕರ್ನಲ್ ಸ್ತ್ರೀರೋಗ ತಜ್ಞ ಡಾ.ಸಂದೀಪ್ ಗಾಯಕವಾಡ್ ಅವರು ಕಾಡವಾದನಲ್ಲಿರುವ ವಿಂಟೇಜ್ ರೀಸಾರ್ಟ್ನಲ್ಲಿ ಗುರು ನಾನಕ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಗುರು ನಾನಕ ಗ್ರೂಪ್ ಆಫ್ ಸ್ಕೂಲ್ಸ್ ಸಿಬ್ಬಂದಿ ವರ್ಗಕ್ಕೆ ಆರೋಗ್ಯ ಜಾಗೃತಿ ಕಾರ್ಯಗಾರದಲ್ಲಿ ಉದ್ದೇಶಿಸಿ ಮಾತನಾಡಿದರು. ಅವರು ಮುಂದುವರೆದು ಮಾತನಾಡುತ್ತ ಯಾವುದಾದರೂ ಆರೋಗ್ಯದಲ್ಲಿ ಏರು–ಪೇರು ಕಂಡುಬಂದ ಕೂಡಲೆ ವೈದ್ಯರಿಗೆ ಸಂಪರ್ಕಿಸಿರಿ, ತ್ವರೆ ಮಾಡಬೇಡಿ, ಪ್ರತಿಯೊಂದು ಆರೋಗ್ಯ ಸಮಸ್ಯೆಗೆ ಪರಿಹಾರವಿದೆ ಮತ್ತು ನಮ್ಮ ಆರೋಗ್ಯ ಉತ್ತಮಗೊಳಿಸಲು ಬೇಕಾದ ಎಲ್ಲಾ ರೀತಿಯ ಸೌಲಭ್ಯವನ್ನು ನಾವು ಹೊಂದ್ದಿದ್ದೇವೆ, ಸರಿಯಾದ ಸಮಯದಲ್ಲಿ ಊಟ ಮಾಡಬೇಕು. ವ್ಯಾಯಾಮ ಮತ್ತು ಯೋಗ ದಿನನಿತ್ಯ ಮಾಡಬೇಕು, ಇಲ್ಲದಿದ್ದಲ್ಲಿ ಬೇರೆ ರೀತಿಯ ರೋಗಗಳು ಉತ್ಪತ್ತಿಯಾಗುತ್ತವೆ ಎಂದು ನುಡಿದರು. ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಅವರು ಮಾತನಾಡುತ್ತ ಗುರು ನಾನಕ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿ ವರ್ಗಕ್ಕೆ ಗುರು ನಾನಕ ಆಸ್ಪತ್ರೆಯಲ್ಲಿ ರಿಯಾಯಿತಿ ಕೊಡಲಾಗುತ್ತಿದೆ. ಚಿಕಿತ್ಸೆಗಾಗಿ ನೆರೆ ರಾಜ್ಯಗಳಿಗೆ ಹೋಗುವುದನ್ನು ತಪ್ಪಿಸಲು ಗುರುನಾನಕ ಆಸ್ಪತ್ರೆಯಲ್ಲಿ ಡಯಾಲಸಿಸ್ ಕೇಂದ್ರ, ಕ್ಯಾಥ್ ಲ್ಯಾಬ್, ನ್ಯೂರೊ ಟ್ರಾಮಾ ಕೇರ್ ಸೆಂಟರ್ ಸೇರಿದಂತೆ ಅಗತ್ಯ ಅತ್ಯಾಧುನಿಕ ವೈದ್ಯಕೀಯ ಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದು ನುಡಿದರು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಯರಾದ ಶ್ರೀಮತಿ ಆರೀಫ್ ಹಾದಿ, ಪ್ರಾಂಶುಪಾಲರಾದ ಶ್ರೀಮತಿ ನಲಿನಿ ಡಿ.ಜಿ., ಶ್ರೀ ಅಮಜದ ಅಲಿ, ಶ್ರೀ ಡಿನರಾದ ಹನುಮಾನ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಟೆಂಡರ್ ಇಲ್ಲದೆ ಕಾಮಗಾರಿಗೆ ಚಾಲನೆ

## ಔರಾದ್‌ನಲ್ಲಿ ನಿಯಮ ಗಾಳಿಗೆ: ದೀಪಕ್ ಪಾಟೀಲ ಚಾಂದೋರಿ ಆರೋಪ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 22 : ಔರಾದ್ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಲಾಗುತ್ತಿದ್ದು, ಟೆಂಡರ್ ಇಲ್ಲದೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಮುಖಂಡ ದೀಪಕ್ ಪಾಟೀಲ ಚಾಂದೋರಿ ಆರೋಪಿಸಿದ್ದಾರೆ.

ಟೆಂಡರ್‌ಗೆ ಮುನ್ನವೇ ರಸ್ತೆ, ಬ್ರಿಡ್ಜ್ ಕಂ ಬ್ಯಾರೇಜ್, ದುರಸ್ತಿ ಮತ್ತಿತರ ಕಾಮಗಾರಿಗಳನ್ನು ಆರಂಭಿಸಲಾಗಿದೆ ಎಂದು ತಿಳಿಸಿದ್ದಾರೆ.

ಭೂ ಸೇನಾ ನಿಗಮಕ್ಕೆ ಟೆ–ಂಡರ್ ಕರೆಯದೆ ರೂ. 20 ಕೋಟಿ ವೆಚ್ಚದ ವಿವಿಧ ದುರಸ್ತಿ ಕಾಮಗಾರಿಗಳನ್ನು ವಹಿಸಲಾಗಿದೆ. ಲೋಕೋಪಯೋಗಿ, ಪಂಚಾಯತ್‌ರಾಜ್ ಇಲಾಖೆಯ ಕೆಲ ಕಾಮಗಾರಿಗಳನ್ನು ಟೆ–ಂಡರ್ ಇಲ್ಲದೆಯೇ ಶುರು ಮಾಡಲಾಗಿದೆ. ಕ್ಷೇತ್ರದ ಶಾಸಕ ಪ್ರಭು ಚವಾಣ್ ಅವರು ತಮಗೆ ಬೇಕಾದವರಿಗೆ ಮುಂಗಡವಾಗಿ ಕಾಮಗಾರಿ ಹಂಚಿಕೆ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಹಂಗರಗಾ ಸಮೀಪ ರೂ. 70 ಕೋಟಿ ವೆಚ್ಚದ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿಗೆ ಮಂಜೂರಾತಿ ಕೊಡಲಾಗಿತ್ತು. ಆದರೆ, ಸ್ಥಳ ವೈಜ್ಞಾನಿಕವಾಗಿರಲಿಲ್ಲ. ನಂತರ ಹೋರಾಟಕ್ಕೆ ಮಣಿದು ಸರ್ಕಾರ ಕಾಮಗಾರಿಯನ್ನು ಕೈಬಿಟ್ಟಿತ್ತು. ಕಳೆದ ಲೋಕಸಭೆ ಚುನಾವಣೆಯಲ್ಲಿ ಸ್ಥಳೀಯ ಶಾಸಕರು ಕಾಂಗ್ರೆಸ್‌ಗೆ ಅನುಕೂಲ



ಮಾಡಿಕೊಟ್ಟಿದ್ದಕ್ಕೆ ಕಾಂಗ್ರೆಸ್ ಸರ್ಕಾರ ಮತ್ತೆ ಸೂಕ್ತವಾಗಿರದ ಸ್ಥಳದಲ್ಲೇ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣದ ಉಡುಗೊರೆಯನ್ನು ಶಾಸಕರಿಗೆ ಕೊಟ್ಟಿದೆ. ಬೀದರನಲ್ಲಿ ಇತ್ತೀಚಿಗೆ ಮುಖ್ಯಮಂತ್ರಿ ಅವರು ಕಾಮಗಾರಿಯ ಶಂಕುಸ್ಥಾಪನೆ ಸಹ ನೆರವೇರಿಸಿದ್ದಾರೆ ಎಂದು ಹೇಳಿದ್ದಾರೆ.

ಔರಾದ್ ಕ್ಷೇತ್ರದಲ್ಲಿ ಶಾಸಕರೇ ಜೆಜೆಎಂ ಕಾಮಗಾರಿಗಳಿಗೆ ಚಾಲನೆ ಕೊಟ್ಟಿದ್ದಾರೆ. ಗ್ರಾಮ ಸಂಚಾರ ನಡೆಸಿ ವೀಕ್ಷಿಸಿದ್ದಾರೆ. ಕಾಮಗಾರಿಯ ಕೊನೆಯ ಹಂತದಲ್ಲಿ ಕೆಲಸ ಕಳಪೆ ಆಗಿರುವುದು ಅವರ ಅರಿವಿಗೆ ಬಂದಿದೆ. ಗುತ್ತಿಗೆದಾರರ ಮೇಲೆ ಹರಿಹಾಯುತ್ತಿದ್ದಾರೆ ಎಂದು ಆಪಾದಿಸಿದ್ದಾರೆ.

ಔರಾದನಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಅಕ್ರಮ ಸಾರಾಯಿ ಮಾರಾಟ, ಮಟ್ಕಾ, ಐಪಿಎಲ್ ಬೆಟ್ಟಿಂಗ್ ರಾಜಾರೋಷವಾಗಿ ನಡೆಯುತ್ತಿವೆ. ಎಲ್ಲಗೊತ್ತಿದ್ದರೂ ಶಾಸಕರು ಮೌನವಾಗಿದ್ದಾರೆ. ವಿರೋಧ ಪಕ್ಷ ಕಾಂಗ್ರೆಸ್‌ನವರು ಕೂಡ ಧ್ವನಿ ಎತ್ತುತ್ತಿಲ್ಲ ಎಂದು ಹೇಳಿದ್ದಾರೆ. ಇಡೀ ದೇಶದಲ್ಲಿ ಕಾಂಗ್ರೆಸ್–ಬಿಜೆಪಿಯವರು ಪ್ರತಿಸ್ಪರ್ಧಿಗಳಾಗಿದ್ದಾರೆ. ಇಲ್ಲಿ ಪರಿಸ್ಥಿತಿ ಬೇರೆಯೇ ಇದೆ. ಎರಡೂ ಪಕ್ಷಗಳ ಮಧ್ಯೆ ಒಳ ಒಪ್ಪಂದವಾಗಿದೆ. ಹೊಂದಾಣಿಕೆ ರಾಜಕೀಯ ನಡೆಯುತ್ತಿದೆ. ಏನೇ ಆದರೂ ಒಬ್ಬರ ಕೆಲಸಕ್ಕೆ ಮತ್ತೊಬ್ಬರು ವಿರೋಧ ವ್ಯಕ್ತಪಡಿಸುತ್ತಿಲ್ಲ. ಜನರ ಸಮಸ್ಯೆ ಇಟ್ಟು–ಕೊಂಡು ಕಾಂಗ್ರೆಸ್‌ನವರು ಸಣ್ಣ ಪ್ರತಿಭಟನೆ ಮಾಡಿದ ಉದಾಹರಣೆಯಿಲ್ಲ. ಹೀಗಾದರೆ ಜನ ಅನ್ಯಾಯವಾದರೆ ಯಾರ ಬಳಿಗೆ ಹೋಗಬೇಕು, ಅವರಿಗೆ ನ್ಯಾಯ ಕೊಡಿಸುವವರು ಯಾರು ಎಂದು ಪ್ರಶ್ನಿಸಿದ್ದಾರೆ.

ಔರಾದ್ ಕ್ಷೇತ್ರದಲ್ಲಿ ನಿಯಮ ಬಾಹಿರ ಕೆಲಸಗಳಿಗೆ ಕೂಡಲೇ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದ್ದಾರೆ.

# ಸುದ್ದಿಗಾಗಿ ಸೇವೆ ಮಾಡಲಿಲ್ಲ, ಸದ್ದಿಲ್ಲದೆ ಸೇವೆ ಮಾಡಿ ದೇವರಾದರು

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.22:ಸುದ್ದಿಗಾಗಿ ಸೇವೆ ಮಾಡಲಿಲ್ಲ, ಸೇವೆ ಮಾಡಿ ಸುದ್ದಿ ಯಾಗಲಿಲ್ಲ, ಸದ್ದಿಲ್ಲದೆ ಸೇವೆ ಮಾಡಿ

ನಡೆದಾಡುವ ದೇವರಾದ ,ಕಾಯಕವೇ ಕೈಲಾಸ ವೆಂದ ವರು ಪಟ್ಟದೇವರು ಅದರಂತೆ ನಡೆದರು ನಡೆದಾಡುವ ದೇವರು ಚನ್ನಬಸವ ಪಟ್ಟ ದೇವರು, ಎಂದು ಎಸ್ ಎನ್ ಶಿವನಕರ ಹೇಳಿದರು. ಕಮಲನಗರದ ಆರಾಧ್ಯ ಗುರುಗಳು ಕನ್ನಡದ ಪಟ್ಟದೇವರು ಲಿಂಗೈಕ್ಯ.



ಮ. ಘ. ಚ. ಪೂಜ್ಯ ಶ್ರೀ ಚನ್ನಬಸವ ಪಟ್ಟದೇವರ 26ನೇ ಪುಣ್ಯಸ್ಮರಣೆಯನ್ನು ಅವರ ಹುಟ್ಟೂರು ಕಮಲನಗರದ ಚನ್ನಬಸವ ಗ್ರಂಥಾಲಯದಲ್ಲಿ ನಮನಸಲ್ಲಿಸಿ ಎಸ್ ಎನ್ ಶಿವನಕರ ನುಡಿದರು ಮಾತನಾಡಿದರು.

ನಮಗಾಗಿ ,ನಮ್ಮವರಿಗಾಗಿ ಮಾಡುವ ಕಾರ್ಯ ಗಳು ಕರ್ಮ ವಾದರೆ ,ಸಮಾಜಕ್ಕಾಗಿ ,ಸರ್ವರಿಗಾಗಿ ಮಾಡುವದು ಧರ್ಮ ಕರ್ಮವಾಗಿದೆ, ಇಂತಹ ಧರ್ಮ ಕರ್ಮ ಗಳನ್ನು ಮಾಡುತ್ತಾ. ಹಸಿದವರಿಗೆ ದಾಸೋಹಿಯಾಗಿ ಅನಾಥ ಮಕ್ಕಳ ಆಶ್ರಯದಾತರಾಗಿ, ಜ್ಞಾನ ದಾಸೋಹದ ಜ್ಞಾನಿಯಾಗಿ ಪರಮ ನಿರಂಜನ ತ್ರಿವಿಧ ದಾಸೋಹಿ ಯಾಗಿ ಸಮಾಜದ ಹರಿಕಾರ, ಸಮಾಜದ ಮೌಢ್ಯತೆ ಅಳಿಸಲು ಶ್ರಮಿಸಿದ ಜಂಗಮ ಗುರು ಚನ್ನಬಸವ ಪಟ್ಟ ದೇವರು,

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ರೈತ ಸಂಘದ ತಾಲೂಕ ಅಧ್ಯಕ್ಷ ಪ್ರವೀಣ ಕುಲಕರ್ಣಿ ಮಾತನಾಡಿ, ಪಟ್ಟದೇವರ ಸ್ಮರಣೋತ್ಸವನ್ನು ಆಚರಿಸಿ ಗುರುಗಳ ತತ್ವಗಳು, ಆದರ್ಶಗಳು, ಸಿದ್ಧಾಂತಗಳು ಸಮಾಜಕ್ಕೆ ಮತ್ತು ಇಂದಿನ ಯುವ ಪೀಳಿಗೆ ಮನ ಮುಟ್ಟಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮದಲ್ಲಿ ಗ್ರಾ.ಪಂ. ಸದ್ಯಸ ಸಾಯಿನಾಥ ಕಾಂಬಳೆ, ವಿಠ್ಠಲರಾವ, ಪ್ರಶಾಂತ ಖಾನಾಪುರೆ, ಸಂತೋಷ ಬನವಾಸೆ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ರಾಜ್ಯದ ಸಾರಿಗೆ ಸಚಿವರ ಪ್ರವಾಸ

ಕಲಬುರಗಿ,ಏ.22:ರಾಜ್ಯದ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಬೆಂಗಳೂರಿನಿಂದ ಸ್ಟಾರ್ ಏರ್ ವಿಮಾನದ ಮೂಲಕ ಏಪ್ರಿಲ್ 23 ರಂದು ಬುಧವಾರ ಬೆಳಿಗ್ಗೆ 9.20 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಜಂಟಿ ಸಾರಿಗೆ ಆಯುಕ್ತರು–ಪ್ರಾದೇಶಿಕ ಸಾರಿಗೆ ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿಯ ಪರಿಶೀಲನೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ಕಲಬುರಗಿ ವಿಭಾಗದ ಪ್ರಾದೇಶಿಕ ಸಾರಿಗೆ ಕಚೇ–ರಿಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ನಂತರ ಮಧ್ಯಾಹ್ನ 2 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೈದ್ರಾಬಾದ್‌ಗೆ ಪ್ರಯಾಣಿಸುವರು.

# ಭಕ್ತರಾಜ ಪಾಟೀಲಗೆ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 22 : ಬೆಂಗಳೂರಿನ ಭಾಷಾಂತರ ನಿರ್ದೇಶನಾಲಯದ ಉಪ ನಿರ್ದೇಶಕರಾಗಿರುವ ಜಿಲ್ಲೆಯ ಭಕ್ತರಾಜ ಪಾಟೀಲ ಅವರಿಗೆ ರಾಜ್ಯ ಸರ್ಕಾರದಿಂದ ಅತ್ಯುತ್ತಮ ಸೇವೆಗಾಗಿ ಕೊಡಲಾಗುವ 2023ನೇ ಸಾಲಿನ ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ದೊರೆತಿದೆ.

ಬೆಂಗಳೂರಿನಲ್ಲಿ ಸೋಮವಾರ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಪ್ರಶಸ್ತಿಯು ರೂ. 50 ಸಾವಿರ ನಗದು, ಫಲಕ ಹಾಗೂ ಪ್ರಶಸ್ತಿ ಪತ್ರವನ್ನು




ಒಳಗೊಂಡಿದೆ.

ಭಕ್ತರಾಜ ಪಾಟೀಲ ಅವರು ಜಿಲ್ಲೆಯ ಔರಾದ್ ತಾಲ್ಲೂಕಿನ ಬಾಚೆಪಳ್ಳಿ ಗ್ರಾಮದವರಾಗಿದ್ದಾರೆ.

1999 ರಲ್ಲಿ ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಇಲಾಖೆಯ ಅಧೀನದ ಭಾಷಾಂತರ ನಿರ್ದೇಶನಾಲಯದಲ್ಲಿ ಭಾಷಾಂತರಕಾರರಾಗಿ ನೇಮಕಗೊಂಡ ಅವರು, ವಿಧಾನಸಭೆ ಸಚಿವಾಲಯದಲ್ಲಿ ಶಾಖಾಧಿಕಾರಿ, ಅಧೀನಕಾರ್ಯದರ್ಶಿ, ರಾಜ್ಯ ಭಾಷೆ ಆಯೋಗದ ಸದಸ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಭಾಷಾಂತರ ಇಲಾಖೆಯ ಉಪ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಕೇಂದ್ರದ ಅಧಿನಿಯಮಗಳ ಕನ್ನಡ ಅನುವಾದ, ಭಾರತೀಯ ದಂಡ ಸಂಹಿತೆ, ದಂಡ ಪ್ರಕ್ರಿಯೆ ಸಂಹಿತೆ, ಭಾರತೀಯ ಸಾಕ್ಷ್ಯ ಅಧಿನಿಯಮಗಳ ಕನ್ನಡ ಅನುವಾದ ಹಾಗೂ ದ್ವಿಭಾಷಾ ಆವೃತ್ತಿ ಪ್ರಕಟಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಬೆಂಗಳೂರಿನ ಬೀದರ್ ಸಾಂಸ್ಕೃತಿಕ ಸಂಘದ ಕಾರ್ಯದರ್ಶಿಯೂ ಆಗಿದ್ದಾರೆ.

# ನಾಳೆ ಉಚಿತ ತಪಾಸಣೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 22 : ಚಾಂಬೋಳ್ (ಜನವಾಡ) ಬೋದರ್ ತಾಲ್ಲೂಕಿನ ಚಾಂಬೋಳ್ ಸಮೋಪದ ಜ್ಞಾನಸುಧಾ ಎ.ಕೆ.ಆಯುರ್ವೇದ ಆಸಪತ್ರೆಯಲ್ಲೂ ಏಪ್ರೆಲ್ 24 ರಂದು ಬೆಳಿಗ್ಗೆ 10 ಸಂಜೆ 7 ರವರೆ ಉಚಿತ ಮೊಣಕಾಲು ಸಂಧಿವಾತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲೂ ಮೊಣಕಾಲು ಕೀಲುಗಳ್ ಸಂಧಿವಾತ, ಮೊಣಕಾಲು ಕೀಲು ಊತ, ಕೀಲು ನೋವುಗಳ ತಪಾಸಣೆ ಮಾಡಲಾಗುವುದು. ಬೋದರ್ನ ಹೊಸ ಬಸನಿಲ್ದಾಣ ಬಳಿಯಿಂದ ಉಚಿತ ಬಸ್ ಸೌಲಭ್ಯ ಇರಲ್ಲದೆ. ಮಾಹಿತಿಗಾಗಿ ಮೊಬೈಲ್ ಸಂಖ್ಯೆಯ 9900854427 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜೆಇಇ ಮೇನ್ಸ್ ಪರೀಕ್ಷೆ: ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ



ಮಲ್ಲಮ್ಮನುಡಿವಾರ್ತೆ ಬೀದರ. ಏ. 22 : ಪ್ರಸಕ್ತ ಸಾಲಿನ ಜೆಇಇ ಮೇನ್ಸ್ ಪರೀಕ್ಷೆಯಲ್ಲಿ ಸಾಧನೆಗೈದ ಇಲ್ಲಿಯ ಸಪ್ತಗಿರಿ ಪದವಿಪೂರ್ವ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳನ್ನು ಕಾಲೇಜಿನಲ್ಲಿ ಮಂಗಳವಾರ ಸನ್ಮಾನಿಸಲಾಯಿತು.

ಪ್ರಾಚಾರ್ಯ ಗೋವಿಂದ ಡಿ. ತಾಂದಳೆ ಅವರು ವಿದ್ಯಾರ್ಥಿಗಳನ್ನು ಶಾಲು ಹೊದಿಸಿ, ಹೂಮಾಲೆ ಹಾಕಿ ಸತ್ಕರಿಸಿ, ಪ್ರೋತ್ಸಾಹಿಸಿದರು.

ಜೆಇಇ ಮೇನ್ಸ್ ಪರೀಕ್ಷೆಯಲ್ಲಿ ಕಾಲೇಜಿನ 19 ವಿದ್ಯಾರ್ಥಿಗಳು ಸಾಧನೆಗೈದು ಜೆಇಇ ಅಡ್ವಾನ್ಸ್ ಪರೀಕ್ಷೆಗೆ ಅರ್ಹತೆ ಗಳಿಸಿದ್ದಾರೆ ಎಂದು ಅವರು ತಿಳಿಸಿದರು.

ಸಂದೀಪ್ ಮಲ್ಲಿಕಾರ್ಜುನ 756 ನೇ ರ್ಯಾಂಕ್, ಮಾರುತಿ ವಿ. 2,178ನೇ ರ್ಯಾಂಕ್, ನಾಗೇಶಕುಮಾರ ಎಂ. 3,318ನೇ ರ್ಯಾಂಕ್, ಕೃಷ್ಣವೇಣಿ ಎಂ. 5,673ನೇ ರ್ಯಾಂಕ್, ಭಾಗ್ಯವಂತಿ ಜಿ. 7,803ನೇ ರ್ಯಾಂಕ್, ಆರತಿ ಎನ್. 7,907ನೇ ರ್ಯಾಂಕ್, ಭಾಗ್ಯಶ್ರೀ ಜಿ. 9,243ನೇ ರ್ಯಾಂಕ್, ನಂದಿನಿ ಬಿ. 10,357ನೇ ರ್ಯಾಂಕ್, ಪುನೀತ್ 12,513ನೇ ರ್ಯಾಂಕ್, ಅಭಿಷೇಕ ಎ. 13,487ನೇ ರ್ಯಾಂಕ್, ತನೀಶ್ ಸಿ. 41,399 ನೇ ರ್ಯಾಂಕ್ ಗಳಿಸಿದ್ದಾರೆ. ಜೆಇಇ ಅಡ್ವಾನ್ಸ್‌ಗೆ ಅರ್ಹತೆ ಗಳಿಸಿದ ಇತರ ವಿದ್ಯಾರ್ಥಿಗಳಲ್ಲಿ ಶುಭಾಂಗಿ ಎಸ್., ಸುಮೀತ್ ಜಿ.ಟಿ., ಡ್ಯಾನಿಯಲ್, ಆದಿತ್ಯ ಅಂಬುರೆ, ನಿಶ್ಚಿತಾ, ವಿನಾಯಕ ಸ್ವಾಮಿ, ಕಂಕನ ಮೈತಿ, ಸಾಯಿಕಿರಣ ಸೇರಿದ್ದಾರೆ ಎಂದು ಹೇಳಿದರು.

ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶ್ರೀನಿವಾಸ್ ಡಿ. ತಾಂದಳೆ, ಕಾರ್ಯದರ್ಶಿ ಗೋಪಾಲ್ ಡಿ. ತಾಂದಳೆ ಉಪಸ್ಥಿತರಿದ್ದರು. ಕಾಲೇಜು ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ನಾಳೆ ಬೀದರ್‌ನಲ್ಲಿ ವಕ್ಫ್ ಕಾಯಿದೆ ತಿದ್ದುಪಡಿ ವಿರುದ್ಧ ಹೋರಾಟ: ನಿಝಾಮುದ್ದಿನ್



ಬೀದರ:ಏ.22: ನಾಳೆ ಗುರುವಾರ ಅಖಿಲ ಭಾರತೀಯ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿಯಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಕ್ಫ್ ಕಾಯಿದೆ ತಿದ್ದುಪಡಿ ವಿರೋಧಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಂಡಳಿಯ ಪ್ರಮುಖರಾದ ಮಹಮ್ಮದ್ ನಿಝಾಮುದ್ದಿನ್ ಹೇಳಿದರು. ಮಂಗಳವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ನಾಳೆ ಬೆಳಿಗ್ಗೆ 10 ಗಂಟೆಗೆ ನಗರದ ಜಾಮಾ ಮಸಿದಿಯಿಂದ ಪ್ರತಿಭಟನೆ ಮೆರವಣಿಗೆ ಹಮ್ಮಿಕೊಂಡಿದ್ದು ನಗರದ ಚೌಬಾರಾ, ಗವಾನ ಚೌಕ್, ಶಹಾಗಂಜ್ ಮೂಲಕ ಅಂಬೇಡ್ಕರ್ ವೃತ್ತಕ್ಕೆ ತಲುಪಿ ಅಲ್ಲಿ ಪ್ರತಿಭಟನಾ ಸಭೆ ಜರುಗಲಿದೆ. ಅರ್ಧ ಗಂಟೆ ಪ್ರತಿಭಟನೆ ಸಭೆ ಬಳಿಕ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ವಕ್ಫ್ ಕಾಯಿದೆ ಸಂವಿಧಾನ ವಿರೋಧಿ ಕಾನೂನು ಆಗಿದ್ದು, ಅದನ್ನು ಕೂಡಲೇ ಹಿಂಪಡೆಯಬೇಕೆಂದು ಒತ್ತಾಯಿಸಿ ಡಿ.ಸಿ ಮೂಲಕ ರಾಷ್ಟಪತಿಗಳಿಗೆ ಮನವಿ ಪತ್ರ ಸಲ್ಲಿಸಲಾಗುತ್ತದೆ ಎಂದವರು ತಿಳಿಸಿದರು. ಅದೇ ರೀತಿ ಈ ತಿಂಗಳ 30ರಂದು ಬುಧವಾರ ರಾತ್ರಿ ಈ ಕಾಯಿದೆ ವಿರೋಧಿಸುವ ಎಲ್ಲರು ಅಂದು ರಾತ್ರಿ 9 ಗಂಟೆಯಿಂದ 9.30 ಗಂಟೆಯ ವರೆಗೆ ಮನೆಗಳಲ್ಲಿ ಲೈಟ್ ಆಫ್ ಮಾಡಿ ಮೌನ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ನಿಝಾಮುದ್ದಿನ್ ತಿಳಿಸಿದರು. ಮಂಡಳಿಯ ಮತ್ತೋರ್ವ ಮುಖಂಡರಾದ ಮಹಮ್ಮದ್ ಅಸದೊದ್ದಿನ್ ಈ ಸಂದರ್ಭದಲ್ಲಿ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಈ ಕಾಯಿದೆ ಸಂವಿಧಾನ ವಿರೋಧಿ ಕಾಯ್ದೆಯಾಗಿದೆ. ಇದು ಧಾರ್ಮಿಕ ಹಕ್ಕಿನ ನೇರ ಉಲ್ಲಂಘನೆಯಾಗಿರುತ್ತದೆ. ಸಾರ್ವಜನಿಕ ಆಸ್ತಿಗಳು ಒಂದು ವೇಳೆ ವಕ್ಫ್ ಆಸ್ತಿ ಎಂದು ದಾಖಲೆಗಳಲ್ಲಿ ಕಂಡು ಬಂದಲ್ಲಿ ಟ್ರಿಬುನಲ್ ಕೋರ್ಟ್ನಲ್ಲಿ ಅದನ್ನು ಬಗೆಹರಿಸಿಕೊಳ್ಳಬಹುದು, ಇಲ್ಲವೇ ಉಚ್ಚ ಹಾಗೂ ಸರ್ವೋಚ್ಚ ನ್ಯಾಯಾಲಯದಲ್ಲಿ ಅದನ್ನು ಪ್ರಶ್ನಿಸುವ ಅಧಿಕಾರ ಈ ದೇಶದ ಪ್ರತಿಯೊಬ್ಬರಿಗೂ ಇದೆ.

ಆದರೆ ಇತ್ತಿಚೀಗೆ ಕೇಂದ್ರ ಸರ್ಕಾರ ವಕ್ಫ್ ಮಂಡಳಿಯಲ್ಲಿ ಮುಸ್ಲಿಮೇತರರನ್ನು ಸೇರಿಸಿ ನಮ್ಮ ಧಾರ್ಮಿಕ ಹಕ್ಕು ಹನನ ಮಾಡುವ ದೊಡ್ಡ ಹುನ್ನಾರ ನಡೆದಿದೆ. ಪ್ರತಿಯೊಬ್ಬರಿಗೆ ತಮ್ಮ ಧಾರ್ಮಿಕ ಸಂಸ್ಥೆಗಳಲ್ಲಿ ಅದೇ ಧರ್ಮಿಯರು ಇರಬೇಕು ಇಲ್ಲಿ ಮುಸಲ್ಮಾನರೇತರರನ್ನು ಬೋರ್ಡ್ನಲ್ಲಿ ಸೇರಿಸಿ ಮುಸಲ್ಮಾನರನ್ನು ಎರಡನೇ ದರ್ಜೆಯ ಪ್ರಜೆಗಳನ್ನಾಗಿ ಪರಿಗಂಣಿಸಲು ಕೇಂದ್ರ ಸರ್ಕಾರ ಹೊರಟಿದೆ. ವಕ್ಫ್ ಆಸ್ತಿಗಳು ಶಾಶ್ವತ, ಅವು ಮಾರುವಂತಿಲ್ಲ ಅಥವಾ ಖರಿದಿಸುವಂತಿಲ್ಲ ಎಂಬ ನೇಮವನ್ನು ತೆಗೆದು ಹಾಕಿರುವುದು ಧಾರ್ಮಿಕ ಸ್ವತಂತ್ರದ ಮೇಲೆ ಗದಾ ಪ್ರಹಾರ ಮಾಡಲಾಗುತ್ತಿದೆ. ಅಲ್ಲಾನಿಗೆ ದೇಣಿಗೆ ನೀಡಿರುವ ಆಸ್ತಿ ಮುಸಲ್ಮಾನರ ಧಾರ್ಮಿಕ ಚಟುವಟಿಕೆಗಳಿಗೆ ಸೀಮಿತವಾಗಿಡಬೇಕು ಆದರೆ ಅವನ್ನು ಸಾರ್ವಜನಿಕ ಆಸ್ತಿಗಳನ್ನಾಗಿ ಮಾಡಲು ಹೊರಟಿರುವುದು ದೊಡ್ಡ ದುರಂತವೆಂದರು. ಮುಫ್ತಿ ಅಬ್ದುಲ್ ಜಲೀಲ್ ಖಾಸ್ಮಿ ಹಾಗೂ ಸಯ್ಯದ್ ಸರ್ಫರಾಜ್ ಹಾಸ್ಮಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

# ದೇವರ ದಾಸಿಮಯ್ಯ ಕ್ಷೇತ್ರ ಅಭಿವೃದ್ಧಿಗೆ ನಿಯೋಗ, ಸಚಿವ, ಸಂಸದರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಕನ್ನಡದ ಆದ್ಯ ವಚನಕಾರ ದೇವರ ದಾಸಿಮಯ್ಯ ಜನ್ಮಸ್ಥಳ ಜಿಲ್ಲೆಯ ಹುಣಸಗಿ ತಾಲ್ಲೂಕಿನ ಮುದನೂರ.ಬಿ ಗ್ರಾಮದಲ್ಲಿರುವ ಕ್ಷೇತ್ರವನ್ನು ಜಿಲ್ಲಾಡಳಿತ ಹಾಗೂ ಸರ್ಕಾರ ಸಮಗ್ರ ಅಭಿವೃದ್ಧಿಪಡಿಸಿ ಪ್ರವಾಸೋದ್ಯಮ ಕ್ಷೇತ್ರವನ್ನಾಗಿ ಮಾರ್ಪಡಿಸಿ ಎಂದು ಕರ್ನಾಟಕ ರಾಜ್ಯ ಹಟಗಾರ ಸಮಾಜದ ಅಧ್ಯಕ್ಷ ಆರ್.ಸಿ ಗಾಳೆ ನೇತೃತ್ವದಲ್ಲಿ ನಿಯೋಗ ಮಂಗಳವಾರ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಅವರ ಕಛೇರಿಯಲ್ಲಿ ಸಚಿವರನ್ನು ಹಾಗೂ ರಾಯಚೂರ ಸಂಸದ ಜಿ. ಕುಮಾರ ನಾಯಕ ಅವರನ್ನು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.



ರಾಜ್ಯದಲ್ಲಿಯೇ ದಾಸಿಮಯ್ಯ ಕ್ಷೇತ್ರ ಹಲವಾರು ವಿಶೇಷಗಳಿಂದ ಕೂಡಿದೆ, 7 ಪುಸ್ಕರಣಿಗಳಿವೆ, ಸರ್ಕಾರ ಈ ಹಿಂದೆ ಕ್ಷೇತ್ರದ ಅಭಿವೃದ್ಧಿಗೆ 5 ಕೋಟಿ ರೂ. ಮಂಜೂರು ಮಾಡಿದೆ, ಅದರಲ್ಲಿ 3 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ, ಈಗಾಗಲೇ ಅಲ್ಲಿ 4 ಪುಸ್ಕರಣಿಗಳನ್ನು ಅಭಿವೃದ್ಧಿಪಡಿಸಲಾಗಿದೆ, ಭವ್ಯ ಕಲ್ಯಾಣ ಮಂಟಪ ನಿರ್ಮಾಣ ಮಾಡಲಾಗಿದೆ, ಆದರೆ ಭಕ್ತರನ್ನು ಕಾಡುತ್ತಿರುವ ಪ್ರಮುಖ ಪ್ರಶ್ನೆ ಏನೆಂದರೇ ದೇವಸ್ಥಾನದ ಮೇಲೆ ಗ್ರಾಮದ ಜನರು 160 ಮನೆಗಳನ್ನು ಕಟ್ಟಿಕೊಂಡಿದ್ದಾರೆ, ಇದರಿಂದ ಅಭಿವೃದ್ಧಿಗೆ ತೊಂದರೆಯಾಗುತ್ತಿದೆ, ಕೂಡಲೇ ಸ್ಥಳಾಂತರಿಸಬೇಕು ಎಂದು ವಿವರಿಸಿದರು.

ಈ ಹಿಂದೆ ಅಲ್ಲಿ ಶಾಸಕರ ಅನುದಾನದಲ್ಲಿ ಸಭಾ ಭವನ ನಿರ್ಮಾಣ ಮಾಡಲಾಗಿದೆ, ಆದರೆ ಆ ನಿವೇಶನ ನೀಡಿದ ಮಾಲಿಕ ಒತ್ತುವರಿ ಮಾಡಿಕೊಂಡಿದ್ದಾನೆ, ಅವನಿಂದ ಬಿಡಿಸಬೇಕು, ಜಿಲ್ಲಾಡಳಿತದಿಂದ ಈಗಾಗಲೇ ಗ್ರಾಮದ ಹೊರ ವಲಯದಲ್ಲಿ 10 ಎಕರೆ ಜಮೀನು ಮಂಜೂರಿ ಮಾಡಲಾಗಿದೆ, ಅಲ್ಲಿ 200 ಮನೆಗಳನ್ನು ನಿರ್ಮಾಣ ಮಾಡಲು ಲೆಔಟ್ ಅಭಿವೃದ್ಧಿ ಪಡಿಸಬೇಕು.

ಈಗಾಗಲೇ ಜಿಲ್ಲಾಡಳಿತದಿಂದ 4 ಪುಸ್ಕರಣಿಗಳನ್ನು ಅಭಿವೃದ್ಧಿಪಡಿಸಲಾಗಿದೆ, ಅದರಂತೆ ಇನ್ನೂಳಿದ ಮರಳು ತೀರ್ಥ, ಲಕ್ಷ್ಮಣ ತೀರ್ಥ, ಸಂಗಮ ತೀರ್ಥ ಪುಸ್ಕರಣಿಗಳನ್ನು ಅಭಿವೃದ್ಧಿಪಡಿಸಬೇಕು, ಇದ-ರಿಂದ ಪ್ರವಾಸಿಗರಿಗೂ ಹಾಗೂ ರೈತರಿಗೂ ಅನುಕೂಲತೆಯಾಗುತ್ತದೆ ಎಂದು ಮನವಿ ಮಾಡಿದರು.

ಮುಜರಾಯಿ ಇಲಾಖೆಯಿಂದ ಜಿಲ್ಲಾಧಿಕಾರಿ ಖಾತೆಗೆ ಬಿಡುಗಡೆ-ಯಾದ 2 ಕೋಟಿ ರೂ. ಅನುದಾನ ಜಮಾ ಮಾಡಬೇಕು, ದೇವಸ್ಥಾನ ಸುತ್ತ-ಮುತ್ತ ಸ್ಥಳ ಸರ್ವೇ ಮಾಡಿಸಿ, ವಸ್ತು ಸಂಗ್ರಹಾಲಯ ನಿರ್ಮಾಣ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಿಯೋಗದೊಂದಿಗೆ ಮಾತನಾಡಿದ ಸಚಿವ ದರ್ಶನಾಪೂರ, ದಾಸಿಮಯ್ಯ ಕ್ಷೇತ್ರ ಒಂದು ಸುಂದರ ನಿಸರ್ಗದಲ್ಲಿದೆ, ಆ ಕ್ಷೇತ್ರ ಅಭಿವೃದ್ಧಿಪಡಿಸಬೇಕೆಂಬುದು ಸರ್ಕಾರದ ಅಭಿಲಾಷೆಯಾಗಿದೆ, ಜಿಲ್ಲಾಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳಲು ನಾನು, ಸಂಸದರು ಸೂಚನೆ ನೀಡಿದ್ದೇವೆ, ಅಲ್ಲದೇ ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳಲು ಸೂಚಿಸಿದ್ದೇವೆ, ಎಲ್ಲದಕ್ಕೂ ಗ್ರಾಮಸ್ಥರು ಸಹಕರಿಸಬೇಕೆಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಡಾ. ಸುಶೀಲಾ ಬಿ. ಮಾತನಾಡಿ, ಸಮಸ್ಯೆ ಪರಿಹಾರಕ್ಕೆ ನಾನು ಎಲ್ಲಾ ಹಂತಗಳಲ್ಲಿ ಅಧಿಕಾರಿಗಳ ಸಭೆ ನಡೆಸಿದ್ದೇನೆ, ನಿಮ್ಮೆಲ್ಲರ ಅಪೇಕ್ಷೆಯಂತೆ ದಾಸಿಮಯ್ಯ ಕ್ಷೇತ್ರವನ್ನು ಪ್ರವಾಸೋಧ್ಯಮ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಲು ತಿಳಿಸಲಾಗುವುದು ಎಂದು ಭರವಸೆ ನೀಡಿದರು.

ಸಂಸದರ ಜೊತೆ ಮಾತನಾಡಿದ ಮುಖಂಡರು, ನಾಡಿಗೆ ದಾಸಿಮಯ್ಯನವರು ಮಾನವೀಯ ಮೌಲ್ಯಗಳ ವಚನಗಳನ್ನು ರಚಿಸಿ, ಸಮಾಜದಲ್ಲಿ ಜಾಗೃತಿ ಮೂಡಿಸಿದ್ದಾರೆ, ಆ ಕ್ಷೇತ್ರದಲ್ಲಿ ಭವ್ಯ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಅನುದಾನ ನೀಡಬೇಕೆಂದು ಒತ್ತಾಯಿಸಿದರು.

ನಿಯೋಗದಲ್ಲಿ ದೇವರ ದಾಸಿಮಯ್ಯ ವಿಚಾರ ವೇದಿಕೆಯ ಅಧ್ಯಕ್ಷ ಶಾಂತರಡ್ಡಿ ಚೌದ್ರಿ ಮುದನೂರ, ಪ್ರಭುಗೌಡ ಹರನಾಳ, ಚನ್ನಯ್ಯಸ್ವಾಮಿ ಹಿರೇಮಠ, ರಮೇಶ ಸಾಹು ಕೊಳ್ಳಿ ಸೇರಿದಂತೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರಡ್ಡಿ ಪಾಟೀಲ್ ಅನಪೂರ, ಪ್ರಧಾನ ಕಾರ್ಯದರ್ಶಿ ಬಸ್ಸುಗೌಡ ಬಿಳ್ಹಾರ, ಭೀಮರಾಯ ಠಾಣಾಗುಂದಿ ಇತರರು ಉಪಸ್ಥಿತರಿದ್ದರು.

## ಏಪ್ರಿಲ್. 28 ರಂದು ಕಿನ್ನಾಳ ಗ್ರಾಮದಲ್ಲಿ ಕಂದಾಯ ಅದಾಲತ್- ನ್ಯಾ. ಮಹಾಂತೇಶ್ ಎಸ್. ದರಗದ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಕಿನ್ನಾಳ ಗ್ರಾಮದಲ್ಲಿ ಏಪ್ರಿಲ್. 28 ರಂದು ಕಂದಾಯ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಕಿನ್ನಾಳ ಗ್ರಾಮದ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಕೊಪ್ಪಳದ ಮಹಾಂತೇಶ್ ಎಸ್. ದರಗದ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಛೇರಿ ಸಭಾಂಗಣದಲ್ಲಿ ಕಿನ್ನಾಳ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗುತ್ತಿರುವ ಕಂದಾಯ ಅದಾಲತ್ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಕೊಪ್ಪಳ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಕಿನ್ನಾಳ ಗ್ರಾಮವನ್ನು ದತ್ತು ಪಡೆದ ನಂತರ ಈ ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗಾಗಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಏಪ್ರಿಲ್. 28 ರಂದು ಬೆಳಿಗ್ಗೆ 10 ಗಂಟೆಗೆ ಕಿನ್ನಾಳ ಗ್ರಾಮ ಪಂಚಾಯತಿಯಲ್ಲಿ ಕಂದಾಯ ಅದಾಲತ್ ಹಮ್ಮಿಕೊಳ್ಳಲಾಗಿದೆ. ಈ ಅದಾಲತ್‌ನಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ, ವೃದ್ದಾಪ್ಯ ವೇತನ, ಅಂಗವಿಕಲರ ವೇತನ, 371 ಜೆ ಪ್ರಮಾಣ ಪತ್ರ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ್ಯ ಇಲಾಖೆ ವತಿಯಿಂದ ಉದ್ಯೋಗ ಖಾತ್ರಿ ಕಾರ್ಡಗಳ ವಿತರಣೆ, ಜನನ ಮರಣ ಪ್ರಮಾಣ ಪತ, ಇ- ಸ್ವತ್ತಿನ ದಾಖಲಾತಿ ಹಾಗೂ ನಿರಾಪೇಕ್ಷಣ ಪ್ರಮಾಣ ಪತ್ರ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ಇತರೆ ವಿಷಯಗಳ ಕುರಿತು ಈ ಕಂದಾಯ ಅದಾಲತನಲ್ಲಿ ಸಾರ್ವಜನಿಕರು ಮಾಹಿತಿ ಪಡೆಯಬಹುದಾಗಿದೆ ಎಂದರು.

ಕಂದಾಯ ಅದಾಲತನಲ್ಲಿ ಕೊಪ್ಪಳ ತಹಶಿಲ್ದಾರರು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಎ.ಡಿ.ಎಲ್.ಆರ್, ಆರ್.ಐ, ವಿ.ಎ ಸೇರಿದಂತೆ ಕಂದಾಯ ಇಲಾಖೆಗೆ ಸಂಬಂಧಿಸಿದ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವುದರಿಂದ ಕಿನ್ನಾಳ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಂದಾಯ ಅದಾಲತನ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಪ್ರಥಮ ದರ್ಜೆ ಸಹಾಯಕ ಹನೀಫ್. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ ಜಿ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಇಂದಿನಿಂದ 'ಬಸವ ದರ್ಶನ' ಪ್ರವಚನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಲಬುರ್ಗಾ : ರಂದು ಸಾಯಂಕಾಲ6. 30 ಕ್ಕೆ ಬಸವ ದರ್ಶನ ಪ್ರವಚನ ಕಾರ್ಯಕ್ರಮವನ್ನು ಸ್ಥಳೀಯ ಬಸವ ಶಿವಯೋಗ ಸಮಿತಿ ಯಿಂದ ಪಟ್ಟಣದ ಶ್ರೀ ಸಾಯಿ ಪ್ಯಾಲೇಸ್ ನಲ್ಲಿ ಪ್ರಾರಭವಾಗಲಿದೆ. ದಿ.23 ರಿಂದ ದಿ.30 ರವರೆಗೆ ಪ್ರತಿನಿತ್ಯ ಸಾಯಂಕಾಲ 6-30 ರಿಂದ 7-30 ರವರೆಗೆ ಪ್ರವಜನ ಜರುಗಲಿದೆ. ದಿ.23 ರಂದು ಹುಬ್ಬಳ್ಳಿಯ ಚನ್ನಬಸವಣ್ಣ ಗುರೂಜಿ ರವರು ಉದ್ಘಾಟಿಸಲಿದ್ದಾರೆ. ಬೀದರಿನ ಬಸವ ಮಂಟಪದ ಮಾತೆ ವಚನ ಸಂಸ್ಕೃತಿ ತಾಯಿಯವರು ಪ್ರವಚನ ನೀಡುವರು ಎಂದು ಬಸವ ಶಿವಯೋಗ ಸಮಿತಿ ಅಧ್ಯಕ್ಷರಾದ ಸಂಗಣ್ಣ ಟೆಂಗಿನಕಾಯಿ ಹಾಗೂ ಉಪಾಧ್ಯಕ್ಷರಾದ ಶಿವಮೂರ್ತಿ ಇಟಗಿರವರು ಸರ್ವರಿಗೂ ಸ್ವಾಗತ ಕೋರಿದ್ದಾರೆ.

### ಸರಿಪಡಿಸುವಂತೆಯೇ ಡಿಸಿಯವರಿಗೆ ಶಾಸಕರ ಸೂಚನೆ.

## ಇಂದೇ ಎಲ್ಲರಿಗೂ ನೋಟಿಸ್ ಜಾರಿ : ಡಿಸಿ ಭರವಸೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಂಗಳವಾರ ಬೆಳ್ಳಂಬೆಳಗ್ಗೆನೆ ಸರ್ಕಾರಿ ಕಚೇರಿಗಳಿಗೆ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಭೇಟಿ ನೀಡುವ ಮೂಲಕ ವಿವಿಧ ನಲವತ್ತಕ್ಕೂ ಹೆಚ್ಚು ಇಲಾಖೆಗಳ ಅಧಿಕಾರಿಗಳಿಗೆ ಶಾಕ್ ನೀಡಿದ್ದಾರೆ. ಬಿಸಿಲಿನ ತಾಪಮಾನ ಹೆಚ್ಚಾದ ಹಿನ್ನಲೆಯಲ್ಲಿ ಕಳೆದ ಏ.1 ರಿಂದ ಮೇ 31 ರವರೆಗೂ ಸರ್ಕಾರಿ ಕಚೇರಿಗಳ ಸಮಯ ಬೆಳಗ್ಗೆ 8 ರಿಂದ ಮಧ್ಯಾಹ್ನ 1.30 ರವರೆಗೂ ನಿಗದಿ ಮಾಡಲಾಗಿದೆ.

ಈ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆಯೇ ಬದಲಾದ ಸಮಯಕ್ಕೆ ನೌಕರರು ಬರುತ್ತಿದ್ದಾರೋ ಇಲ್ಲ ಎಂದು ಪರಿಶೀಲನೆಗಾಗಿ ಶಾಸಕರು ಬೆಳಗ್ಗೆ 8ಕ್ಕೆ ಜಿಲ್ಲಾಡಳಿತ ಭವನದ ಕಟ್ಟಡಕ್ಕೆ ತೆರಳಿ ಸುಮಾರು ಒಂದುವರೇ ತಾಸು ವಿವಿಧ ಇಲಾಖೆಗಳ ಕಚೇರಿಗಳಿಗೆ ಭೇಟಿ ನೀಡಿದರೇ ಬಹುತೇಕ ಶೇ.90 ರಷ್ಟು ಅಧಿಕಾರಿಗಳ ಕುರ್ಚಿಗಳು ಖಾಲಿ ಇದ್ದವು.

ಇದನ್ನು ನೋಡಿ ದಂಗಾದ ಶಾಸಕರು, ಸಮಯ ಬದಲಿ ಆಗಿ 22 ದಿನಗಳು ಕಳೆದರೂ ಬಹುತೇಕರು ಇನ್ನೂ ಹಿಂದಿನ ಸಮಯಕ್ಕೆ ಬರುತ್ತಿದ್ದಾರೆಂಬ ಮಾಹಿತಿ ಅಲ್ಲಿದ್ದ ಸಾರ್ವಜನಿಕರಿಂದ ಕೇಳಿದ ಮೇಲಂತೂ ಶಾಸಕರು, ನೇರವಾಗಿ ಡಿಸಿ ಡಾ.ಸುಶೀಲಾ ಅವರ ಕೊಠಡಿಗೆ ತೆರಳಿದ್ದಾರೆ. ಆಗ ಅವರು ಕೂಡಾ ಇನ್ನು ಬಂದಿರಲಿಲ್ಲ. ಹೀಗಾಗಿ ಶಾಸಕರು ಕೆಲಹೊತ್ತು ನಮ್ಮ ಜಿಲ್ಲೆಯಲ್ಲಿ ಸಮಯ ಬದಲಾಗಿದೆಯೋ, ಇಲ್ಲವೋ ಎಂಬ ಗೊಂದಲಕ್ಕೆ ಬಿದ್ದು ಜಿಲ್ಲಾಧಿಕಾರಿಗಳಿಗೆ ಫೋನ್ ಮಾಡಿ, ತಮಗಾದ ಅನುಭವ ಮತ್ತು ಬಹುತೇಕ ಅಧಿಕಾರಿಗಳು ಇನ್ನೂ ತಮ್ಮ, ತಮ್ಮ ಕಚೇರಿಗಳಿಗೆ ಭೇಟಿ ನೀಡದೇ ಇರುವ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ. ನೌಕರರಿಗೆ ಮತ್ತು ಸಾರ್ವಜನಿಕರಿಗೆ ಬಿಸಿಲಿನಿಂದ ತೊಂದರೆ ಆಗಬಾರದೆಂಬ ಉದ್ದೇಶದಿಂದ ಸರ್ಕಾರ ಸಮಯ ಬದಲಿಸಿ ತಿಂಗಳ ಸಮೀಪಿಸುತ್ತಿದೆ, ಆದರೂ ಅಧಿಕಾರಿಗಳು ಸಮಯ ಪಾಲನೆ ಮಾಡುತ್ತಿಲ್ಲ ಎಂದು ಡಿಸಿ ಅವರಿಗೆ ತಿಳಿಸಿದಾಗ, ಇಲ್ಲ ಸರ್ ಬಂದಿರುತ್ತಾರೆ, ಉಪಹಾರ ಸೇವನೆಗಾಗಿ ಅಲ್ಲಿ ಎಲ್ಲಿಯೋ ಹೊಗಿರುತ್ತಾರೆಂಬ ಸಮಜಾಯಿಸಿ ನೀಡಲು ಮುಂದಾದಾಗ, ಇಲ್ಲ ಮೇಡಂ ಅವರೇ ಉಪಹಾರ ಮಾಡುವ ಜಾಗಕ್ಕೂ ಹೋಗಿ ಬಂದಿದ್ದೆನೆ, ಎಲ್ಲೂ ಯಾರು ಇಲ್ಲ ಎಂದು ತಿರುಗಿ ಹೇಳಿ, ನಾಳೆಯಿಂದ ಹೀಗಾಗಬಾರದು ಅದಕ್ಕೆ ಏನು ಮಾಡಿತ್ತಿರಿ ನೋಡಿ ಎಂದಾಗ, ಆಯಿತು ಸರ್ ಇಂದೇ ಎಲ್ಲರಿಗೂ ಸೂಚನೆ ಕಳುಹಿಸಿ ಕಡ್ಡಾಯವಾಗಿ ಸಮಯ ಪಾಲನೆ ಮಾಡುವಂತೆಯೇ ತಾಕಿತು ಮಾಡುವುದಾಗಿ ಶಾಸಕರಿಗೆ ಡಿಸಿ ಡಾ.ಸುಶೀಲಾ ಅವರು ಭರವಸೆ ನೀಡಿದ ಮೇಲೆ ಶಾಸಕರು ಅಲ್ಲಿಂದ ವಾಪಸ್ ಆಗಿದ್ದಾರೆ.

## ಲುಂಬಿನಿ ಉದ್ಯಾನವನ ಬೋಟಿಂಗದಲ್ಲಿ ಮಕ್ಕಳ ಕಲರವ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏಪ್ರಿಲ್ 22- ಲುಂಬಿನಿ ಉದ್ಯಾನವನ ಬೋಟಿಂಗದಲ್ಲಿ ಮಕ್ಕಳ ಕಲರವ ಬಾಲಕರ ಬಾಲ ಮಂದಿರದ ಮಕ್ಕಳನ್ನು ಬೇಸಿಗೆ ಒಂದು ದಿನದ ಶಿಬಿರ ಪ್ರವಾಸವನ್ನು ಹಮ್ಮಿಕೊಳ್ಳಲಾಯಿತು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಶ್ರೀ ಪ್ರೇಮ್‌ಮೂರ್ತಿ ಕೆ. ಅವರು ಹೇಳಿದರು. ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಮತ್ತು ಜಿಲ್ಲಾ ಬಾಲ ಭವನ ಸೊಸೈಟಿ ಯಾದಗಿರಿ, ಬಾಲಕಿಯರ ಬಾಲ ಮಂದಿರ ಹಾಗೂ ಬಾಲಕರ ಬಾಲ ಮಂದಿರ ಮಕ್ಕಳಿಗೆ ಒಂದು ದಿನದ ಹೊರ ಸಂಚಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಬಾಲ ಭವನದಿಂದ ಜಿಲ್ಲಾ ಲುಂಬಿನಿ ಉದ್ಯಾನವನದಲ್ಲಿ ಬಾಲಕಿಯರ ಹಾಗೂ ಬಾಲಕರ ಬಾಲ ಮಂದಿರದ ಮಕ್ಕಳನ್ನು ಬೇಸಿಗೆ ಶಿಬಿರ ಮುಗಿಸಿ ಹೊರಸಂಚಾರಕ್ಕೆ ಜಿಲ್ಲಾ ಉದ್ಯಾನವನದಲ್ಲಿ ಬೋಟಿಂಗ್‌ನಲ್ಲಿ ಮಕ್ಕಳನ್ನು ಕರೆದುಕೊಂಡು ಹೋಗಲಾಯಿತು. ಬೋಟಿಂಗ್‌ನಲ್ಲಿ ಮಕ್ಕಳು ಸಂತೋಷಪಟ್ಟರು. ಜಿಲ್ಲೆಯ ಉದ್ಯಾನವನದಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ಬೋಟಿಂಗ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಈ ಅವಕಾಶವನ್ನು ಜಿಲ್ಲೆಯ ಪ್ರತಿ ಪಾಲಕರು ತಮ್ಮ ಮಕ್ಕಳನ್ನು ಕರೆದುಕೊಂಡು ಉದ್ಯಾನವನದ ಬೋಟಿಂಗ್‌ನ್ನು ಉಪಯೋಗಿಸಬೇಕು ಎಂದರು.

## ಮೊಳಕೆಯಲ್ಲಿ ನೀಡಿದ ಸಂಸ್ಕಾರ, ಮುಂದೆ ಮರವಾಗಿ ಫಲ ನೀಡುವುದು : ಗುರೂಜೀ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳಿಗೆ ಮೌಲ್ಯಾಧಾರಿತ ಶಿಕ್ಷಣದ ಅಗತ್ಯವಿದೆ, ಶಿಕ್ಷಕರು ಆಚಾರ್ಯರಾಗುವ ಜೊತೆಗೆ ಸದಾಚಾರ, ಮಾತೃಹೃದಯ, ಭವಿಷ್ಯ ನಿರ್ಮಾಣದ ಉತ್ಸುಕತೆ ಹೊಂದಿರಬೇಕು, ಈ ನಿಟ್ಟಿನಲ್ಲಿ ಮೊಳಕೆಯಲ್ಲಿಯೇ ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ನೀಡುವುದರಿಂದ ಮಕ್ಕಳು ಒಳ್ಳೆಯ ಹುದ್ದೆಗಳನ್ನು ಪಡೆದು ಸಮಾಜದಲ್ಲಿ ಉತ್ತಮ ಸ್ಥಾನ ಆದರ್ಶಮಯ ವ್ಯಕ್ತಿಗಳಾಗಿ ಬೆಳೆಯುತ್ತಾರೆ ಎಂದು ಋಷಿಕೇಶದಿಂದ ಆಗಮಿಸಿದ ಖ್ಯಾತ ಯೋಗ ಗುರುಗಳಾದ ಜಿ. ಸುರೇಶ ಕುಮಾರ ಗುರೂಜಿ ನುಡಿದರು.

ನಗರದ ವಿಶ್ವರಾಧ್ಯ ನಗರದ ಮಹರ್ಷಿ ವಾಲ್ಮೀಕಿ ಭವನದಲ್ಲಿ ರುದ್ರ ಸಂಜೀವಿನಿ, ವ್ಯಕ್ತಿತ್ವ ವಿಕಸನ ಕಾರ್ಯಕ್ರಮದ, ಮಕ್ಕಳ ಸಂಸ್ಕಾರ ಬೇಸಿಗೆ ಶಿಬಿರದ 1ನೇ ಬ್ಯಾಚ್‌ನ ಮುಕ್ತಾಯದ ಅಂಗವಾಗಿ ಗುರುವಂದನಾ ಕಾರ್ಯಕ್ರಮದಲ್ಲಿ ಮಕ್ಕಳನ್ನು ಹಾಗೂ ಶಿಭಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು

ಈ ಶಿಬಿರದಲ್ಲಿ ಯೋಗಾಸನ, ಪ್ರಾಣಾಯಾಮ, ಧ್ಯಾನ-ಜ್ಞಾನ, ಮಂತ್ರ ಪಠಣ, ವ್ಯಕ್ತಿತ್ವ ವಿಕಾಸ, ಜವಾಬ್ದಾರಿ, ನಾಯಕತ್ವ ಗುಣ, ಸಕರಾತ್ಮಕ ದೃಷ್ಟಿಕೋನ, ಆತ್ಮ ವಿಶ್ವಾಸ, ವಿನೋದ ಕ್ರೀಡೆ ಹೀಗೆ ಹಲವೂ ವಿಚಾರಗಳನ್ನು ಒಳಗೊಂಡ ಭಾರತೀಯ ಸಂಸ್ಕೃತಿ-ಸಂಪ್ರದಾಯದ ಪುರಾತನ ಸನಾತನ ಧರ್ಮದ ವಿಚಾರಗಳನ್ನೊಳಗೊಂಡ ಗುರುಕುಲ ಪದ್ಧತಿಯಂತೆ ನಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಕ್ಕಳು, ಪಾಲಕರು-ಪೋಷಕರು, ಶಿಬಿರಾರ್ಥಿಗಳು, ಉಪಸ್ಥಿತರಿದ್ದರು.

2ನೇ ಬ್ಯಾಚ್‌ನ ನೋಂದಣಿಗಾಗಿ ತಕ್ಷಣ ಸಂಪರ್ಕಿಸಿ: 9964233272 / 9535828344

## ಗ್ರಂಥಾಲಯಗಳಿಗೆ ಒಂಬತ್ತು ಕಂಪ್ಯೂಟರ್ ವಿತರಣೆ : ಶಾಸಕ ಚನ್ನಾರಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗ್ರಂಥಾಲಯಗಳ ಡಿಜಿಟೀಲಕರಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದು, ಇದ-ರಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೀಲವಾಗಲಿದೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರ್ ಹೇಳಿದರು. ಮಂಗಳವಾರ ಶಾಸಕರ ಕಚೇರಿಯಲ್ಲಿ ತಮ್ಮ ಮತಕ್ಷೇತ್ರದ ಏಳು ಗ್ರಾಮಪಂಚಾಯತಗಳ ಗ್ರಂಥಾಲಯಗಳಿಗೆ ಒಟ್ಟು 9 ಕಂಪ್ಯೂಟರ್ ಹಾಗೂ ಇನ್ನತರೆ ಉಪಕರಣಗಳನ್ನು ವಿತರಿಸಿ ಮಾತನಾಡಿದ ಅವರು, ಸುಮಾರು 3ಲಕ್ಷ ರೂ ವೆಚ್ಚದ ವಿವಿಧ ಯಂತ್ರೋಪಕರಣಗಳನ್ನು ನೀಡಲಾಗಿದ್ದು, ಅವಶ್ಯಕ ವಸ್ತುಗಳು ಬೇಕಾದಲ್ಲಿ ಒದಗಿಸಲಾಗುವುದು ಎಂದರು.

ಇದೇ ವೇಳೆ ಮತಕ್ಷೇತ್ರದ ಚಟ್ನಳ್ಳಿ ಹಾಗೂ ಗುರಸಗುಂಡಗಿ ಗ್ರಾಮದ ಅರ್ಹ ವಿಕಲಚೇತನ ಅಭ್ಯರ್ಥಿಗಳಿಗೆ ಎಲೆಕ್ಟ್ರೀಕಲ್ ದ್ವಿಚಕ್ರ ವಾಹನ ವಿತರಿಸಿದರು. ಈ ವೇಳೆ ಮಾತನಾಡಿದ ಅವರು ಸಾರಿಗೆ ನಿಯಮಗಳನ್ನು ಪಾಲಿಸಬೇಕು. ಹೆಲ್ಮೆಟ್ ಕಡ್ಡಾಯವಾಗಿ ಧರಿಸಬೇಕು. ಅತೀವೇಗದಿಂದ ವಾಹನ ಚಲಾಯಿಸಿ ಜೀವಕ್ಕೆ ಅಪಾಯ ತಂದುಕೊಳ್ಳಬೇಡಿ ಎಂದು ಕಿವಿಮಾತು ಹೇಳಿದರು.

ನಗರದ ಜನತೆ ಬಿಸಿಲಿನ ತಾಪಮಾನದಿಂದ ಅಲ್ಪ ವಿರಾಮ ಪಡೆಯಲು ನೇತಾಜಿ ಸರ್ಕಲ್ ಸೇರಿದಂತೆ ಇನ್ನಿತರ ವೃತ್ತಗಳಲ್ಲಿ ಗ್ರಿನ್ ನೆಟ್ ಅಳವಡಿಸುವ ಕುರತಂತೆ ನಗರಸಭೆ ಅಧಿಕಾರಿ ರಜನಿಕಾಂತ ಹಾಗೂ ಸಿಪಿಐ ಸುನೀಲ್ ಮೂಲಿಮನಿ ಅವರಿಗೆ ಸೂಚನೆ ನೀಡಿದರು.

ನಗರಸಭೆಯಿಂದ ಕೈಗೊಳ್ಳಲಾಗುವ ಈ ಕಾಮಗಾರಿಗೆ ಏನಾದರೂ ಸಹಾಯ ಬೇಕಿದ್ದರೆ ಶಾಸಕರ ನಿಧಿಯಿಂದ ಮಾಡುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ಬಸವರಾಜ ಶರಬಯ್ಯಾ ಕಾರ್ಯನಿರ್ವಾಹಕ ಅಧಿಕಾರಿ ತಾಲೂಕ ಪಂಚಾಯತ ಶಹಾಪುರ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಮಲ್ಲಿಕಾರ್ಜುನ ಈಟೆ, ಲಚಮ ರೆಡ್ಡಿ, ಶರಣಬಸವ ಕುರಕುಂದಿ, ಶರಣಪ್ಪ ಜಂಬೆ, ಅಮಾತೆಪ್ಪ ಪೂಜಾರಿ, ಬಸವರಾಜಪ್ಪ ಕೊಂಕಲ್, ಸುರೇಶ ಜಾಕ, ಪ್ರಭಾಕರ್ ಜೀ, ಕ್ರಿಷ್ಟೋಪರ್ ಬೆಳ್ಳಿ, ಶಿವಕುಮಾರ ಕರದಳ್ಳಿ ಹಾಗೂ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

## ಪರೋಪಕಾರಿ ಕೆಲಸಗಳಿಂದ ಮನುಷ್ಯನ ಜನ್ಮ ಸಾರ್ಥಕ: ಜಿಲ್ಲಾಧ್ಯಕ್ಷ ಸಂಕಿನ




ಮಲ್ಲಮ್ಮ ನುಡಿ ವಾರ್ತೆ

ವಡಗೇರಾ : ಸಮಾಜಮುಖಿ ಹಾಗೂ ಪರೋಪಕಾರಿ ಕೆಲಸಗಳಿಂದ ಮಾತ್ರ ಮನುಷ್ಯನ ಜನ್ಮ ಸಾರ್ಥಕ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕಿನ ಹೇಳಿದರು. ತಾಲೂಕಿನ ತುಮಕೂರು ಗ್ರಾಮದಲ್ಲಿ ಇಕ್ಷು ಫಾರ್ಮ್ ಪ್ರೈವೇಟ್ ಲಿಮಿಟೆಡ್ ಕಂಪನಿ ಮುಖ್ಯಸ್ಥರಾದ ಚೇತನ್ ಕಂಪನಿ ವ್ಯವಸ್ಥಾಪಕರಾದ ರಾಜಶೇಖರ್ ಮತ್ತು ಕರವೇ ಜಿಲ್ಲಾ ಉಪಾಧ್ಯಕ್ಷರಾದ ಚೌಡಯ್ಯ ಬಾವೂರ ಸಹಕಾರದೊಂದಿಗೆ ಸ್ಥಾಪಿಸಿರುವ ನೀರಿನ ಅರವಟಿಗೆ ಕಾರ್ಯ-ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಅತಿ ಹೆಚ್ಚು ಬಿಸಿಲಿನ ತಾಪವಿದ್ದು ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು. ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಉಪಾಧ್ಯಕ್ಷ ಚೌಡಯ್ಯ ಬಾವೂರ ಮಾತನಾಡಿ ಎಲ್ಲಾ ದಾನಕ್ಕಿಂತಲೂ ಕುಡಿಯುವ ನೀರಿನ ದಾನ ಅತ್ಯಂತ ಮಹತ್ವದ್ದಾಗಿದೆ ಆ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶದಿಂದ ಬರುವ ಸಾರ್ವಜನಿಕರಿಗೆ ನೀರಿನ ದಾಹ ತಣಿಸಲು ನಮ್ಮ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಎಲ್ಲರ ಸಹಕಾರದೊಂದಿಗೆ ಕಲ್ಪಿಸಿದ್ದೇವೆ ಎಂದು ಅವರು ತಿಳಿಸಿದರು

ಈ ಸಂದರ್ಭದಲ್ಲಿ ಶರಬಲಿಂಗ ಕಂಟೆಕಾಯಿ, ಮೌಲ ಕುರೆಸಿ, ಆದಮ್ ಕೋಳಿ, ವೆಂಕಟೇಶ್ ಮಾಚನೂರು , ಬಸವರೆಡ್ಡಿ ಗೌಡ ಅಭೀಶಾಳ, ರಾಚಪ್ಪ ಮಡಿವಾಳ, ಸಿದ್ದು ಪೂಜಾರಿ, ಶರಣು ಅಂಗಡಿ, ಸುರೇಶ್ ವಿಶ್ವಕರ್ಮ, ಐಲಿಂಗ, ಜಾಫರ್, ದೇವು ಮದನೂರ, ದಾವಲ್ ಸಾಬ್ ಮರಡಿ, ಗೌಸುದ್ದೀನ್, ಈಶಪ್ಪ ಪಟ್ಟೆದಾರ್, ಮರಿಲಿಂಗ, ಹಾಗೂ ತುಮಕೂರಿನ ಗ್ರಾಮಸ್ಥರು ಹಾಗೂ ಇನ್ನಿತರರು ಉಪಸ್ಥಿತರಿದ್ದರು ಉಪಸ್ಥಿತರಿದ್ದರು.

# ಏ. 26 ರಂದು ಸಂವಿಧಾನ ಸಂರಕ್ಷಕರ ಸಮಾವೇಶ : ಬೆಟ್ಟದೂರು




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಾಜ್ಯದ ಪ್ರತಿ ಊರು ಕೇರಿ, ಹಾಡಿ, ಮೊಹಲ್ಲಾಗಳಲ್ಲಿ ಸಂವಿಧಾನ ಸಂರಕ್ಷಣಾ ಪಡೆ ಕಟ್ಟುವ ಮಹಾಯಾನಕ್ಕೆ ಚಾಲನೆಯಾಗಿ ಏ.26 ರಂದು ಶನಿವಾರ ಬೆಳಗ್ಗೆ 11 ಗಂಟೆಗೆ ದಾವಣಗೆರೆಯ ಬೀರಲಿಂಗೇಶ್ವರ ದೇವಸ್ಥಾನ ಆವರಣದ ಹೈಸ್ಕೂಲ್ ಫೀಲ್ಡ್ ಬಳಿ ಸಂವಿಧಾನ ಸಂರಕ್ಷಕರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಂವಿಧಾನ ಸಂರಕ್ಷಕರ ಸಮಾವೇಶದ ಕೊಪ್ಪಳ ಜಿಲ್ಲಾ ಮುಖಂಡರಾದ ಅಲ್ಲಮಪ್ರಭು ಬೆಟ್ಟದೂರ ಹೇಳಿದರು.

ಅವರು ಮಂಗಳವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ, ಉದ್ದೇಶಿಸಿ ಮಾತನಾಡಿ ದೇಶ ಸಾಗುತ್ತಿರುವ ಅಪಾಯಕಾರಿ ದಿಕ್ಕು ಹಾಗೂ ಪರಿಸ್ಥಿತಿ ಬಗ್ಗೆ ಸಾರಾಂಶೀಕರಿಸಿ ಮಾತನಾಡಿಕೊಳ್ಳಬೇಕೆಂದರೆ ಕೇಂದ್ರ ಸರ್ಕಾರವು ಕಾರ್ಪೋರೇಟ್ ಹಾಗೂ ಮನುವಾದಿ ಶಕ್ತಿಗಳ ರೀತಿ ಕೆಲಸ ಮಾಡುತ್ತಿದೆ.

ನೂರು ವರ್ಷಗಳ ಹಿಂದೆ ಜರ್ಮನಿಯನ್ನು ಹಾಗೂ ಜಗತ್ತನ್ನು ಹಿಡಿತಕ್ಕೆ ತೆಗೆದುಕೊಳ್ಳಲು ಫ್ಯಾಸಿಟ್ ಹಿಟ್ಲರ್ ಬಳಸಿದ ತಂತ್ರಗಾರಿಕೆಯನ್ನು ಈಗ ಭಾರತದಲ್ಲಿ ಪ್ರಯೋಗಿಸಲಾಗುತ್ತಿದೆ, ವಿವಿಧ ಜನ ವರ್ಗಗಳಿಗೆ ಸಂವಿಧಾನ ಕೊಟ್ಟಿದ್ದ ಹಕ್ಕುಗಳಿಗೆ ತದ್ವಿರುದ್ಧ ದಿಕ್ಕಿನಲ್ಲಿ ಕಾನೂನುಗಳನ್ನು ರೂಪಿಸಿ ತನ್ನ ಕಾರ್ಪೋರೇಟ್ ಬಳಗವನ್ನು ಬೆಳೆಸಲಾಗುತ್ತಿದೆ.

ಸಬಲ್ಲ ನಾಗರೀಕ ಮಟ್ಟದಿಂದ ದೇಶ ಮಟ್ಟದ ತನಕ ನಮ್ಮನ್ನು ನಾವು ಕಟ್ಟಿಕೊಳ್ಳಬೇಕಿದೆ,

ಈ ಗುರಿಯೊಂದಿಗೆಯೇ ಪ್ರತಿ ಊರು, ಕೇರಿ, ಹಾಡಿ, ಬೀದಿಗಳಲ್ಲಿ, "ಸಂವಿಧಾನ ಸಂರಕ್ಷಕ ಪಡೆ" ಹೆಸರಿನಲ್ಲಿ ದೇಶಪ್ರೇಮಿ ತಂಡಗಳನ್ನು ಕಟ್ಟುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಮುಂದಿನ ಮೂರು ವರ್ಷಗಳಲ್ಲಿ ಒಂದು ಲಕ್ಷ ಕಾರ್ಯಕರ್ತರ ಪಡೆಯನ್ನು ಸಜ್ಜುಗೊಳಿಸುವ ಗುರಿ ಇಟ್ಟುಕೊಳ್ಳಲಾಗಿದೆ. ಈ ಪ್ರಕ್ರಿಯೆಗೆ ರಾಜ್ಯ ಮಟ್ಟದ ಚಾಲನೆ ನೀಡಲು ಇದೇ ತಿಂಗಳ 26 ರಂದು ದಾವಣಗೆರೆಯಲ್ಲಿ "ಸಂವಿಧಾನ ಸಂರಕ್ಷಕರ ಸಮಾವೇಶ"ವನ್ನು ಆಯೋಜಿಸಲಾಗುತ್ತಿದೆ.

ಸುದ್ದಿಗೋಷ್ಠಿಯಲ್ಲಿ ಸಂವಿಧಾನ ಸಂರಕ್ಷಕರ ಸಮಾವೇಶದ ಕೊಪ್ಪಳ ಜಿಲ್ಲಾ ಸಂಯೋಜಕರಾದ ಮುದುಕಪ್ಪ ಹೊಸಮನಿ, ದುರ್ಗೇಶ್ ಬರಗೂರು, ರಾಜು ನಾಯಕ್, ಸಿರಾಜ್ ಸಿದ್ದಾಪುರ, ಚನ್ನಬಸಪ್ಪ ಗಾಳೆಪ್ಪ ಮುಂಗೋಲಿ ಉಪಸ್ಥಿತರಿದ್ದರು.

# ಕಾನೂನು ಅರಿವು ನೆರವು ಜಾಗೃತಿ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಶಿವಪ್ರಿಯ ಕಾನೂನು ಮಹಾವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ ಜಿಲ್ಲಾ ವಿಕಲಚೇತನ ಇಲಾಖೆ ಸಮಾಜ ಕಲ್ಯಾಣ ಇಲಾಖೆ ಕೊಪ್ಪಳ ಮತ್ತು ಶಿವಪ್ರಿಯ ಕಾನೂನು ಮಹಾವಿದ್ಯಾಲಯ ಕೊಪ್ಪಳ ಇವರ ಸಹಯೋಗದಲ್ಲಿ ಕಾನೂನು ನೆರವು ಮತ್ತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಉದ್ಘಾಟನೆ ಮಹಾಂತೇಶ್ ಸಂಗಪ್ಪ ದರಗದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳ ಅಧ್ಯಕ್ಷತೆ ರಾಘವೇಂದ್ರ ಪಾನಗಂಟಿ ಹಿರಿಯ ವಕೀಲರು ಹಾಗೂ ಉಪ ಅಧ್ಯಕ್ಷರು ಶಿವಪ್ರಿಯ ಕಾನೂನು ಮಹಾವಿದ್ಯಾಲಯ ಗೌರನಿಂಗ್ ಕೌನ್ಸಿಲ್ ಕೊಪ್ಪಳ ಉಪನ್ಯಾಸಕರಾಗಿ ಆಗಮಿಸಿದ್ದು ಶ್ರೀ ವೆಂಕಟೇಶ್ ದೇಶಪಾಂಡೆ ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು ಮತ್ತು ಶಶಿಧರ ಸಕ್ರಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಯಲಬುರ್ಗಾ ವಿಕಲಚೇತನರು ಸಿರಿಯ ನಾಗರಿಕರು ಸ್ತ್ರೀಲಿಂಗಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಾಗೂ ಕೆಳಮಟ್ಟದಲ್ಲಿರುವ ಜನಾಂಗದವರ ಹಕ್ಕುಗಳು ಮತ್ತು ಸೌಲಭ್ಯಗಳ ಜಾಗೃತಿ ಅಭಿಯಾನ ಮತ್ತು ಮಾದಕ ವಸ್ತುಗಳು ಮಾದಕ ವ್ಯಸನ ನಿರ್ಮೂಲನೆ ಯೋಜನೆ 20 ಇದರ ಕುರಿತಾಗಿ ಉಪನ್ಯಾಸ ವಹಿಸಿ ಮಾತನಾಡಿ ಒಂದೇ ಮಾತರಂ ಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮ ಅರುಣ್ ಕುಮಾರ್ ಅವರಿಂದ ಆರಂಭವಾಯಿತು ಪ್ರಾರ್ಥನೆಯನ್ನು ರಾಘವೇಂದ್ರ ನೆರವೇರಿಸಿದರು ಮತ್ತು ಉದ್ಘಾಟಕರಾಗಿ ಆಗಮಿಸಿರುವ ಹಿರಿಯ ಸಿವಿಲ್ ನ್ಯಾಯಾಧೀಶರು ಮಾನ್ಯ ಮಹಾಂತೇಶ್ ಸಂಗಪ್ಪ ದರಗದ್ ರವರು ಮಾತನಾಡಿ ಇಂದಿನ ಯುವ ಜಾಗೃತಿ ಹೊಸ ಕಾನೂನುಗಳು ವಿವಿಧ ರೀತಿಯ ಪ್ರಕರಣಗಳ ಕುರಿತಾಗಿ ಅರಿವನ್ನು ಮೂಡಿಸಿದರು.

ಜಿಲ್ಲೆಗೆ ಅಂಗವಿಕಲ ಇಲಾಖೆಯಿಂದ ಎಷ್ಟು ಯೋಜನೆಗಳು ಮತ್ತು ಅವುಗಳ ಸದುಪಯೋಗ ಇದರ ಕುರಿತಾಗಿ ಉಪನ್ಯಾಸ ನೀಡಿದರು ನಂತರ ಶಶಿಧರ್ ಸಕ್ರಿ ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳು ಮತ್ತು ಪುನರ್ವಸತಿ ಯೋಜನೆಗಳ ಕುರಿತಾಗಿ ಉಪನ್ಯಾಸ ನೀಡಿದರು ವಂದನಾರ್ಪಣೆಯನ್ನು ಪ್ರದೀಪ್ ಧರ್ಮಾಯತ್ ಮತ್ತು ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿದ್ದು ದೇವಿ ಕಿರಣ್ ನಡೆಸಿಕೊಟ್ಟರು ನಂತರದಲ್ಲಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಯಾದ ಶ್ರೀ ನರೇಂದ್ರ ಉಪಸ್ಥಿತರಿದರು.

ಸಂಸ್ಥೆಯ ಉಪನ್ಯಾಸಕರಾದ ಸೋಮಶೇಖರ್, ರಾಜು ಪ್ರಾಚಾರ್ಯರಾದ ಡಾ. ಬಸವರಾಜ್ ಹನ್ಸಿ ,ಮತ್ತು ಸುಕನ್ಯಾ ಹಡಗಲಿ, ರಜಿಯಾ ಸುಲ್ತಾನ್ ಬೇಗಮ್, ಉಪಸ್ಥಿತಿ ವಹಿಸಿದ್ದರು ಶ್ರೀದೇವಿ ಹಿರೇಮಠ ನಿರೂಪಣೆ ನೆರವೇರಿಸಿ ಕೊಟ್ಟರು ಪ್ರಥಮ ಮತ್ತು ದ್ವಿತೀಯ ವರ್ಷದ ಕಾನೂನು ವಿದ್ಯಾರ್ಥಿಗಳು ಭಾಗವಹಿಸಿದ್ದರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆ ವತಿಯಿಂದ ಸರಳ ಸಾಮೂಹಿಕ ವಿವಾಹ ಕರಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರದ ಅತಿಥಿ ಗ್ರಹ ಐಬಿಯಲ್ಲಿ ಮೇ ತಿಂಗಳ 25 ರಂದು ಹಮ್ಮಿಕೊಂಡಿರುವ ಬುದ್ಧ ಬಸವ ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆ ವತಿಯಿಂದ ಹಮ್ಮಿಕೊಂಡಿರುವ ಸರಳ ಸಾಮೂಹಿಕ ವಿವಾಹ ಸಮಾರಂಭದ ಕರ ಪುತ್ರವನ್ನು ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷರಾದ ಆರ್ ಚನಬಸು ವನದುರ್ಗ ಅವರು ಉದ್ಘಾಟಿಸಿ ಮಾತನಾಡಿ

ಆಡಂಬರ ಮದುವೆಗೆ ಕಡಿವಾಣ ಹಾಕಲು ಬಡವರಿಗೆ ಅನುಕೂಲವಾಗಲೆಂದು ದುಂದು ವೆಚ್ಚ ಮಾಡಿ ದೊಡ್ಡ ದೊಡ್ಡ ಪಟ್ಟಣಗಳಿಗೆ ಗೂಳೆ ಹೋಗುವುದನ್ನು ತಪ್ಪಿಸುವುದಕ್ಕಾಗಿ ಸಂಘಟನೆಯವರು ಇಂಥ ಮದುವೆಗಳನ್ನು ಮಾಡಿಸುತ್ತಿರುವುದು ಬಹಳ ದೊಡ್ಡ ಕೆಲಸ ಎಂದು ಹೇಳಿದರು

ಈ ಸಂದರ್ಭದಲ್ಲಿ ಸತ್ಯಮ ವಿ ರೆಡ್ಡಿ ಶರಣಗೌಡ ಮಾಲಿ ಪಾಟೀಲ್ ನಾರಾಯಣ ಸರ್ ಸಾಗರ್ ಮಲ್ಲಿಕಾರ್ಜುನ್ ಪಾಟೀಲ್ ರಾಮು ಜಿ ಸಗರ್ ಹೊನ್ನಪ್ಪ ಗಂಗನಾಳ ಸುಭಾಷ್ ತಳವಾರ್ ಚಂದ್ರಶೇಖರ್ ಗುತ್ತೇದಾರ್ ಮಾಳಪ್ಪ ಸಲಾದಪುರ್ ಮಲ್ಲಿನಾಥ್ ಬಿ ಬಡಿಗೇರ್ ಲಕ್ಷ್ಮಣ ಗೋಗಿ ಪಂಡಿತ್ ಮಡ್ನಾಳ ನಿಂಗಣ್ಣ ತಿಪ್ಪನಹಳ್ಳಿ ಭೀಮರಾಯ ಮಾಡ್ನಾಳ್ ಲಕ್ಷ್ಮಣ ಮಾಡ್ನಾಳ ಮಲ್ ರೆಡ್ಡಿ ದೋರನಹಳ್ಳಿ ಶರಣಪ್ಪ ಕಡಿಮನಿ ಕಂಡಪ್ಪ ಅಯ್ಯಾಳ ತಿಪ್ಪಣ್ಣ ಹಳಿ ಸಗರ್ ಉಪಸ್ಥಿತರಿದ್ದರು

ವಧು-ವರರು ಮೇ 15ರೊಳಗಾಗಿ ನೋಂದಾಯಿಸಬೇಕು ಸಂಪರ್ಕಿಸಬೇಕಾದ ನಂಬರ್ 9902369066-9902258586-9845261153-7795459998-ವಿಶೇಷ ಸೂಚನೆ ಬಾಲ್ಯ ವಿವಾಹ ಮರು ಮದುವೆಗೆ ಅವಕಾಶವಿರುವುದಿಲ್ಲ.

## ಬಳ್ಳಾರಿ: ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆ ಆಗಮನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಸಾಂಸ್ಕೃತಿಕನಾಯಕ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ಪ್ರಚುರ ಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆಯು ಮಂಗಳವಾರ ಬಳ್ಳಾರಿಗೆ ಆಗಮಿಸಿತು. ಸಮುದಾಯದ ಮುಖಂಡರು, ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾ.ಪು) ಪದವಿ ಪೂರ್ವ ಕಾಲೇಜು ಮೈದಾನದ ಆವರಣದಲ್ಲಿ ರಥಯಾತ್ರೆಯನ್ನು ಸ್ವಾಗತಿಸಿದರು. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬಸವಾದಿ ಶರಣರ ರಥಯಾತ್ರೆಗೆ ಪೂಜೆ ಸಲ್ಲಿಸಿ ಪುಷ್ಪನಮನಗೈದು, ಗೌರವ ಸಮರ್ಪಿಸಲಾಯಿತು. ಇದೇ ಏ.29 ಮತ್ತು 30ರಂದು ಬಾಗಲಕೋಟೆ ಜಿಲ್ಲೆಯ ಕೂಡಲ ಸಂಗಮದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ "ಅನುಭವ ಮಂಟಪ-ಬಸವಾದಿ ಶರಣ ವೈಭವ" ಕಾರ್ಯಕ್ರಮದ ಅಂಗವಾಗಿ ರಥಯಾತ್ರೆ ಆಯೋಜಿಸಲಾಗಿದ್ದು, ಮಂಗಳವಾರ ಬಳ್ಳಾರಿ ನಗರಕ್ಕೆ ಆಗಮಿಸಿದ ರಥಯಾತ್ರೆಯು ಸಿರುಗುಪ್ಪ ಮೂಲಕ ರಾಯಚೂರು ಜಿಲ್ಲೆಗೆ ರಥಯಾತ್ರೆಯು ತೆರಳಿತು.

ಜಗತ್ತಿನ ಪ್ರಪ್ರಥಮ ಸಂಸತ್ತು ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥದಲ್ಲಿ ಬಸವಣ್ಣ ಅವರೊಂದಿಗೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಭಗವಾನ್ ಗೌತಮ ಬುದ್ಧ, ಶಿವಶರಣೆ ಅಕ್ಕಮಹಾದೇವಿ, ಸಂತ ಶಿಶುನಾಳ ಶರೀಫ, ಗುರುನಾನಕ್, ಭಗವಾನ್ ಮಹಾವೀರ, ನಾರಾಯಣ ಗುರು, ಯೇಸು ಕ್ರಿಸ್ತರ ಪ್ರತಿಮೆಗಳನ್ನು ಅಳವಡಿಸಲಾಗಿದೆ. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ನಾಗರಾಜ್, ರಾಷ್ಟ್ರೀಯ ಬಸವ ದಳ ಕಾರ್ಯದರ್ಶಿ ರವಿಶಂಕರ್, ಮುಖಂಡರಾದ ಪನ್ನರಾಜ್ ಸಿರಿಗೇರಿ, ಟಿ.ಹೆಚ್.ಎಂ.ಬಸವರಾಜ್ ಸೇರಿದಂತೆ ಇಲಾಖೆ ಅಧಿಕಾರಿಗಳು ಹಾಗೂ ಇತರರು ಇದ್ದರು.

### ಏ.24 ರಂದು ಡಾ.ರಾಜ್ ಕುಮಾರ್ ಜನ್ಮದಿನಾಚರಣೆ

## ಅಂಗವಾಗಿ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಾ.ರಾಜ್‌ಕುಮಾರ್ ಜನ್ಮದಿನಾಚರಣೆ ಅಂಗವಾಗಿ ಏ.24 ರಂದು ಸಂಜೆ 05.30 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಡಾ.ರಾಜ್ ಕುಮಾರ್ ಅವರ ಕುರಿತ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಡಾ.ರಾಜ್ ಕುಮಾರ್ ಅವರ ಅಭಿಮಾನಿಗಳು, ಕನ್ನಡ ಕಲಾಪ್ರೇಮಿಗಳು, ಕಾಲೇಜು ವಿದ್ಯಾರ್ಥಿಗಳು, ಅಧಿಕಾರಿ-ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

# ಗುಡ್ಡಗಾಡಿನಲ್ಲಿ ಯಶಸ್ಸು ಕಂಡ ರೈತ ಮಹಿಳೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಗುಡ್ಡಗಾಡು ಪ್ರದೇಶದಲ್ಲಿ ವಾಸ ಮಾಡುವುದೇ ಕಷ್ಟಸಾಧ್ಯವಿರುವಾಗ ಅಂತಹ ಪ್ರದೇಶದಲ್ಲಿ ಕೃಷಿಯಲ್ಲಿ ತೊಡಗಿಸಿಕೊಳ್ಳುವುದು ವಿಪರ್ಯಾಸವೇ ಸರಿ. ಇದಕ್ಕೆ ನಿದರ್ಶನವಾಗಿ ಬಳ್ಳಾರಿ ತಾಲ್ಲೂಕಿನ ಹೊನ್ನಳ್ಳಿ ತಾಂಡ ಪುಟ್ಟ ಗ್ರಾಮದ ಪ್ರತಿಭಾನ್ವಿತ ರೈತ ಮಹಿಳೆ ಗಂಗೂಬಾಯಿ ಗಂಡ ತಿರುಪತಿನಾಯ್ಕ.

ಇವರು ಬಳ್ಳಾರಿ ಸಮೀಪದ ಹೊನ್ನಳ್ಳಿ ತಾಂಡ ಗ್ರಾಮದಲ್ಲಿ ಸರಿಸುಮಾರು 4.5 ಎಕರೆಯ ಭೂಮಿ ಹೊಂದಿದ್ದು, ಇವರಿಗೆ ತಮ್ಮ ಮನೆಯ ಸುತ್ತ ಮುತ್ತ ಏನಾದರೂ ಉತ್ಪಾದಕ ಕೆಲಸ ಮಾಡಬೇಕೆಂಬ ಛಲ ಹೊಂದಿದ್ದರು. ತಮ್ಮ ಬರಡಾಗಿರುವ ಜಮೀನಿನಲ್ಲಿ ತೋಟಗಾರಿಕೆ ಹಾಗೂ ಕೃಷಿಯನ್ನು ಅಳವಡಿಸಿಕೊಂಡು ಭೂಮಿಯನ್ನು ಸಾವಯವ ಕೃಷಿ ಭೂಮಿಯಾಗಿ ಬದಲಾಯಿಸಬೇಕೆಂದು ಅರಿತ ಇವರು ತಮ್ಮ ಜಮೀನು ಸುತ್ತಲೂ ತಂತಿ ಬೇಲಿ ಹಾಕಿ ಭದ್ರಪಡಿಸಿಕೊಂಡರು.

ತಮ್ಮ ಜಮೀನಿನಲ್ಲಿ ವಿವಿಧ ಹಣ್ಣಿನ ಬೆಳೆಗಳಾದ 600 ನಿಂಬೆ, 700 ಪೇರಲ, 1600 ಡ್ರಾ ಗನ್ ಹಾಗೂ 2 ಎಕರೆಯಲ್ಲಿ ಕರಿಬೇವು ಗಿಡ ಮತ್ತು ಆತ್ಮ ಯೋಜನೆಯ ಪ್ರಾತ್ಯಕ್ಷಿಕೆಯಡಿ 10 ಬಿದಿರು ಸಸಿಗಳನ್ನು ಪಡೆದು ಹೊಲದ ಸುತ್ತಲೂ ನೆಟ್ಟಿದ್ದಾರೆ. ಇದಲ್ಲದೆ, ಪಶು ಸಂಗೋಪನೆಯು ಕೈಗೊಂಡಿದ್ದು, 02 ಹಸು, 01 ಎತ್ತು ಹಾಗೂ 01 ಎಮ್ಮೆ ಇದೆ. ಕೋಳಿ ಸಾಕಾಣಿಕೆಯಲ್ಲೂ (30 ಕೋಳಿ) ಮೇಲುಗೈ ಹೊಂದಿದ್ದಾರೆ. 100 ಕುರಿ, 25 ಮೇಕೆ, ಆಡುಗಳನ್ನು ಸಹ ಹೊಂದಿದ್ದಾರೆ.

ಇವರು ತಮ್ಮ ಹೊಲದಲ್ಲಿ ನೀರಿನ ಕೊರತೆ ಬಾರದಂತೆ ಕೃಷಿ ಹೊಂಡ (21*21*3.5ಮೀ) ನಿರ್ಮಿಸಿದ್ದು, ಹೊಲದಲ್ಲಿ ತಮ್ಮ ಗಿಡಗಳು ಸಾವಯವವಾಗಿ ಬೆಳೆಯಲು ಎರೆಹುಳು ಘಟಕವನ್ನು ನಿರ್ಮಿಸಿ ಎರೆಹುಳು ಗೊಬ್ಬರವನ್ನು ತಯಾರಿಸುತ್ತಾರೆ.

ಗೋಕೃಪಾಮೃತ, ದಶಪಾಣಿಯನ್ನು ಸ್ವತಃ ತಯಾರಿಸಿ ತಮ್ಮ ಹೊಲದಲ್ಲಿರುವ ಗಿಡಗಳಿಗೆ ಹನಿ ನೀರಾವರಿ ಪದ್ಧತಿ ಉಪಯೋಗಿಸಿಕೊಂಡು ಸಾವಯವವಾಗಿ ಬೆಳೆಯುತ್ತಿದ್ದಾರೆ ಗಂಗೂಬಾಯಿ ಅವರು ಹಾಗೂ ತಮ್ಮ ಊರಿನ ಸುತ್ತಮುತ್ತಲಿನ ರೈತರಿಗೆ ಮಾದರಿಯಾಗಿದ್ದಾರೆ.

# ಏ.24 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ವ್ಯಾಪ್ತಿಯ 110/11ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಫೀಡರ್ ಎಫ್-25 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಏ.24 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ನಗರದ ಆರ್.ಕೆ ಮಿಲ್ ರೋಡ್, ಬಾಪೂಜಿ ನಗರ, ಬಾಪೂಜಿ ನಗರ ಸರ್ಕಲ್, ರಾಣಿತೆ-ೞೀಟ, ಕಣೆಕಲ್ ಬಸ್ ಸ್ಟಾಂಡ್, ಮಾರ್ಕೆಟ್ ಟೋಪಿಗಲ್ಲಿ, ಮರಿಸ್ವಾಮಿ ಮಠ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.26 ರಿಂದ ಕಾಲುಬಾಯಿ ಜ್ವರ ಹಾಗೂ ಚರ್ಮಗಂಟು ರೋಗದ ಉಚಿತ ಲಸಿಕೆ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಜಿಲ್ಲೆಯಾದ್ಯಂತ ಏಪ್ರಿಲ್ 26 ರಿಂದ ಜೂನ್ 06 ರವರೆಗೆ ಕೇಂದ್ರ ಪುರಸ್ಕೃತ ಎನ್‌ಎಡಿಸಿಪಿ ಯೋಜನೆಯಡಿ 7ನೇ ಸುತ್ತಿನ ಕಾಲುಬಾಯಿ ಜ್ವರದ ಹಾಗೂ ಚರ್ಮಗಂಟು ರೋಗದ ಉಚಿತ ಲಸಿಕೆ ಅಭಿಯಾನ ನಡೆಯಲಿದ್ದು, ಅಭಿಯಾನದಲ್ಲಿ ರೈತರು ತಮ್ಮ ಜಾನುವಾರು ಮತ್ತು ಸಾಕು ಪ್ರಾಣಿಗಳಿಗೆ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ಹನುಮಂತ ಕಾರಬಾರಿ ಅವರು ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿಯನ್ವಯ 1,14,577 ದನಗಳು, 66034 ಎಮ್ಮೆಗಳು ಸೇರಿ ಒಟ್ಟು 1,80,611 ದನ ಮತ್ತು ಎಮ್ಮೆಗಳಿವೆ. ಕಾಲು ಬಾಯಿ ಜ್ವರವು ಹಸು, ಎತ್ತು, ಎಮ್ಮೆ, ಹೋರಿ ಮತ್ತು ಹಂದಿಗಳಲ್ಲಿ ಕಾಣಿಸಿಕೊಳ್ಳುವ ಮಾರಕ ರೋಗವಾಗಿದ್ದು, ಮುಖ್ಯವಾಗಿ ದನ ಮತ್ತು ಎಮ್ಮೆಗಳಲ್ಲಿ ಕಂಡುಬರುವುದರಿಂದ ರೈತರಿಗೆ ಆರ್ಥಿಕ ಸಂಕಷ್ಟ ಉಂಟಾಗುತ್ತದೆ. ವರ್ಷಕ್ಕೆ ಎರಡು ಬಾರಿ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ರೈತರು ತಮ್ಮ ದನ ಮತ್ತು ಎಮ್ಮೆಗಳಿಗೆ ಕಾಲು ಬಾಯಿ ರೋಗದ ಲಸಿಕೆಯನ್ನು ನಾಲ್ಕು ತಿಂಗಳು ಮೇಲ್ಪಟ್ಟ ದನ ಮತ್ತು ಎಮ್ಮೆಗಳಿಗೆ ತಪ್ಪದೇ ಹಾಕಿಸಬೇಕು ಎಂದು ತಿಳಿಸಿದ್ದಾರೆ.

ಅದೇ ರೀತಿಯಾಗಿ ಚರ್ಮಗಂಟು ರೋಗವು ಸಾಂಕ್ರಾಮಿಕ ಖಾಯಿಲೆಯಾಗಿದ್ದು, ರೋಗವು ಮುಖ್ಯವಾಗಿ ದನಗಳಲ್ಲಿ ಮಾತ್ರ ಕಂಡುಬರುವುದರಿಂದ ದನಗಳಿಗೆ ಮಾತ್ರ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರೈತರು ತಮ್ಮ ದನಗಳಿಗೆ ಮಾತ್ರ ಚರ್ಮಗಂಟು ರೋಗದ ಲಸಿಕೆ ಹಾಕಿಸಬೇಕು.

ರಾಸುಗಳು ಈ ರೋಗಗಳಿಂದ ಮುಕ್ತವಾದರೂ ಸಹ ಗರ್ಭಕಟ್ಟುವಿಕೆಯಲ್ಲಿ ವಿಳಂಬ, ಸಾಮರ್ಥ್ಯ ನಷ್ಟ ಮತ್ತು ಹಾಲಿನ ಇಳುವರಿ ಕಡಿಮೆ ಹಾಗೂ ಇತರೆ ಅನೇಕ ತೊಂದರೆಗಳನ್ನು ಎದುರಿಸಬೇಕಾದ ಅನಿವಾರ್ಯತೆ ಇರುತ್ತದೆ. ಹಾಗಾಗಿ ಜಿಲ್ಲೆಯ ಎಲ್ಲಾ ರೈತರು ಕಾಲುಬಾಯಿ ಜ್ವರ ಲಸಿಕೆ ಹಾಗೂ ಚರ್ಮಗಂಟು ರೋಗ ಲಸಿಕಾ ಅಭಿಯಾನದಲ್ಲಿ ಪಾಲ್ಗೊಂಡು ತಮ್ಮೆಲ್ಲ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಸಂಡೂರು: 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22-ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿಗೆ 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಂಡೂರು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಉಚಿತವಾಗಿ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಮೇ 03 ರೊಳಗೆ ಇದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08395-200073 ಗೆ ಸಂಪರ್ಕಿಸಬಹುದು ಎಂದು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಲುಬಾಯಿ ರೋಗ ಲಸಿಕಾ ಅಭಿಯಾನ ಪೋಸ್ಟರ್ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಯೋಜನೆಯಡಿ 7ನೇ ಸುತ್ತಿನ ಕಾಲುಬಾಯಿ ರೋಗ ನಿಯಂತ್ರಣ ಅಭಿಯಾನದ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ಜಿಲ್ಲಾಧಿಕಾರಿಗಳ ಕ್ವೆಸಾನ್ ಕಚೇರಿ ಸಭಾಂಗಣದಲ್ಲಿ ಏಪ್ರಿಲ್ 19 ರಂದು ನಡೆಯಿತು.

ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಯೋಜನೆಯಡಿ ಜಿಲ್ಲೆಯಲ್ಲಿರುವ ಜಾನುವಾರುಗಳಿಗೆ ಕಾಲುಬಾಯಿ ರೋಗದ ವಿರುದ್ಧ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕೆಯನ್ನು ಹಾಕಲು ಏಪ್ರಿಲ್ 21 ರಿಂದ ಜೂನ್ 04 ರವರೆಗೆ ಲಸಿಕಾ ಅಭಿಯಾನವನ್ನು ಕೊಪ್ಪಳ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ರೋಗ ಲಸಿಕಾ ಅಭಿಯಾನದ ಪೋಸ್ಟರ್‌ಗಳನ್ನು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿದ ಅವರು, ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುವ ಕಾಲುಬಾಯಿ ರೋಗದಿಂದ ರಾಜ್ಯವನ್ನು ಮುಕ್ತ ಮಾಡಲು ಸಾರ್ವಜನಿಕರು ಸಹಕರಿಸಬೇಕು. ಅದೇ ರೀತಿ ಜಿಲ್ಲೆಯಲ್ಲಿ ಈ ಅಭಿಯಾನವನ್ನು ಸಮರ್ಪಕವಾಗಿ ಹಮ್ಮಿಕೊಂಡು, ಜಿಲ್ಲೆಯ ಎತ್ತು, ಹೋರಿ, ಹಸು, ಎಮ್ಮೆ ಮತ್ತು ಸಂಬಂಧಿಸಿದ ಜಾನುವಾರುಗಳಿಗೆ ಲಸಿಕೆ ನೀಡಲಾಗುತ್ತದೆ. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಈ ಲಸಿಕಾ ಅಭಿಯಾನದ ಬಗ್ಗೆ ರೈತರಿಗೆ ಜಾಗೃತಿ ಮೂಡಿಸಬೇಕು ಎಂದು ಪಶು ಇಲಾಖೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪರುಶುರಾಮ್ ವೈ ಶೆಟ್ಟೆಪ್ಪನವರ್, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರಾದ ಪಿ.ಎಂ ಮಲ್ಲಯ್ಯ, ಯಲಬುರ್ಗಾ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕ ಡಾ.ಪ್ರಕಾಶ, ಕೊಪ್ಪಳ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕ ಡಾ. ವಿನೋದ ಕುಮಾರ್, ಕುಕನೂರ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕ ಡಾ.ಸುರೇಶ್ ಸೇರಿದಂತೆ ವಿವಿಧ ಇಲಾಖೆಗಳ ಹಾಗೂ ಪಶು ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಏ. 24 ರಂದು ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ : ಮಹೆದ್ದೀನ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕಾಳಜಿ ಗ್ರಾಮೀಣಾಭಿವೃದ್ಧಿ ಹಾಗೂ ಕ್ರೀಡೆ ಶಿಕ್ಷಣ ಸೇವಾ ಸಂಸ್ಥೆ ವತಿಯಿಂದ ಇದೇ ಏಪ್ರಿಲ್ 24 ರಂದು ಬೆಳಗ್ಗೆ 10:30 ಗಂಟೆಗೆ

ಕೊಪ್ಪಳದ ತಾಲೂಕು ಕ್ರೀಡಾಂಗಣದಲ್ಲಿ ಕೊಪ್ಪಳ ಪ್ರೀಮಿಯರ್ ಲೀಗ್ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಮಹೆದ್ದೀನ್ ವರ್ಧೀ ಹೇಳಿದರು.

ಅವರು ಮಂಗಳವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶವಿಗೆ ಮಾತನಾಡಿ ಈ ಟೂರ್ನಮೆಂಟ್ ಕೊಪ್ಪಳ ತಾಲೂಕು ಯುವ ಹಾಗು ಉದಯೋನ್ಮುಖ ಕ್ರಿಕೆಟ್ ಗರಿಗೆ ಒಂದು ವಿಶಿಷ್ಟ ವೇದಿಕೆ ಆಗಲಿದೆ, ಸ್ಥಳೀಯ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಹೆಚ್ಚುವರಿ ಅವಕಾಶವನ್ನು ಕಲ್ಪಿಸುವ ಗುರಿ ಹೊಂದಿದ್ದು ಇಲ್ಲಿ ಎಂಟು ತಂಡಗಳು ಭಾಗವಹಿಸುತ್ತವೆ.

ದಿವ್ಯಸಾನಿಧ್ಯವನ್ನು ಗವಿಮಠದ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು, ಹಜರತ್ ಅಲ್ಲಾಮ ಮೌಲಾನ ಮುಫ್ತಿ ನಜೀರ್ ನಜೀರ್ ಅಹ್ಮದ್ ಖಾದ್ರಿ ತಸ್ಕೀನಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಜನಪ್ರತಿನಿಧಿಗಳು, ಅಧಿಕಾರಿಗಳು, ಉದ್ಯಮಿಗಳು ಸಮಾಜ ಸೇವಕರು ಪಾಲ್ಗೊಳ್ಳುವರು.

ಪ್ರಥಮ ಬಹುಮಾನ ಒಂದು ಲಕ್ಷ ರೂಪಾಯಿ, ದ್ವಿತೀಯ ಬಹುಮಾನ ಐವತ್ತು ಸಾವಿರ, ತೃತೀಯ ಹತ್ತು ಸಾವಿರ, ನಾಲ್ಕನೇ ಬಹುಮಾನ ಹತ್ತು ಸಾವಿರ ಇರುತ್ತದೆ ಎಂದರು.

ಸ್ಥಳೀಯ ಪ್ರತಿಭೆಗಳು ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನಿಂಗಪ್ಪ ಮೂಗಿನ್, ಅಬ್ದುಲ್ ಇರ್ಫಾನ್, ಮಹಮ್ಮದ್ ಹುಸೇನ್ ಉಪಸ್ಥಿತರಿದ್ದರು.

# 4.88 ಕೋಟಿ ರೂ.ಗಳ ವೆಚ್ಚದ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.22– ಬಾಗಲಕೋಟೆ ಮತಕ್ಷೇತ್ರವ್ಯಾಪ್ತಿಯ ಗ್ರಾಮಗಳಲ್ಲಿ ದೇವಸ್ಥಾನಗಳ ರಸ್ತೆ ಸುಧಾರಣೆ, ಹದಗೆಟ್ಟ ರಸ್ತೆಗಳ ಮರು ಡಾಂಬರೀಕರಣ, ಸಿಸಿ ರಸ್ತೆ, ಸಮುದಾಯ ಭವನ ನಿರ್ಮಾಣ ಸೇರಿ 4.88 ಕೋಟಿ ರೂ.ಗಳ ವೆಚ್ಚದ ವಿವಿಧ ಕಾಮಗಾರಿಗಳಿಗೆ ಶಾಸಕ ಎಚ್.ವಾಯ್.ಮೇಟಿ ಮಂಗಳವಾರ ಭೂಮಿ ಪೂಜೆ ನೆರವೇರಿಸಿದರು.

ಬೆಳಿಗ್ಗೆ 9 ಗಂಟೆಗೆ ಮ್ಯಾಗೇರಿ ಗ್ರಾಮದ ಗಡ್ಡಿಬಸವೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ 20 ಲಕ್ಷ ರೂ.ಗಳ ದೇವಸ್ಥಾನ ರಸ್ತೆ ಸುಧಾರಣೆ, 35 ಲಕ್ಷ ರೂ.ಗಳ ಹಂಡರಗಲ್ ಗ್ರಾಮದ ದನದ ಮಾರ್ಗದಲ್ಲಿ ಸಿಸಿ ರಸ್ತೆ ಹಾಗೂ ಬಸ್ ನಿಲ್ದಾಣದಿಂದ ಬಾವಿಯವರೆಗೆ ಸಿಸಿ ರಸ್ತೆ ಮತ್ತು ಮಾರುತೇಶ್ವರ ಸಮುದಾಯ ಭವನ ನಿರ್ಮಾಣ, 10 ಲಕ್ಷ ರೂ.ಗಳ ಹಿರೇಮ್ಯಾಗೇರಿಯ ಗಡ್ಡಿಬಸವೇಶ್ವರ ದೇವಸ್ಥಾನಕ್ಕೆ ಸಿಸಿ ರಸ್ತೆ, 10 ಲಕ್ಷ ರೂ.ಗಳ ಚಿಕ್ಕಮ್ಯಾಗೇರಿಯ ಮರುಳ ಸಿದ್ದೇಶ್ವರ ಸಮುದಾಯ ಭವನ ನಿರ್ಮಾಣ, 15 ಲಕ್ಷ ರೂ.ಗಳ ಬೊಮ್ಮಣಗಿಯ ಬೀರಲಿಂಗೇಶ್ವರ ಸಮುದಾಯ ಭವನ, 20 ಲಕ್ಷ ರೂ.ಗಳ ಡೊಮನಾಳ ಗ್ರಾಮದ ಮಾರುತೇಶ್ವರ ಸಮುದಾಯ ಭವನ ಮತ್ತು ಗ್ರಾಮದೇವತೆ ದೇವಸ್ಥಾನದ ಬಳಿ ಸಮುದಾಯ ಭವನ ನಿರ್ಮಾಣದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಸುತಗುಂಡಾರ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸುತಗುಂಡಾರ ಗ್ರಾಮದಲ್ಲಿ 44 ಲಕ್ಷ ರೂ.ಗಳ ವೆಚ್ಚದ ಸಿಸಿ ರಸ್ತೆ, ಬಸವೇಶ್ವರ ಸಮುದಾಯ ಭವನ, ಬಸ್ ತಂಗುದಾಣ ದುರಸ್ಥಿ ಕಾಮಗಾರಿಗಳು, 34 ಲಕ್ಷ ರೂ.ಗಳ ಮಂಕಣಿ ಗ್ರಾಮದ ಈಶ್ವರ ದೇವಸ್ಥಾನದವರೆಗಿನ ಸಿಸಿ ರಸ್ತೆ ಮತ್ತು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 1 ಕೊಠಡಿ ನಿರ್ಮಾಣ, ಬಸ್ ಶೆಲ್ಟರ್ ನಿರ್ಮಾಣ, 10 ಲಕ್ಷ ರೂ.ಗಳ ಚಿಟಗಿನಕೊಪ್ಪ ಗ್ರಮದ ಸಾರ್ವಜನಿಕ ಸಮುದಾಯ ಭವನ, 10 ಲಕ್ಷ ರೂ.ಗಳ ದೇವಲಾಪೂರ ಹಳ್ಳದಲ್ಲಿ ಸಿಡಿ ನಿರ್ಮಾಣ, 20 ಲಕ್ಷ ರೂ.ಗಳ ನಾಯನೇಗಲಿಯ ದುರ್ಗಾದೇವಿ ಹಾಗೂ ಬೀರಲಿಂಗೇಶ್ವರ ಸಮುದಾಯ ಭವನ ನಿರ್ಮಾಣಕ್ಕೆ ಶಾಸಕರು ಚಾಲನೆ ನೀಡಿದರು.

ಮನಹಳ್ಳಿ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ 20 ಲಕ್ಷ ರೂ.ಗಳ ಹೊಸೂರ ಗ್ರಾಮದ ಸಿಸಿ ರಸ್ತೆಗಳು, 20 ಲಕ್ಷ ರೂ.ಗಳ ಮನಹಳ್ಳಿಯಲ್ಲಿ ಸಿಸಿ ರಸ್ತೆ ಮತ್ತು ಸಮುದಾಯ ಭವನ ನಿರ್ಮಾಣ, 10 ಲಕ್ಷ ರೂ.ಗಳ ನಾಗಸಂಪಿಗೆ–ಬೋಡನಾಯಕದಿನ್ನಿ ರಸ್ತೆ ಸುಧಾರಣೆ ಹಾಗೂ 10 ಲಕ್ಷ ರೂ.ಗಳ ನಾಗರಾಳ ಗ್ರಾಮದ ಯಲ್ಲಾಲಿಂಗ ಸಮುದಾಯ ಭವನ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಲೋಕೋಪಯೋಗಿ ಇಲಾಖೆಯ 2 ಕೋಟಿ, ಪಂಚಾಯತರಾಜ್ ಇಂಜನೀಯರಿಂಗ್ ವಿಭಾಗ ಹಾಗೂ ಭೂಸೇನಾ ನಿಗಮ ಸೇರಿ 2.88 ಕೋಟಿ ರೂ.ಗಳ ಕಾಮಗಾರಿಗಳು ನಡೆಯಲಿದ್ದು, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ಮಾಡಿ, ಗ್ರಾಮೀಣ ಜನರ ವಿಶ್ವಾಸಕ್ಕೆ ಪಾತ್ರರಾಗಬೇಕು ಎಂದು ಶಾಸಕ ಮೇಟಿ ತಿಳಿಸಿದರು.

ಜಿ.ಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ಶಿವಾನಂದ ಅಬ್ದುಲಪುರ, ಚಂದನಗೌಡ ಪಾಟೀಲ, ಗ್ರಾಪಂ ಅಧ್ಯಕ್ಷೆ ಶಾಂತಮ್ಮ ಗೌಡರ, ಬಸನಗೌಡ ಗೌಡರ, ಮಹಾಂತೇಶ ಸೂಡಿ, ಯಲ್ಲಾಲಿಂಗ ಚೌದರಿ, ಜಟ್ಟೆಪ್ಪ ಮಾದಾಪೂರ, ಮಲ್ಲಿಕಾರ್ಜುನ ಮೇಟಿ, ಉಮೇಶ ಮೇಟಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರುಗಳಾದ ನಾರಾಯಣ ಕುಲಕರ್ಣಿ, ಎಸ್.ಎಂ.ರೇವಡಿ, ಎಸ್.ಎನ್.ಹಿರೇಮಠ, ಜೆಇ ಮಲ್ಲು ಹಾಲವರ, ಗುತ್ತಿಗೆದಾರರು ಇದ್ದರು.

# ಬಾಗಲಕೋಟೆ–ಕಬ್ಬಿನ ಬಿಲ್ ಪಾವತಿಗೆ ಆಗ್ರಹಿಸಿ ರೈತರ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.22–ಪ್ರಸಕ್ತ ಸಾಲಿನ ಕಬ್ಬಿನ ಬಿಲ್ ಹಾಗೂ ಈ ಹಿಂದಿನ ಸಾಲಿನ ಕಬ್ಬಿನ ಬಾಕಿ ಬಿಲ್‌ಗಳನ್ನು ಕಾರ್ಖಾನೆಗಳು ತುರ್ತಾಗಿ ಪಾವತಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ, ಕಬ್ಬು ಬೆಳೆಗಾರರ ಸಂಘದ ನೇತೃತ್ವದಲ್ಲಿ ಮಂಗಳವಾರ ರೈತರು ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಜಿಲ್ಲೆಯ ಮುಧೋಳ, ಜಮಖಂಡಿ, ರಬಕವಿ–ಬನಹಟ್ಟಿ, ತೇರದಾಳ, ಬೀಳಗಿ, ಹುನಗುಂದ, ಬಾದಾಮಿ, ಗುಳೇದಗುಡ್ಡ ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿದ್ದ ಕಬ್ಬು ಬೆಳೆಗಾರರು ಸಕ್ಕರೆ ಕಾರ್ಖಾನೆಗಳು ಮತ್ತು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಡಿಸಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದಾಗ ಪೊಲೀಸರು ಬ್ಯಾರಿಕೇಡ ಹಾಕಿ ತಡೆದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ರೈತರನ್ನು ಸಮಾಧಾನಪಡಿಸಿ ಸಂಧಾನ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡ ಮುತ್ತಪ್ಪ ಕೋಮಾರ ಮಾತನಾಡಿ, ದೇಶಕ್ಕೆ ಅನ್ನ ನೀಡುವ ರೈತರು ತೀವ್ರ ಸಂಕಷ್ಟದಲ್ಲಿ ಬದುಕುವಂತಾಗಿದೆ. ರೈತರಿಗೆ ನೋವು ಆದಾಗ ಯಾರೊಬ್ಬರು ಬರುತ್ತಿಲ್ಲ. ವರ್ಷಪೂರ್ತಿ ಕಷ್ಟಪಟ್ಟು ದುಡಿದು ಕಾರ್ಖಾನೆಗಳಿಗೆ ಕಬ್ಬು ಪೂರೈಕೆ ಮಾಡಿದರು ಸಹ ಈವರೆಗೆ ಬಿಲ್ ಪಾವತಿಯಾಗುತ್ತಿಲ್ಲ. ಕಳೆದ ನಾಲ್ಕೈದು ತಿಂಗಳಿನಿಂದ ಜಾತಕ ಪಕ್ಷಿಯಂತೆ ಕಾದು ಕುಳಿತಿರುವ ರೈತರು ನಿತ್ಯವು ಉಪವಾಸವಿದ್ದು ಜೀವನ ಸಾಗಿಸುವಂತಹ ಪರಿಸ್ಥಿತಿ ಉಂಟಾಗಿದೆ ಎಂದು ಕಿಡಿಕಾರಿದರು.

ಸರ್ಕಾರ, ಅಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ, ಸಕ್ಕರೆ ಸಚಿವ ಶಿವಾನಂದ ಪಾಟೀಲ ಕಿಚ್ಚಿಂತು ಕರುಣೆ ಇಲ್ಲದಂತೆ ನಡೆದುಕೊಳ್ಳುತ್ತಿದ್ದಾರೆ. ಚುನಾವಣೆ ಸಮಯದಲ್ಲಿ ನೂರಾರು ಭರವಸೆ ನೀಡುವ ರಾಜಕಾರಣಿಗಳು ಅಧಿಕಾರಕ್ಕೆ ಬಂದ ನಂತರ ತಿರುಗಿ ನೋಡುತ್ತಿಲ್ಲ ಎಂದು ತೀವ್ರ ವಾಗ್ದಾಳಿ ನಡೆಸಿದರು.

ನ್ಯಾಯವಾದಿ ಯಲ್ಲಪ್ಪ ಹೆಗಡೆ ಮಾತನಾಡಿ, ಪ್ರಸಕ್ತ ಹಂಗಾಮಿನಲ್ಲಿ ಬಾಗಲಕೋಟೆ ಜಿಲ್ಲೆಯ 13 ಸಕ್ಕರೆ ಕಾರ್ಖಾನೆಗಳು 1040 ಕೋಟಿ ರೂ. ಕಬ್ಬಿನ ಬಾಕಿ ಉಳಿಸಿಕೊಂಡಿದ್ದರೂ ಕಾರ್ಖಾನೆಗಳ ಮೇಲೆ ಯಾವುದೇ ಕ್ರಮ ಆಗುತ್ತಿಲ್ಲ. ಅವರಿಗೆ ಬಿಲ್ ನೀಡುವಂತೆ ಸೂಚನೆ ನೀಡುತ್ತಿಲ್ಲ. ಕಬ್ಬು ಕಳುಹಿಸಿ 4–5 ತಿಂಗಳಾದರು ಬಿಡಿಗಾಸು ಬಂದಿಲ್ಲ ಎಂದರೇ ಏನರ್ಥ. ಇದು ರೈತರ ಶೋಷಣೆ ಎಂದರು.

ಇದೇ ತಿಂಗಳು ಸಿಎಂ ಸಿದ್ದರಾಮಯ್ಯ ಕೂಡಲಸಂಗಮಕ್ಕೆ ಆಗಮಿಸಲಿದ್ದಾರೆ. ಅಷ್ಟರೊಳಗೆ ಬಾಕಿ ಬಿಲ್ ಪಾವತಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಅನಿವಾರ್ಯ ಆಗಲಿದೆ ಎಂದು ಎಚ್ಚರಿಕೆ ನೀಡಿದರು.

ಈರಪ್ಪ ಹಂಚಿನಾಳ, ನಾಗೇಶ ಗೋಲಶೆಟ್ಟಿ, ಬಸವರಾಜ ಧರ್ಮಂತಿ, ಮುತ್ತಪ್ಪ ಹಿರೇಕುಂಬಿ, ತಿಪ್ಪಣ್ಣ ಮೇಟಿ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

# ವಿದ್ಯಾಗಿರಿ ಬಡಾವಣೆಯಲ್ಲಿ ನೀರಿನ ಸಮಸ್ಯೆ ಪರಿಹರಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.22–ವಿದ್ಯಾಗಿರಿ ಬಡಾವಣೆಯಲ್ಲಿ ಕಳೆದ ಮೂರು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆಯಾಗಿದ್ದು, ಸರಿಯಾಗಿ ನೀರು ಸರಬರಾಜು ಮಾಡದಿದ್ದಲ್ಲಿ ಹೋರಾಟ ಮಾಡಲಾಗುವುದು ಎಂದು ಸ್ಥಳೀಯ ನಿವಾಸಿಗಳು ನಗರಸಭೆ ಪೌರಾಯುಕ್ತರಿಗೆ ಒತ್ತಾಯಿಸಿದರು. ಮಂಗಳವಾರ ವಿದ್ಯಾಗಿರಿ ಬಡಾವಣೆಯ ಸಾರ್ವಜನಿಕರು, ನಗರಸಭೆ ಸದಸ್ಯರು ಸೇರಿ ನಗರಸಭೆಯ ಪೌರಾಯುಕ್ತರನ್ನು ಭೇಟಿ ಮಾಡಿ, ಬಡಾವಣೆಗಳಲ್ಲಿ ಪ್ರತಿ ದಿನ ನೀರು ಬಿಡುವಂತೆ ಒತ್ತಾಯಿಸಿ ಮನವಿ ನೀಡಿದರು. ನಗರಸಭೆ ಸದಸ್ಯ ವೀರಣ್ಣ ಶಿರಗಣ್ಣವರ ಮಾತನಾಡಿ, ವಾರ್ಡ ನಂ 19 ರಲ್ಲಿ ಜ್ಯೋತಿ ಕಾಲೋನಿ, ಕುದರಿಕನ್ನೂರ ಲೇಔಟ್, ತೆಗ್ಗಿ ಲೇಔಟ್, ರೂಪಲ್ಯಾಂಡ, ತೋಸನಿವಾಲ ಲೇಔಟ್, ಕೆ.ಎಚ್.ಬಿ.ಕಾಲೋನಿ, ಗುರುಬಸವ ಕಾಲೋನಿಗಳಲ್ಲಿ ಕಳೆದ ಮೂರು ತಿಂಗಳಿಂದ ನೀರು ಬರುತ್ತಿಲ್ಲ ಎಂದು ದೂರಿದರು.

ಈಗಾಗಲೇ ಹಲವು ಬಾರಿ ನಗರಸಭೆ ಸದಸ್ಯರು ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇನ್ನು ವಾರ್ಡ ನಂ.32, 33, 34, 35ರಲ್ಲಿಯೂ ಕೂಡಾ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಲಿದ್ದು, ನೀರಿನ ಭವನೆಯನ್ನು ಕೂಡಲೇ ಪರಿಹರಿಸಿ ಆಗಿರುವ ತೊಂದರೆ ನಿವಾರಿಸಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಪೌರಾಯುಕ್ತ ಆರ್.ವಾಸಣ್ಣ, ವಿದ್ಯಾಗಿರಿ ವಲಯದಲ್ಲಿ ಆಗಿರುವ ತಾಂತ್ರಿಕ ತೊಂದರೆ ಸರಿಪಡಿಸಿ, ನೀರಿನ ಸೌಲಭ್ಯ ಕಲ್ಪಿಸುವುದಾಗಿ ಭರವಸೆ ನೀಡಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ಸಭಾಪತಿ ಯಲ್ಲಪ್ಪ ನಾರಾಯಣಿ, ಹನಮಂತ ತೆಗ್ಗಿ, ಚೌಡಾಪೂರ, ಕಿರಣ ಸಿಂಗಲಗಲಿ, ಉಮೇಶ ಹಂಚಿನಾಳ, ಸಂಗಣ್ಣ ಕುಪ್ಪಸ್ತ, ಶ್ರೀಧರ ನಾಗರಬೆಟ್ಟ, ವೀರೇಶ ಹಡಪದ, ನಿಂಗಪ್ಪ ಕೂಡ್ಲೆಪ್ಪನವರ, ಆನಂದ ಗಚ್ಚನೂರ, ದ್ಯಾಮಣ್ಣ ಜಲಗೇರಿ, ಡಾ.ಜಿ.ಜಿ.ಕುಲಕರ್ಣಿ, ವಿಜಯ ವಾಲಿ, ಎಸ್.ವಿ.ಹೊಸಗೌಡರ, ಸುರೇಶ ಹಿರೇಮಠ ಮತ್ತಿತರರು ಇದ್ದರು.

# ಅಸಂಘಟಿತ ಕಾರ್ಮಿಕರಿಗೆ ವಿವಿಧ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.22–ಅಸಂಘಟಿತ ವರ್ಗದಲ್ಲಿ ದುಡಿಯುತ್ತಿರುವ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅಂಬೇಡ್ಕರ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.

ಅಸಂಘಟಿತ ಕಾರ್ಮಿಕರ ನೋಂದಣಿ ಮತ್ತು ಸ್ಮಾರ್ಟಕಾರ್ಡ ವಿತರಿಸಲಾಗುತ್ತಿದ್ದು, ಈ ಯೋಜನೆಯಡಿ 20 ಅಸಂಘಟಿತ ವರ್ಗಗಳಾದ ಹಮಾಲರು, ಚಿಂದಿ ಆಯುವವರು, ಗೃಹ ಕಾರ್ಮಿಕರು, ಟೈಲರ್, ಅಗಸ, ಅಕ್ಕಸಾಲಿಗ, ಕಮ್ಮಾರ, ಕುಂಬಾರ, ಕ್ಷೌರಿಕ, ಭಟ್ಟಿ ಕಾರ್ಮಿಕರು, ಸಿನಿ ಕಾರ್ಮಿಕರು, ನೇಕಾರರು, ಬೀದಿಬದಿ ವ್ಯಾಪಾರಿಗಳು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್, ಸ್ವತಂತ್ರ ಲೇಖನ ಬರಹಗಾರರು, ಬೀಡಿ ಕಾರ್ಮಿಕರು, ಕಲ್ಯಾಣ ಮಂಟಪ, ಸಭಾಭವನ, ಟೆಂಟ್, ಪೆಂಡಾಲ ಕೆಲಸ ನಿರ್ವಹಿಸುವ ಎಲ್ಲ ಕಾರ್ಮಿಕರು ಅಸಂಘಟಿತ ವಿಕಲಚೇತನ ಕಾರ್ಮಿಕರು ಹಾಗೂ ಅಲೆಮಾರಿ ಪಂಗಡದ ವೃತ್ತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸುಮಾರು 30 ಲಕ್ಷ ಕಾರ್ಮಿಕರು ಒಳಗೊಂಡ ಕಾರ್ಮಿಕರಿಗೆ ಉಚಿತವಾಗಿ ನೋಂದಾಯಿಸಿ ಸ್ಮಾರ್ಟ ಕಾರ್ಡ ನೀಡಲಾಗುತ್ತದೆ.

18 ರಿಂದ 60 ವರ್ಷದೊಳಗಿರುವ, ಆದಾಯ ತೆರಿಗೆ ಪಾವತಿದಾರರಾಗಿರದ ಹಾಗೂ ಇಎಸ್ಐ, ಇಪಿಎಫ್ ಸೌಲಭ್ಯ ಹೊಂದಿದವರು ಈ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ. ನೋಂದಣಿಗೆ ಪಾಸ್‌ಪೋರ್ಟ ಅಳತೆಯ ಭಾವಚಿತ್ರ, ವಯಸ್ಸಿನ ಪ್ರಮಾಣ ಪತ್ರ, ಆಧಾರ ಕಾರ್ಡ, ಪಡಿತರ ಚೀಟಿ ದಾಖಲೆಗಳೊಂದಿಗೆ ಮಂಡಳಿ ವೆಬ್‌ಸೈಟ್ ತಿತಿತಿ.ಇಣಿಥಿ.ಇಚಿಡಿಟಿಚಿಣಚಿಞಚಿ.ರಿಠತ.ಎಟಿ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಈ ಕಾರ್ಡ ಪಡೆದವರಿಗೆ 1 ಲಕ್ಷದವರೆಗಿನ ಅಪಘಾತ ಪರಿಹಾರ ಸೌಲಭ್ಯ ಹಾಗೂ ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚಕ್ಕಾಗಿ 10 ಸಾವಿರ ರೂ. ನೀಡಲಾಗುತ್ತದೆ. ಇದರ ಸದುಪಯೋಗವನ್ನು ಅರ್ಹ ಫಲಾನುಭವಿಗಳು ಪಡೆದುಕೊಳ್ಳುವಂತೆ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೂಡಲಸಂಗಮದಲ್ಲಿ ಬಸವಾದಿ ಶರಣರ ವೈಭವ ಕಾರ್ಯಕ್ರಮ

# ಕಾರ್ಯಕ್ರಮ ಯಶಸ್ವಿಗೆ ಸಚಿವ ತಿಮ್ಮಾಪೂರ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.22–ಬಸವ ಜಯಂತಿ ಅಂಗವಾಗಿ ಕೂಡಲ ಸಂಗಮದಲ್ಲಿ ಎಪ್ರೀಲ್ 29 ಮತ್ತು 30 ರಂದು ನಡೆಯುವ ಅನುಭವ ಮಂಟಪ–ಬಸವಾದಿ ಶರಣರ ವೈಭವ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ ಕರೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಅನುಭವ ಮಂಟಪ–ಬಸವಾದಿ ಶರಣರ ವೈಭವ ಕಾರ್ಯಕ್ರಮದ ಸಿದ್ಧತೆ ಹಾಗೂ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸವಣ್ಣನವರ ಬದುಕು, ಸಂದೇಶ ಹಾಗೂ ಚಿಂತನೆಗಳನ್ನು ವ್ಯಾಪಕವಾಗಿ ಪ್ರಸರಿಸುವ ನಿಟ್ಟಿನಲ್ಲಿ ಕೂಡಲ ಸಂಗಮದಲ್ಲಿ ಎರಡು ದಿನಗಳ ಕಾಲ ವಿಶಿಷ್ಟವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಸಿದ್ಧತೆಗಳು ನಡೆಯುತ್ತಿದ್ದು, ಎಲ್ಲರೂ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಲು ತಿಳಿಸಿದರು.

ಕಾರ್ಯಕ್ರಮದ ಮೊದಲ ದಿನ ಎಪ್ರೀಲ್ 29 ರಂದು ಬೆಳಿಗ್ಗೆ ಎರಡು ಹಾಗೂ ಮಧ್ಯಾಹ್ನ ಎರಡು ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ. ಇದರ ಜೊತೆಗೆ ಸ್ಥಳೀಯ ಕಲಾವಿದರಿಂದ ಸಂಗೀತ ಹಾಗೂ ನೃತ್ಯರೂಪಕ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿದೆ. ಸಂಜೆ ಶಿವರಾತ್ರಿ ನಾಟಕ ಸಹ ಪ್ರದರ್ಶನಗೊಳ್ಳಲಿದೆ. ಗೋಷ್ಠಿಗಳಲ್ಲಿ ಖ್ಯಾತ ಸಾಹಿತಿಗಳು, ಕವಿಗಳು ಹಾಗೂ ಕಲಾವಿದರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಎರಡನೇ ದಿನ ಎಪ್ರೀಲ್ 30 ರಂದು ಬೆಳಿಗ್ಗೆ ಸ್ಥಳೀಯ ಹಾಗೂ ವಿವಿಧ ಜಿಲ್ಲೆಗಳ ಕಲಾತಂಡ ಹಾಗೂ ಸ್ತಬ್ಧ ಚಿತ್ರಗಳ ಅದ್ದೂರಿ ಮೆರವಣಿಗೆ ನಡೆಯಲಿದೆ. ನಂತರ ವೇದಿಕೆ ಕಾರ್ಯಕ್ರಮ ನಂತರ ಸಂಗೀತ, ನಾಟಕ ಹಾಗೂ ವೈವಿದ್ಯಮಯ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಚಿವರು ತಿಳಿಸಿದರು. ಎರಡನೇ ದಿನದ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ 1500ಕ್ಕೂ ಹೆಚ್ಚು ಜನ ಸಾಹಿತಿಗಳು, ವಿವಿಧ ಕಲಾವಿದರು ಪಾಲ್ಗೊಳ್ಳಲಿದ್ದು, ವಿಶಿಷ್ಟವಾಗಿ, ಅರ್ಥಪೂರ್ಣವಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲೆಯ ಪ್ರತಿಯೊಂದು ತಾಲೂಕಿನಿಂದ ಸಾರ್ವಜನಿಕರು ಆಗಮಿಸಲು ಅನುಕೂಲವಾಗುವಂತೆ ಸಾರಿಗೆ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು. ಕಾರ್ಯಕ್ರಮಕ್ಕೆ ಆಗಮಿಸುವರಿಗೆ ಕುಡಿಯುವ ನೀರು ಹಾಗೂ ಊಟದ ವ್ಯವಸ್ಥೆ ಸಹ ಮಾಡಲಾಗುತ್ತಿದೆ ಎಂದರು. ಕಾರ್ಯಕ್ರಮ ಯಶಸ್ವಿಗೆ 11 ಸಮಿತಿಗಳನ್ನು ರಚಿಸಲಾಗಿದೆ ಎಂದರು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಚನ್ನೂರ ಕಾರ್ಯಕ್ರಮದ ರೂಪುರೇಷೆಗಳ ಬಗ್ಗೆ ಸಭೆಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಬೀಳಗಿ ಶಾಸಕ ಜೆ.ಟಿ.ಪಾಟೀಲ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಮಹಾದೇವ ಮುರಗಿ, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್. ಬಸರಿಗಿಡದ ಸೇರಿದಂತೆ ವಿವಿಧ ಸಮಿತಿಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಗಬ್ಬು ನಾರುತ್ತಿರುವ ಚರಂಡಿ ನೀರು:ಪರದಾಡುತ್ತಿರುವ ಗ್ರಾಮಸ್ಥರು.

# ರಸ್ತೆಗಳು ಹಾಗೂ ಕಾಲುವೆಗಳು ನಿರ್ಮಾಣ ಮಾಡಲು ಜೋಗಿರೆ ಒತ್ತಾಯ





ಸಿಸಿ ರಸ್ತೆ ಆಗುವ ಜಾಗದಲ್ಲಿ ಹುಲ್ಲು ಆವರಿಸಿ ನೀರು ನಿಂತು ಗಬ್ಬು ನಾರುತ್ತಿರುವ ದೃಶ್ಯ.

ಹುಮನಾಬಾದ :– ತಾಲೂಕಿನ ಮೋಳಕೇರಾ ಗ್ರಾಮದ ವಿವಿಧ ಬಡಾವಣೆಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿಗಳ ಸರಿಯಾದ ರೀತಿಯಲ್ಲಿ ಇಲ್ಲದ ಕಾರಣ ಮಳೆಯ ನೀರು ಸುಗಮವಾಗಿ ಹೋಗಲು ವ್ಯವಸ್ಥೆ ಇಲ್ಲದ ಕಾರಣ ರಸ್ತೆಯ ಮೇಲೆ ಮಳೆ ನೀರು ನಿಂತು ಗಬ್ಬು ವಾಸನೆಯಿಂದ ಕೂಡಿರುವುದರಿಂದ ಗ್ರಾಮಸ್ಥರು ಮುಗು ಮುಚ್ಚಿಕೊಂಡು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ವಾಹನಗಳು ಸುಗಮ ಸಂಚಾರಕ್ಕೆ ಉತ್ತಮ ಸಿಸಿ ರಸ್ತೆಗಳು ಬೇಕು, ಹಾಗೂ ಕಾಲುವೆಗಳು ಸರಿಯಾಗಿ ನಿರ್ಮಾಣವಾಗಬೇಕು ಎಂದು ಕರ್ನಾಟಕ ವಿದ್ಯಾರ್ಥಿ ವೇದಿಕೆ ತಾಲೂಕ ಅಧ್ಯಕ್ಷ ಅರವಿಂದ ಜೋಗಿರೆ ಒತ್ತಾಯಿಸಿದ್ದಾರೆ. ಈ ಮೋಳಕೇರಾ ಗ್ರಾಮದಲ್ಲಿ ಮೇನ್ ರೋಡಗಳಲ್ಲಿ ಮಾತ್ರ ಸಿಸಿ ರಸ್ತೆಗಳು ಹಾಗೂ ಕಾಲುವೆಗಳು ಇವೆ. ಆದರೆ ಗ್ರಾಮದ ಒಳಗಡೆ ಸಿಸಿ ರಸ್ತೆ ಹಾಗೂ ಕಾಲುವೆಗಳು ಇವೆ, ಸರಿಯಾದ ಸಿಸಿ ರಸ್ತೆ ನಿಮಾಣ ಹಾಗೂ ಕಾಲುವೆಗಳ ನಿರ್ಮಾಣ ಇದ್ದು ಇಲ್ಲದಂತ್ತಾಗಿವೆ. ಗ್ರಾಮದಲ್ಲಿ ಬರಬೇಕಾದರೆ ಒಂದು ಬೈಕ್ ಕೂಡ ಬಾರದ ಹಾಗೆ ಸಿಸಿ ರಸ್ತೆಗಳು ಇವೆ. ಹಾಗೂ ಮನೆಗಳ ನೀರು ಯಾವ ಕಡೆ–ಯೂ ಹೋಗದಂತೆ ಕಾಲುವೆಗಳು ಇಲ್ಲದಂತ್ತಾಗಿವೆ ಎಂದು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಕೇಳಿದರೆ ಯಾವುದೇ ರೀತಿಯ ಉತ್ತರ ನೀಡುತ್ತಿಲ್ಲ ಎಂದು ಅರವಿಂದ ಜೋಗಿರೆ ತಿಳಿಸಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸಿಸಿ ರಸ್ತೆಗಳು ಹಾಗೂ ಕಾಲುವೆಗಳು ನಿರ್ಮಾಣ ಮಾಡಬೇಕು ಇಲ್ಲದಿದ್ದರೆ ಉಗ್ರಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದ್ದಾರೆ.

# ಭೂದಿನಾಚರಣೆ ಸಸಿ ವಿತರಿಸಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪಟ್ಟಣದ ಲಕ್ಷ್ಮೀ ವೆಂಕಟೇಶ್ವರ ಬಾಲ ಮಂದಿರದಲ್ಲಿ ಪರಿಶ್ರಮ ಬೇಸಿಗೆ ಶಿಬಿರದಲ್ಲಿ ಪರಿಸರ ವಾಹಿನಿ ಬೀದರ ವತಿಯಿಂದ ವಿಶ್ವಭೂದಿನಾಚರಣೆಯನ್ನು ಸಸಿ ವಿತರಿಸಿ ಚಾಲನೆ ನೀಡಿದರು. ಸಂಸ್ಥೆಯ ಅಧ್ಯಕ್ಷ ಶಿವಶಂಕರ ತರನಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಖ್ಯಗುರುಗಳಾದ ಶರಣಪ್ಪಾ, ಸಹಶಿಕ್ಷಕರಾದ ಶ್ರೀಶೈಲ್ ಬೇವಿನೂರ, ಸಂಗೀತಾ ಬೆಲೂರ, ಗೋವಿಂದಸಿಂಗ್ ತಿವಾರಿ ಇದ್ದರು.

# ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಯಿಂದ ನಿರ್ವಹಣೆಯಾಗುತ್ತಿರುವ ಕೊಪ್ಪಳ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ 2025–26ನೇ ಸಾಲಿಗಾಗಿ 6ನೇ ತರಗತಿ ಪ್ರವೇಶಕ್ಕೆ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು 5ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಅಥವಾ ಡಾ ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ 75% ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು 25% ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ಭರ್ತಿ ಮಾಡಿದ ಅರ್ಜಿಯೊಂದಿಗೆ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ ಕಾರ್ಡ್ ಹಾಗೂ ವಿದ್ಯಾರ್ಥಿ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಿಗಧಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸುವುದು. ಅಪೂರ್ಣವಾದ ಮತ್ತು ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸಲು ಮೇ 10 ಕೊನೆಯ ದಿನವಾಗಿದ್ದು, ಪೋಷಕರು, ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಸೇವಾಸಿಂಧು ಪೋರ್ಟಲ್‌ನಲ್ಲಿ ವೆಬ್‌ಸೈಟ್ ನಲ್ಲಿ ನೇರವಾಗಿ ಅರ್ಜಿಗಳನ್ನು ಹತ್ತಿರದ ವಸತಿ ಶಾಲೆ, https://sevasind-huservices.karnataka.gov.in ಅಥವಾ https://dom.karnataka.gov.in/ ಮಾಹಿತಿ ಕೇಂದ್ರ ಕಛೇರಿಗಳಲ್ಲಿ ಎಲ್ಲಾ ದಾಖಲೆಗಳೊಂದಿಗೆ ಭೇಟಿ ನೀಡಿ ಕೊನೆಯ ದಿನಾಂಕದೊಳಗಾಗಿ ಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಛೇರಿ ಹಾಗೂ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಾದ ಕೊಪ್ಪಳ ದೂ.ಸಂ: 08539–225070, ಮೊ.ಸಂ: 8088892549, ಗಂಗಾವತಿ ಮೊ.ಸಂ: 9972524670, ಕುಷ್ಟಗಿ ಮೊ.ಸಂ: 8861610578 ಹಾಗೂ ಯಲಬುರ್ಗಾ ಮೊ.ಸಂ: 9620522537, ಇವರಿಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂಜಾಟ:ನಾಲ್ವರ ಬಂಧನ

ಕಲಬುರಗಿ,ಏ.22–ನಗರದ ಮುನಿಮ್ ಸಂಘ ಸಿದ್ದಲಿಂಗೇಶ್ವರ ದೇವಸ್ಥಾನದ ಹತ್ತಿರ ಸಿದ್ದರಾಮ ಎಂಬುವರ ಮನೆಯ ಎದರುಗಡೆ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ರವೀಂದ್ರಕುಮಾರ, ಮೃತ್ಯುಂಜಯ, ಶ್ರೀಶೈಲ, ಅಶೋಕ ಕಟಕೆ, ಯಲ್ಲಪ್ಪ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ನಾಲ್ವರನ್ನು ಬಂಧಿಸಿದ್ದಾರೆ.

# ಸತ್ಯಾಂಶಗಳ ಆಧಾರದ ಮೇಲೆ ಚುನಾವಣಾ ಆಯೋಗದಿಂದ ಅಂಕಿ ಅಂಶಗಳ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ22:ಮಹಾರಾಷ್ಟ್ರದಲ್ಲಿ ನಡೆದ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಬೆಳಿಗ್ಗೆ 7 ರಿಂದ ಸಂಜೆ 6 ರವರೆಗೆ ಮತದಾನ ಕೇಂದ್ರಕ್ಕೆ ತಲುಪಿದ 6,40,87,588 ಮತದಾರರು ಮತ ಚಲಾಯಿಸಿದ್ದಾರೆ. ಗಂಟೆಗೆ ಸರಾಸರಿ 58 ಲಕ್ಷ ಮತಗಳು ಚಲಾವಣೆಯಾಗಿವೆ. ಈ ಸರಾಸರಿ ಪ್ರವೃತ್ತಿಗಳನ್ನು ಗಮನಿಸಿದರೆ, ಕಳೆದ ಎರಡು ಗಂಟೆಗಳಲ್ಲಿ ಸುಮಾರು 116 ಲಕ್ಷ ಮತದಾರರು ಮತ ಚಲಾಯಿಸಿರಬಹುದು. ಆದ್ದರಿಂದ, ಎರಡು ಗಂಟೆಗಳಲ್ಲಿ ಮತದಾರರು 65 ಲಕ್ಷ ಮತಗಳನ್ನು ಚಲಾಯಿಸಿದ್ದು ಸರಾಸರಿ ಗಂಟೆಯ ಮತದಾನದ ಪ್ರವೃತ್ತಿಗಿಂತ ಬಹಳ ಕಡಿಮೆಯಾಗಿದೆ.

ಇದಲ್ಲದೆ, ಪ್ರತಿ ಮತಗಟ್ಟೆಯಲ್ಲಿ, ಅಭ್ಯರ್ಥಿಗಳು/ರಾಜಕೀಯ ಪಕ್ಷಗಳು ಔಪಚಾರಿಕವಾಗಿ ನೇಮಿಸಿದ ಮತಗಟ್ಟೆ ಏಜೆಂಟ್‌ಗಳ ಮುಂದೆ ಮತದಾನ ನಡೆಯಿತು. ಮರುದಿನ ಚುನಾವಣಾ ಅಧಿಕಾರಿ(ಆರ್.ಒ)ಮತ್ತು ಚುನಾವಣಾ ವೀಕ್ಷಕರ ಮುಂದೆ ಪರಿಶೀಲನೆಯ ಸಮಯದಲ್ಲಿ ಯಾವುದೇ ರೀತಿಯ ಅಸಹಜ ಮತದಾನದ ಬಗ್ಗೆ ಐ.ಎನ್.ಸಿ ಯ ನಾಮನಿರ್ದೇಶಿತ ಅಭ್ಯರ್ಥಿಗಳು ಅಥವಾ ಅವರ ಅಧಿಕೃತ ಏಜೆಂಟ್‌ಗಳು ಯಾವುದೇ ಆಧಾರರಹಿತ ಆರೋಪಗಳನ್ನು ಮಾಡಿಲ್ಲ.ಮಹಾರಾಷ್ಟ್ರ ಸೇರಿದಂತೆ ಭಾರತದಲ್ಲಿ ಮತದಾರರ ಪಟ್ಟಿಯನ್ನು 1950 ರ ಜನತಾ ಪ್ರಾತಿನಿಧ್ಯ ಕಾಯ್ದೆ ಮತ್ತು 1960 ರ ಮತದಾರರ ನೋಂದಣಿ ನಿಯಮಗಳ ಪ್ರಕಾರ ತಯಾರಿಸಲಾಗುತ್ತದೆ. ಕಾನೂನಿನ ಪ್ರಕಾರ,ಚುನಾವಣೆಗಳಿಗೆ ಮುಂಚಿತವಾಗಿ ಅಥವಾ ಪ್ರತಿ ವರ್ಷಕ್ಕೊಮ್ಮೆ, ಮತದಾರರ ಪಟ್ಟಿಯ ವಿಶೇಷ ಸಾರಾಂಶ ಪರಿಷ್ಕರಣೆಯನ್ನು ನಡೆಸಲಾಗುತ್ತದೆ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ (ಐ.ಎನ್.ಸಿ) ಸೇರಿದಂತೆ ಎಲ್ಲಾ ರಾಷ್ಟ್ರೀಯ/ರಾಜ್ಯ ರಾಜಕೀಯ ಪಕ್ಷಗಳಿಗೆ ಮತದಾರರ ಪಟ್ಟಿಯ ಅಂತಿಮ ಪ್ರತಿಯನ್ನು ಹಸ್ತಾಂತರಿಸಲಾಗುತ್ತದೆ.ಮಹಾರಾಷ್ಟ್ರ ಚುನಾವಣೆಯ ಸಂದರ್ಭದಲ್ಲಿ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಿದ ನಂತರ,9,77,90,752 ಮತದಾರರಿಗೆ ವಿರುದ್ಧವಾಗಿ, 1 ನೇ ಮೇಲ್ಮನವಿ ಪ್ರಾಧಿಕಾರ (ಡಿಎಂ) ಮುಂದೆ ಒಟ್ಟು 89 ಮೇಲ್ಮನವಿಗಳನ್ನು ಮಾತ್ರ ಸಲ್ಲಿಸಲಾಗಿದೆ. 2 ನೇ ಮೇಲ್ಮನವಿ ಪ್ರಾಧಿಕಾರ (ಸಿಇಒ)




ಮುಂದೆ ಕೇವಲ 1 ಮೇಲ್ಮನವಿಯನ್ನು ಸಲ್ಲಿಸಲಾಗಿದೆ. ಆದ್ದರಿಂದ, 2024 ರಲ್ಲಿ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗಳನ್ನು ನಡೆಸುವ ಮೊದಲು ಐ.ಎನ್.ಸಿ ಅಥವಾ ಯಾವುದೇ ಇತರ ರಾಜಕೀಯ ಪಕ್ಷಗಳ ಬಗ್ಗೆ ಯಾವುದೇ ದೂರು ಇರಲಿಲ್ಲ ಎಂಬುದು ಸ್ಪಷ್ಟವಾಗಿದೆ.

ಮತದಾರರ ಪಟ್ಟಿಯ ಪರಿಷ್ಕರಣೆಯ ಸಮಯದಲ್ಲಿ, 1,00,427 ಮತಗಟ್ಟೆಗಳಿಗೆ, ಇ.ಆರ್.ಒ ಗಳಿಂದ ನೇಮಿಸಲ್ಪಟ್ಟ 97,325 ಬೂತ್ ಮಟ್ಟದ ಅಧಿಕಾರಿಗಳೊಂದಿಗೆ, ಐ.ಎನ್.ಸಿ ಯಿಂದ 27,099 ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳಿಂದ 1,03,727 ಬೂತ್ ಮಟ್ಟದ ಏಜೆಂಟ್‌ಗಳನ್ನು ಸಹ ನೇಮಿಸಲಾಯಿತು. ಆದ್ದರಿಂದ, ಮಹಾರಾಷ್ಟ್ರದ ಮತದಾರರ ಪಟ್ಟಿಯ ವಿರುದ್ಧ ಎತ್ತಲಾದ ಈ ಆಧಾರರಹಿತ ಆರೋಪಗಳು ಕಾನೂನಿನ ನಿಯಮಕ್ಕೆ ವಿರುದ್ಧವಾಗಿವೆ. ಚುನಾವಣಾ ಆಯೋಗವು 2024 ನೇ ಡಿಸೆಂಬರ್ 24 ರಂದು ಐ.ಎನ್.ಸಿ ಗೆ ನೀಡಿದ ಉತ್ತರದಲ್ಲಿ ಈ ಎಲ್ಲಾ ಸಂಗತಿಗಳನ್ನು ಹೊರತಂದಿದೆ. ಅದು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಇಂತಹ ವಿಷಯಗಳನ್ನು ಮತ್ತೆ ಮತ್ತೆ ಎತ್ತುವಾಗ ಈ ಎಲ್ಲಾ ಸಂಗತಿಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗುತ್ತಿದೆ ಎಂದು ತೋರುತ್ತದೆ.ಸಾರಾಂಶ:

ಭಾರತದ ಎಲ್ಲಾ ಚುನಾವಣೆಗಳು ಕಾನೂನಿನ ಪ್ರಕಾರ ನಡೆಯುತ್ತವೆ. ಭಾರತದಲ್ಲಿ ಚುನಾವಣೆಗಳು ನಡೆಯುವ ಪ್ರಮಾಣ ಮತ್ತು ನಿಖರತೆಯನ್ನು ಪ್ರಪಂಚದಾದ್ಯಂತ ವ್ಯಾಪಕವಾಗಿ ಪ್ರಶಂಸಿಸಲಾಗುತ್ತದೆ.ಮತದಾರರ ಪಟ್ಟಿ ತಯಾರಿಕೆ, ಮತದಾನ ಮತ್ತು ಎಣಿಕೆ ಇತ್ಯಾದಿಗಳನ್ನು ಒಳಗೊಂಡಂತೆ ಪ್ರತಿಯೊಂದು ಚುನಾವಣಾ ಪ್ರಕ್ರಿಯೆಯನ್ನು ಸರ್ಕಾರಿ ಸಿಬ್ಬಂದಿಯೇ ನಡೆಸುತ್ತಾರೆ ಮತ್ತು ಅದು ಕೂಡ ರಾಜಕೀಯ ಪಕ್ಷಗಳು / ಅಭ್ಯರ್ಥಿಗಳಿಂದ ಮತಗಟ್ಟೆಯಿಂದ ಕ್ಷೇತ್ರ ಮಟ್ಟದವರೆಗೆ ಔಪಚಾರಿಕವಾಗಿ ನೇಮಕಗೊಂಡ ಅಧಿಕೃತ ಪ್ರತಿನಿಧಿಗಳ ಸಮ್ಮುಖದಲ್ಲಿ ನಡೆಯುತ್ತದೆ ಎಂಬುದು ಇಡೀ ರಾಷ್ಟ್ರಕ್ಕೆ ತಿಳಿದಿದೆ.ಯಾರಾದರೂ ತಪ್ಪು ಮಾಹಿತಿಯನ್ನು ಹರಡಿದರೆ, ಅದು ಕಾನೂನಿಗೆ ಅಗೌರವ ತೋರುವುದಲ್ಲದೆ, ಅವರ ಸ್ವಂತ ರಾಜಕೀಯ ಪಕ್ಷದಿಂದ ನೇಮಕಗೊಂಡ ಸಾವಿರಾರು ಪ್ರತಿನಿಧಿಗಳಿಗೆ ಅಪಖ್ಯಾತಿ ತರುತ್ತದೆ ಮತ್ತು ಚುನಾವಣೆಯ ಸಮಯದಲ್ಲಿ ದಣಿವರಿಯಿಲ್ಲದೆ ಮತ್ತು ಪಾರದರ್ಶಕವಾಗಿ ಕೆಲಸ ಮಾಡುವ ಲಕ್ಷಾಂತರ ಚುನಾವಣಾ ಸಿಬ್ಬಂದಿಯನ್ನು ನಿರುತ್ಸಾಹಗೊಳಿಸುತ್ತದೆ.

ಮತದಾರರ ಯಾವುದೇ ಪ್ರತಿಕೂಲ ತೀರ್ಪಿನ ನಂತರ, ಚುನಾವಣಾ ಆಯೋಗವು ರಾಜಿಯಾಗಿದೆ ಎಂದು ಹೇಳುವ ಮೂಲಕ ಅದನ್ನು ಕೆಣಕಲು ಪ್ರಯತ್ನಿಸುವುದು ಸಂಪೂರ್ಣವಾಗಿ ಅಸಂಬದ್ಧವಾಗಿದೆ ಎಂದು ಭಾರತ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

# ಸೈಕಲ್ ಸ್ಪರ್ಧೆ: ನಕ್ಷ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 22 : ಆರು ವರ್ಷದ ಒಳಗಿನ ಮಕ್ಕಳಿಗಾಗಿ ರೋಟರಿ ಕ್ಲಬ್ ಬೀದರ್ ವತಿಯಿಂದ ನಗರದ ನೆಹರೂ ಕ್ರೀಡಾಂಗಣದಲ್ಲಿ ಈಚೆಗೆ ನಡೆದ ಸೈಕಲ್ ತುಳಿಯುವ ಸ್ಪರ್ಧೆಯಲ್ಲಿ ಬೆಂಗಳೂರು ಎಜುಕೇಷನ್ ಸೆಂಟರ್‌ನ ನಕ್ಷ ಶಿವಕುಮಾರ ಪ್ರಥಮ ಸ್ಥಾನ ಗಳಿಸಿದರು.

ನ್ಯಾಷನಲ್ ಸ್ಕೂಲ್‌ನ ವರುಣ್ ದ್ವಿತೀಯ ಹಾಗೂ ಅದೇ ಶಾಲೆಯ ಆಯುಷ್ ತೃತೀಯ ಸ್ಥಾನ ಪಡೆದರು.

ಪ್ರಥಮ ಬಹುಮಾನವಾಗಿ ಸೈಕಲ್, ಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಬಹುಮಾನವಾಗಿ ರೂ. 2,100 ಹಾಗೂ ರೂ. 1,100 ವಿತರಿಸಲಾಯಿತು.

ಸ್ಪರ್ಧೆಯಲ್ಲಿ ಪಾಲ್ಗೊಂಡ ಮಕ್ಕಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. 40 ಮಕ್ಕಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ಒಂದು ತಾಸು ಸೈಕಲ್ ತುಳಿಯಿರಿ: ನಿತ್ಯ ಕನಿಷ್ಠ ಒಂದು ತಾಸು ಸೈಕಲ್ ತುಳಿಯುವುದು ಆರೋಗ್ಯಕ್ಕೆ ಒಳ್ಳೆಯದು. ಪ್ರತಿಯೊಬ್ಬರೂ ಇದನ್ನು ಅನುಸರಿಸಬೇಕು ಎಂದು ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಸೂರ್ಯಕಾಂತ ರಾಮಶೆಟ್ಟಿ ಹೇಳಿದರು.

ಸೈಕಲ್ ತುಳಿಯುವ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಈಚಿನ ದಿನಗಳಲ್ಲಿ ಸೈಕಲ್ ಬಳಕೆ ಕಡಿಮೆಯಾಗಿದೆ. ನಿತ್ಯ ಸೈಕಲ್ ತುಳಿಯುವುದನ್ನು ರೂಢಿಸಿಕೊಂಡರೆ ಆರೋಗ್ಯ ಸುಧಾರಣೆಯಾಗುತ್ತದೆ ಎಂದು ಅಧ್ಯಕ್ಷತೆ ವಹಿಸಿದ್ದ ಕ್ಲಬ್ ಅಧ್ಯಕ್ಷ ಸೋಮಶೇಖರ ಪಾಟೀಲ ತಿಳಿಸಿದರು.

ಗ್ರಾಮೀಣ ಕ್ರೀಡೆಗಳಿಗೆ ಉತ್ತೇಜನ ನೀಡಲು ಕ್ಲಬ್‌ನಿಂದ ಪ್ರತಿ ವರ್ಷ ಪ್ರೌಢಶಾಲಾ ವಿದ್ಯಾರ್ಥಿ,ವಿದ್ಯಾರ್ಥಿನಿಯರಿಗೆ ಸ್ಪರ್ಧೆ ಏರ್ಪಡಿಸುತ್ತ ಬರಲಾಗಿದೆ. ಈ ವರ್ಷ ಮೊದಲ ಬಾರಿಗೆ 6 ವರ್ಷದ ಒಳಗಿನ ಮಕ್ಕಳಿಗೆ ದಿಲೀಪ್ ಸೈಕಲ್ ಸ್ಟೋರ್ ಸಹಯೋಗದಲ್ಲಿ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಹೇಳಿದರು.

ಕ್ರೀಡೆಗಳು ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗಿವೆ. ಪಾಲಕರು ಮಕ್ಕಳಿಗೆ ಶಿಕ್ಷಣದ ಜತೆಗೆ ಒಳ್ಳೆಯ ಸಂಸ್ಕಾರ ಕೊಡಬೇಕು. ಮೊಬೈಲ್‌ನಿಂದ ಆದಷ್ಟು ದೂರವಿರಿಸಿ, ಕ್ರೀಡೆಯಲ್ಲಿ ಪಾಲ್ಗೊಳ್ಳಲು ಪ್ರೇರೇಪಿಸಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಸಲಹೆ ಮಾಡಿದರು.

ಹಿರಿಯ ಎಂಜಿನಿಯರ್‌ಗಳಾದ ಹಾವಶೆಟ್ಟಿ ಪಾಟೀಲ, ರವಿ ಮೂಲಗೆ, ಅನಿಲಕುಮಾರ ಔರಾದೆ, ಡಾ. ಕಾಮತಿಕರ್, ವಿಲಾಸರಾವ್ ಮೋರೆ, ನರೇಂದ್ರ ಸಾಂಘವಿ, ಡಾ. ಸುರೇಶ ಪಾಟೀಲ, ಭಗವಂತಪ್ಪ, ಅನಿಲಕುಮಾರ ಬಿರಾದಾರ, ಸುಧಾಕರ ರೆಡ್ಡಿ, ಅಭಿನವ ಗಾದಾ, ರೋಟರಿ ಕ್ಲಬ್ ಮಾಜಿ ಅಧ್ಯಕ್ಷ ನಾಗೇಂದ್ರ ನಿಟ್ಟೂರೆ, ಅಮರನಾಥ ಡೊಳ್ಳಿ ಉಪಸ್ಥಿತರಿದ್ದರು. ಕ್ಲಬ್ ಕಾರ್ಯದರ್ಶಿ ಕೃಪಾಸಿಂಧು ಪಾಟೀಲ ಸ್ವಾಗತಿಸಿದರು. ಪ್ರೊ. ಚನ್ನಪ್ಪಗೌಡ ನಿರೂಪಿಸಿದರು. ಕೋಶಾಧ್ಯಕ್ಷ ಅನಿಲಕುಮಾರ ಮಸೂದಿ ವಂದಿಸಿದರು.

# 3 ಲಕ್ಷ ಕ್ವಿಂಟಾಲ್ ಜೋಳ ಖರೀದಿಸಲು ಸರ್ಕಾರದ ಸಮ್ಮತಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಬಳ್ಳಾರಿ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಬೆಳದ 3 ಲಕ್ಷ ಕ್ವಿಂಟಲ್ ಜೋಳವನ್ನು ಬೆಂಬಲ ಬೆಲೆ ಅಡಿಯಲ್ಲಿ ಸರ್ಕಾರ ಖರೀದಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸರ್ಕಾರಕ್ಕೆ ಮನವಿ ಮಾಡಿದ್ದರ ಹಿನ್ನೆಲೆಯಲ್ಲಿ ಇಂದು ಮಂಗಳವಾರ ಸಭೆ ಜರುಗಿದ್ದು ಸರ್ಕಾರ ರೈತರ ಮನವಿಗೆ ಸಮ್ಮತಿಸಿದೆ.

ವಿಧಾನಸೌಧ ದಲ್ಲಿ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಝಡ್.ಝಮೀರ್ ಅಹ್ಮದ್ ಖಾನ್ ರೈತ ಸಂಘದ ನಿಯೋಗದ ಜೊತೆಗೆ ಸಭೆಯನ್ನು ನಡೆಸಿದ್ದು, ಸಚಿವ ಮುನಿಯಪ್ಪನವರು ಬಳ್ಳಾರಿ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಬೆಳೆದ ಜೋಳವನ್ನು ಯಾವುದೇ ಮಿತಿಯಿಲ್ಲದೆ ಬೆಂಬಲ ಬೆಲೆ ಅಡಿಯಲ್ಲಿ ಖರೀದಿಸಲು ಸೂಕ್ತ ಆದೇಶವನ್ನು ಹೊರಡಿಸುವುದಾಗಿ ನಿಯೋಗಕ್ಕೆ ಭರವಸೆಯನ್ನು ನೀಡಿದ್ದಾರೆಂದು ಸಂಘದ ರಾಜ್ಯಾಧ್ಯಕ್ಷ ಆರ್. ಮಾಧವರೆಡ್ಡಿ ಕರೂರು ತಿಳಿಸಿದ್ದಾರೆ.

ಏ.14ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಆಹಾರ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ಸೇರಿದಂತೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝಡ್. ಝಮೀರ್ ಅಹ್ಮದ್ ಖಾನ್ ಇವರಿಗೆ ಮನವಿಯನ್ನು ಸಲ್ಲಿಸಿದ್ದರು. ಮನವಿಗೆ ಸರ್ಕಾರದಿಂದ ಸ್ಪಂದನೆ ದೊರೆಯದ ಕಾರಣ ಏ.17ರಂದು ದಿಬಳ್ಳಾರಿ ಜಿಲ್ಲಾಡಳಿತದ ಮುಂದೆ ಅನಿರ್ದಿಷ್ಟಾವಧಿ ಧರಣಿಯನ್ನು ಆರಂಭಿಸಲಾಗಿತ್ತು, ಜಿಲ್ಲಾಧಿಕಾರಿಗಳು ಸರ್ಕಾರ ಮತ್ತು ಸಚಿವರುಗಳ ಜೊತೆಗೆ ಚರ್ಚಿಸಿ ರೈತರಿಂದ ಜೋಳವನ್ನು ಖರೀದಿಸಲು ಪ್ರಯತ್ನಿಸುವುದಾಗಿ ಹೇಳಿದ್ದರು. ಮುಷ್ಕರ ಹಿಂಪಡೆಯಲಾಗಿತ್ತು.

ನಗರದ ಶಾಸಕ ನಾರಾ ಭರತ್ ರೆಡ್ಡಿ ಪ್ರತಿಭಟನೆಯ ಸ್ಥಳಕ್ಕೆ ಭೇಟಿ ನೀಡಿ ಸಚಿವರೊಂದಿಗೆ ಚರ್ಚಿಸಿ ರೈತರಿಗೆ ನ್ಯಾಯವನ್ನು ದೊರಕಕಿಸಿಕೊಡಬೇಕೆಂದು ಮನವಿ ಮಾಡಿದ್ದರು. ರುವ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಬಿ.ನಾಗೇಂದ್ರ ಇವರೂ ಸಹ ಹಿಂಗಾರು ಹಂಗಾಮಿನ ಜೋಳವನ್ನು ಖರೀದಿಸಲು ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಆಹಾರ ಇಲಾಖೆ ಸಚಿವರೊಂದಿಗೆ ಚರ್ಚಿಸಲು ಇಂದು ಮಂಗಳವಾರ ಸಭೆ ನಡೆಯಿತು ನ ಎಂದು ಅವರು ತಿಳಿಸಿದ್ದಾರೆ.

ಈ ಸಭೆಯಲ್ಲಿ ಸಂಘದ ಪದಾಧಿಕಾರಿಗಳಾದ ಚಾಗನೂರು ಮಲ್ಲಿಕಾರ್ಜುನ ರೆಡ್ಡಿ, ಲೇಪಾಕ್ಷಿ, ಓಂಕಾರಿ, ವಿಶ್ವನಾಥ, ತಿಮ್ಮಾರೆಡ್ಡಿ, ಹನುಮೇಶ, ಶಿವಕುಮಾರ್ ಮತ್ತು ರಾಜಗೋಪಾಲ ರೆಡ್ಡಿ ಇನ್ನಿತರರು ಇದ್ದರು.

# 10 ವರ್ಷ ಮೇಲ್ಪಟ್ಟ ಅಪ್ರಾಪ್ತರಿಗೂ ಬ್ಯಾಂಕ್ ಖಾತೆ ಹೊಂದಲು ಆರ್‌ಬಿಐ ಒಪ್ಪಿಗೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.22: ಇನ್ಮುಂದೆ 10 ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ಬ್ಯಾಂಕ್ ಖಾತೆ ತೆರೆಯಬಹುದು ಎಂದು ಭಾರತೀಯ ರಿಸರ್ವ್ ಬ್ಯಾಂಕ್ ತಿಳಿಸಿದೆ.

ಏ.21 ರಂದು ಹೊರಡಿಸಿರುವ ಈ ಹೊಸ ನಿರ್ದೇಶನದಲ್ಲಿ, 10 ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಪ್ರಾಪ್ತರು ಆರ್‌ಬಿಐನ 1976ರ ಸುತ್ತೋಲೆಗೆ ಅನುಗುಣವಾಗಿ ತಮ್ಮ ಪೋಷಕರ ಮೂಲಕ ಉಳಿತಾಯ ಮತ್ತು ಅವಧಿ ಠೇವಣಿ ಖಾತೆಗಳನ್ನು ತೆರೆಯಬಹುದು ಎಂದು ತಿಳಿಸಿದೆ.

ಇದೇ ಜುಲೈ 1 ರಿಂದ ಈ ಆದೇಶ ಜಾರಿಗೆ ಬರಲಿದ್ದು, ಎಲ್ಲಾ ಬ್ಯಾಂಕ್‌ಗಳು ಈ ಮಾರ್ಗಸೂಚಿಗಳನ್ನು ಅನುಸರಿಸಬೇಕು ಎಂದು ತಿಳಿಸಿದೆ.

ಈ ನಿರ್ದೇಶನದ ಅಡಿಯಲ್ಲಿ ಅಪ್ರಾಪ್ತರು ತಮ್ಮ ಪೋಷಕರ ನೆರವಿಲ್ಲದೆ ಸ್ವತಂತ್ರವಾಗಿ ತಮ್ಮ ಖಾತೆಗಳನ್ನು ನಿರ್ವಹಿಸಬಹುದು. 18 ವಯಸ್ಸಿನ ನಂತರ ತಮ್ಮ ಸಹಿ ಮಾದರಿ ಹಾಗೂ ಇನ್ನಿತರ ದಾಖಲೆಗಳನ್ನು ನವೀಕರಿಸಬೇಕು.

ಬ್ಯಾಂಕ್ ಖಾತೆಯ ಜೊತೆಗೆ ಇಂಟರ್ನೆಟ್ ಬ್ಯಾಂಕಿಂಗ್, ಡೆಬಿಟ್ ಕಾರ್ಡ್ ಹಾಗೂ ಚೆಕ್ ಬುಕ್ ಸೇರಿ ಹೆಚ್ಚುವರಿ ಸೇವೆಗಳನ್ನು ಪಡೆಯಬಹುದು. ಇದಕ್ಕೂ ಮೊದಲು ಈ ರೀತಿ ಅಪ್ರಾಪ್ತರು ಉಳಿತಾಯ ಖಾತೆಗಳನ್ನು ತೆರೆಯಲು ಅವಕಾಶ ಆರ್‌ಬಿಐ ಅವಕಾಶ ನೀಡಿತ್ತು. ಆದರೆ ಪೋಷಕರ ನೆರವಿನಿಂದಲೇ ಖಾತೆಯನ್ನು ತೆರೆದು, ನಿರ್ವಹಿಸಬೇಕಿತ್ತು. 18 ವಯಸ್ಸಿನ ನಂತರವೇ ಅವರು ತಮ್ಮ ಖಾತೆಯನ್ನು ಸ್ವತಂತ್ರವಾಗಿ ನಿರ್ವಹಿಸಲು ಅವಕಾಶವಿತ್ತು. ಜೊತೆಗೆ ಡೆಬಿಟ್ ಕಾರ್ಡ್, ಇಂಟರ್ನೆಟ್ ಬ್ಯಾಂಕಿಂಗ್‌ನಂತಹ ಇತರ ಬ್ಯಾಂಕಿಂಗ್ ಸೌಲಭ್ಯಗಳು ಲಭ್ಯವಿರಲಿಲ್ಲ. ಸದ್ಯ ಈ ನಿಯಮಗಳಲ್ಲಿ ಬದಲಾವಣೆ ತಂದಿದೆ.

ಇನ್ನೂ ಯಾವುದೇ ಸಂದರ್ಭದಲ್ಲೂ ಖಾತೆಗಳಿಂದ ಹಣವನ್ನು ಓವರ್‌ಡ್ರಾ ಮಾಡಬಾರದು ಮತ್ತು ಯಾವಾಗಲೂ ಕ್ರೆಡಿಟ್ ಬ್ಯಾಲೆನ್ಸ್ ಕಾಯ್ದುಕೊಳ್ಳಬೇಕು ಎಂದು ಆರ್‌ಬಿಐ ಒತ್ತಿ ಹೇಳಿದೆ.

# ಮಹಿಳೆಗೆ ಹಿಂಸೆನೀಡಿ ಜೀವ ಬೆದರಿಕೆ: ಇಬ್ಬರಿಗೆ 2 ವರ್ಷ ಜೈಲು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.22:ಮಹಿಳೆಯೊಬ್ಬರಿಗೆ ಕಿರಿಕಿರಿ ನೀಡಿ ಜೀವ ಬೇದರಿಕೆ ಹಾಕಿದ ಆರೋಪ ಸಾಬೀತಾಗಿದ್ದರಿಂದ ಇಲ್ಲಿನ 5ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಮಹಿಳೆಯ ಪತಿ ಸೇರಿ ಇಬ್ಬರಿಗೆ 2 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಜೇವರಗಿ ತಾಲೂಕಿನ ಇಟಗಾ ನಿವಾಸಿ ಮಲ್ಲಿನಾಥ ನಾಗೇಂದ್ರಪ್ಪ ಮತ್ತು ಶ್ಯಾಮರಾಯ ಕಾಶಿನಾಥ ಪಾಟೀಲ ಶಿಕ್ಷೆಗೆ ಗುರಿಯಾಗಿದ್ದಾರೆ.

ಮಲ್ಲಿನಾಥ,ತನ್ನ ಹೆಂಡತಿಗೆ ಕಿರುಕುಳ ನೀಡಿ ಅನೈತಿಕ ವ್ಯವಹಾರದ ಕೃತ್ಯಕ್ಕೆ ಇಳಿಸಿದ್ದ. ಬಳಿಕ ಪತ್ನಿ ಹಾಗೂ ಮಕ್ಕಳನ್ನು ಮನೆಯಿಂದ ಹೊರ ಹಾಕಿದ್ದ. ಶ್ಯಾಮರಾಯ ಸಹ ಮಹಿಳೆ ಹಾಗೂ ಆಕೆಯ ಮಕ್ಕಳಿಗೆ ಜೀವ ಬೆದರಿಕೆ ಹಾಕಿದ್ದ.

ಈ ಬಗ್ಗೆ ನಗರ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ಪೊಲೀಸ್ ಅಧಿಕಾರಿಗಳು ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ವಾದಪ್ರತಿವಾದ ಆಲಿಸಿದ 5ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಚಂದ್ರಶೇಖರ ಕರೋಶಿ ಅವರು ಇಬ್ಬರೂ ಅಪರಾಧಿಗಳಿಗೆ 2 ವರ್ಷ ಜೈಲು ಶಿಕ್ಷೆ ಹಾಗೂ ತಲಾ 80 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ.

ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಹಯ್ಯಾಳಪ್ಪ ಎನ್ ಬಳಬಟ್ಟಿ ವಾದ ಮಂಡಿಸಿದರು

# ಅಲೆಮಾರಿ ಸಮುದಾಯ ಜನರಿಗೆ ಸರ್ಕಾರ ಸಾಕಷ್ಟು ಯೋಜನೆ ರೂಪಿಸಿದೆ

## ಜಾಗೃತಿ ಮೂಡಿಸಿ ಸವಲತ್ತು ಕಲ್ಪಿಸಲು ಅಧಿಕಾರಿಗಳು ಮುಂದಾಗಬೇಕು:ಪಲ್ಲವಿ ಜಿ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.22:ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಹಾಗೂ ಅರೇ ಅಲೆಮಾರಿ ಜನರ ಕಲ್ಯಾಣಕ್ಕೆ ಸರ್ಕಾರ ಹತ್ತಾರು ಯೋಜನೆ ರೂಪಿಸಿದ್ದು, ಇದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರುವ ಜವಾಬ್ದಾರಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಮತುವರ್ಜಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಹೇಳಿದರು. ಮಂಗಳವಾರ ಇಲ್ಲಿನ ಡಿ.ಸಿ ಕಚೇರಿ ಸಭಾಂಗಣದಲ್ಲಿ ಅಲೆಮಾರಿ-ಅರೇ ಅಲೆಮಾರಿ ಸಮುದಾಯದ ಜನರಿಗೆ ನಿಗಮದಿಂದ ನೀಡಲಾಗುವ ವಿವಿಧ ಸೌಲಭ್ಯಗಳ ಕುರಿತು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಅಲೆಮಾರಿ ಸಮುದಾಯ ಯೋಜನೆಗಳ ಅನುಷ್ಠಾನ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಅನುಷ್ಠಾನ ಸಮಿತಿಗೆ ಹೊಸದಾಗಿ ಸದಸ್ಯರನ್ನು ಕೂಡಲೆ ನೇಮಿಸಬೇಕು ಎಂದರು.

ನಿಗಮದಿಂದ ವಸತಿ ರಹಿತರಿಗೆ ಸಾಲ ನೀಡಲಾಗುತ್ತದೆ. ಆದರೆ ಜಿಲ್ಲೆಯಿಂದ ಇದುವರೆಗೆ ಕೇವಲ 8 ಪ್ರಸ್ತಾವನೆ ಬಂದಿವೆ. ಹೆಚ್ಚಿನ ಪ್ರಸ್ತಾವನೆಗಳು ಕಳುಹಿಸಿದಲ್ಲಿ ನಿಗಮದಿಂದ ಅನುಮೋದನೆ ನೀಡಲಾಗುವುದು. ಇನ್ನು ಬ್ಯಾಂಕ್ ಲಿಂಕೇಜ್ ಕಾರ್ಯಕ್ರಮಗಳಲ್ಲಿ ಫಲಾನುಭವಿಗಳಿಗೆ ಬ್ಯಾಂಕ್‌ಗಳು ಅನಗತ್ಯ ಕಿರಿಕಿರಿ ಮಾಡಬಾರದು ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷಕುಮಾರ ಅವರಿಗೆ ಸೂಚಿಸಿದರು. ಅಲೆಮಾರಿ ಸಮುದಾಯ ದಿನನಿತ್ಯ ಸಂಚಾರ ಮಾಡುತ್ತಾ ಊರಿಂದ ಊರಿಗೆ ಅಲೆಯುತ್ತಾರೆ. ಹೀಗಾಗಿ ಇಲ್ಲಿ ಮಕ್ಕಳು ಶಿಕ್ಷಣದಿಂದ ವಂಚಿತರಾಗುವುದು ಸರ್ವೇ ಸಾಮಾನ್ಯ. ಹೀಗಾಗಿ ಇಂತಹ ಮಕ್ಕಳನ್ನು ಶಿಕ್ಷಕರು, ಶಿಕ್ಷಣ ಇಲಾಖೆ ಗುರುತಿಸಿ ಅವರಿಗೆ ಪ್ರಾಥಮಿಕ ಶಿಕ್ಷಣ ಕೊಡಿಸಬೇಕು. ಇನ್ನು 6ನೇ ತರಗತಿ ಪ್ರವೇಶಕ್ಕೆ ಸಮಾಜ ಕಲ್ಯಾಣ ಇಲಾಖೆ ಅಧೀನದ ಕ್ರೈಸ್ ವಸತಿ ಶಾಲೆಯಲ್ಲಿ ಪ್ರವೇಶ ಪರೀಕ್ಷೆ ಇಲ್ಲದೆ ಅಲೆಮಾರಿ ಸಮುದಾಯದ ಮಕ್ಕಳಿಗೆ ಪ್ರವೇಶಾತಿ ಕಲ್ಪಿಸಲು ಸರ್ಕಾರದ ಆದೇಶವಿದ್ದು, ಈ ಬಗ್ಗೆ ಸಮುದಾಯದ ಜನರಿಗೆ ಅರಿವು ಮೂಡಿಸಬೇಕು ಎಂದರು.

ಅಲೆಮಾರಿ ಸಮುದಾಯದಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಿದ್ದು, ಇದರ ನಿವಾರಣೆಗೆ ಜಾಗೃತಿ ಕೆಲಸ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಮಾಡಬೇಕು ಎಂದು ಪಲ್ಲವಿ ಜಿ. ಅಭಿಪ್ರಾಯಪಟ್ಟರು. ಡಿ.ಸಿ.ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಮಿಷನ್ ಸುರಕ್ಷಾ ಯೋಜನೆಯಡಿ 450 ತರಬೇತಿದಾರರನ್ನು ಬಳಸಿಕೊಂಡು ಕಲಬುರಗಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೋ, ಸೇಫ್ ಟಚ್, ಅನಸೇಫ್ ಕುರಿತು ವ್ಯಾಪಕ ಪ್ರಚಾರ ಮಾಡಲಾಗಿದೆ. ಅಲೆಮಾರಿ ಸಮುದಾಯದ ಜನರು ಹೆಚ್ಚಿರುವ ಸ್ಥಳಗಳಲ್ಲಿ ಈ ಬಗ್ಗೆ ಇನ್ನು ಹೆಚ್ಚು ಪ್ರಚಾರ ಕೈಗೊಳ್ಳಿ ಎಂದರು. ದೌರ್ಜನ್ಯ ಪ್ರಕರಣದಲ್ಲಿ ಪರಿಹಾರ ಕೂಡಲೆ ನೀಡಿ ಸಂತ್ರಸ್ತ ಕುಟುಂಬ ಸದಸ್ಯರಿಗೆ ನೌಕರಿ ನೀಡುವ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚು ಮುತುವರ್ಜಿ ವಹಿಸಬೇಕು. ದೌರ್ಜನ್ಯ ಸಮಿತಿಗೆ ಅಲೆಮಾರಿ ಸಮುದಾಯ ಮುಖಂಡರನ್ನು ವಿಶೇಷ ಆಹ್ವಾನಿತರಾಗಿ ಕರೆಯಬೇಕು ಎಂದ ಅಧ್ಯಕ್ಷೆ ಪಲ್ಲವಿ ಜಿ. ಅವರು ಸೇಡಂ ತಾಲೂಕಿನ ಮುಧೋಳದ ಸರ್ವೆ ನಂ.37ರಲ್ಲಿ 60 ಬುಡ್ಗ ಜಂಗಮ ಕುಟುಂಬಗಳು ವಾಸಿಸುತ್ತಿದ್ದು, ಇವರಿಗೆ ಅಗತ್ಯ ಮೂಲಸೌಕರ್ಯ ಇಲ್ಲ. ಮೂಲಸೌಕರ್ಯ ಇಲ್ಲದೆ ಬದುಕು ಸಾಗಿಸೋದು ಹೇಗೆ ಎಂದು ಪ್ರಶ್ನಿಸಿ, ಕೂಡಲೆ ಅಗತ್ಯ ಸೌಲಭ್ಯ ಒದಗಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಅಲ್ಲಾಭಕ್ಷ ಮಾತನಾಡಿ 2011 ಜನಗಣತಿ ಪ್ರಕಾರ 12,938 ಎಸ್.ಸಿ, 17,250 ಎಸ್.ಟಿ ಹಾಗೂ 830 ಆದಿವಾಸಿ ಅಲೆಮಾರಿ ಜನ ಜಿಲ್ಲೆಯಲ್ಲಿದ್ದಾರೆ. ಇದರಲ್ಲಿ 501 ವಸತಿ ರಹಿತರು ಹಾಗೂ 570 ನಿವೇಶನ ರಹಿತರಿದ್ದು, ಇವರಿಗೆ ಸೂರು ಕಲ್ಪಿಸಲು ಫಲಾನುಭವಿಗಳ ಮಾಹಿತಿ ಸಂಗ್ರಹಿಸಿದ್ದು, ಪರಿಶೀಲಿಸಿ ಹಂತ ಹಂತವಾಗಿ ನಿಗಮಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದೆಂದು ತಿಳಿಸಿ ನಿಗಮವ ವಿವಿಧ ಯೋಜನೆಗಳ ಅನುಷ್ಠಾನದ ಕುರಿತು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಬಿ.ಎಸ್. ಆನಂದಕುಮಾರ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ.ಮಹೇಶ ಮೇಘಣ್ಣನವರ್, ಸೇಡಂ ಉಪ ವಿಭಾಗದ ಸಹಾಯಕ ಆಯುಕ್ತ ಪ್ರಭುರೆಡ್ಡಿ, ಕಲಬುರಗಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಜಗದೇವಪ್ಪ, ಸೇರಿದಂತೆ ತಾಲೂಕಿನ ತಹಶೀಲ್ದಾರರು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರುಗಳು ಇದ್ದರು.

# ವಕ್ಫ್ ಕಾಯಿದೆ ವಿರೋಧಿಸುವವರಿಗೆ ರ್‍ಯಾಲಿಗೆ ಅವಕಾಶ ನೀಡಬೇಡಿ



ಮಲ್ಲಮ್ಮ ನುಡಿ ವಾರ್ತೆ ಬೀದರ. ಏ. 22 : ವಕ್ಫ್ ಕಾಯಿದೆ ಉಲ್ಲಂಘಿಸಿ ನಾಳೆ ರ್‍ಯಾಲಿ ಮಾಡಿ ಕೋಮು ಗಲಭೆಗೆ ಪ್ರಚೋದಿಸುತ್ತಿರುವವರಿಗೆ ರ್‍ಯಾಲಿಗೆ ಅವಕಾಶ ನೀಡಬೇಡಿ ಎಂದು ಬಿಜೆಪಿ ಸ್ಥಳಿಯ ಹಿರಿಯ ಮುಖಂಡ ಈಶ್ವರಸಿಂಗ್ ಠಾಕೂರ್ ಆಗ್ರಹಿಸಿದ್ದಾರೆ. ಮಂಗಳವಾರ ನಗರದ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಹಿಂದೆ 1968 ಹಾಗೂ 1992ರಲ್ಲಿ ರ್‍ಯಾಲಿ ನೆಪವೊಡ್ಡಿ ಕೋಮು ಗಲಭೆ ಸೃಷ್ಟಿಸಲಾಗಿತ್ತು. ಕಳೆದೆರಡು ವರ್ಷಗಳ ಹಿಂದೆ ಬೀದರ್ ಕೋಟೆಯೊಳಗಿರುವ ಒಳಕೋಟೆಯ ಭವಾನಿ ಮಂದಿರದ ಪಲ್ಲಕಿ ಮೆರವಣಿಗೆ ಸಂದರ್ಭದಲ್ಲಿ ಓಲ್ಡ್ ಸೀಟಿಯಲ್ಲಿರುವ ಹಿಂದುಗಳ ಮನೆಗೆ ಹುಕ್ಕು ದಾಂಧಲೆ ಮಾಡುವುದಾಗಿ ಗುಲ್ಲೆಬ್ಬಿಸಿದಾಗ ನಾವು ಪ್ರತ್ಯುತ್ತರ ನೀಡಲು ಮುಂದೆ ಬಂದ ಬಳಿಕ ಹಿಂಜರಿದಿದ್ದರು. ಈಗಲೂ ಸಹ ಪ್ರತಿಭಟನೆ ನೆಪದಲ್ಲಿ ಕೋಮು ಗಲಭೆ ಸೃಷ್ಟಿಸಬಹುದು. ಆದ ಕಾರಣ ಅವರಿಗೆ ಪ್ರತಿಭಟನೆಗೆ ಅವಕಾಶ ನೀಡಿ ಆದರೆ, ರ್‍ಯಾಲಿಗೆ ಯಾವುದೇ ಕಾರಣ ಅವಕಾಶ ನೀಡಬಾರದೆಂದು ಠಾಕೂರ್ ಮನವಿ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು. ವಕ್ಫ್ ಕಾಯಿದೆ ವಿರೋಧಿಸುವ ನೆಪದಲ್ಲಿ ಪಶ್ಚಿಮ ಬಂಗಾಳ ಸೇರಿದಂತೆ ಬಿಜೆಪಿಯತರ ರಾಜ್ಯಗಳಲ್ಲಿ ವಕ್ಫ್ ಕಾಯಿದೆ ವಿರೋಧಿಸಿ ಹೋರಾಟದ ನೆಪದಲ್ಲಿ ಸಾರ್ವಜನಿಕ ಆಸ್ತಿ, ಪಾಸ್ತಿಗಳನ್ನು ಹಾಳು ಮಾಡುವ ಮೂಲಕ ಬಾಂಗ್ಲಾ ದೇಶ ಸೃಷ್ಟಿಸಲು ಹೊರಡಿದ್ದಾರೆ. ಜಗತ್ತಿನ ಹಿಂದು ಸಂಸ್ಕೃತಿಯನ್ನು ಹಾಲಕು ಮಾಡುವ ಕಿಡಿಗೇಡಿಗಳನ್ನು ಸರ್ಕಾರ ರಕ್ಷಿಸಬಾರದೆಂದು ಠಾ-ಕೂರ್ ಒತ್ತಾಯಿಸಿದ್ದಾರೆ.

# ಏಪ್ರಿಲ್ 24ಕ್ಕೆ ಕಲಬುರಗಿಗೆ ಬಸವ ರಥ:ಬಸವ ಅಭಿಮಾನಿಗಳು ಆಗಮಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.19ಬಾಗಲಕೋಟೆಯ ಕೂಡಲ ಸಂಗಮದಲ್ಲಿ ಇದೇ ಏಪ್ರಿಲ್ 29 ಮತ್ತು 30 ರಂದು ಎರಡು ದಿನಗಳ ಕಾಲ "ಅನುಭವ ಮಂಟಪ-ಬಸವಾದಿ ಶರಣರ ವೈಭವ" ಕಾರ್ಯಕ್ರಮ ಆಯೋಜಿಸಿದ ಪ್ರಯುಕ್ತ ಈ ಬಗ್ಗೆ ನಾಡಿನಾದ್ಯಂತ ವ್ಯಾಪಕ ಪ್ರಚೂರಪಡಿಸಲು ಹೊರಟಿರುವ ರಥಯಾತ್ರೆಯು ಏಪ್ರಿಲ್ 24 ರಂದು ಮಧ್ಯಾಹ್ನ 1 ಗಂಟೆಗೆ ಕಲಬುರಗಿ ನಗರಕ್ಕೆ ಆಗಮಿಸಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ತಿಳಿಸಿದ್ದಾರೆ.

ರಥಕ್ಕೆ ಅಂದು ಕಮಲಾಪುರ ತಾಲೂಕಿನ ಗಡಿಯಲ್ಲಿ ಜಿಲ್ಲೆಗೆ ಬರಮಾಡಿಕೊಂಡ ನಂತರ ಮಧ್ಯಾಹ್ನ 1 ಗಂಟೆಗೆ ಕಲಬುರಗಿ ನಗರದ ಜಗತ್ ವೃತ್ತದಲ್ಲಿ ಜಿಲ್ಲಾಡಳಿತದಿಂದ ಸಂಭ್ರಮದ ಸ್ವಾಗತ ನೀಡಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಬಸವಾದಿ ಶಣರ ಅನುಯಾಯಿಗಳು, ಬಸವ ಅಭಿಮಾನಿಗಳು, ಸಾರ್ವಜನಿಕರು, ಸಂಘ-ಸಂಸ್ಥೆಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ನಂತರ ರಥವು ಜೇವರ್ಗಿ ಮಾರ್ಗವಾಗಿ ವಿಜಯಪುರ ಜಿಲ್ಲೆಗೆ ಬೀಳ್ಕೊಡಲಾಗುತ್ತದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.